07 August 2026 Friday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಾವು ಇನ್ನೊಬ್ಬರ ನಿರ್ಧಾರಕ್ಕೆ ತಲೆ ಬಾಗಲೇ ಬೇಕಂತಿಲ್ಲ, ಆದರೆ ಬೇರೆಯವರ ನಿರ್ಧಾರಕ್ಕೆ ಖಂಡಿತಾ ಗೌರವ ಕೊಡಬೇಕು!

-ಸ್ನೇಹಾ ಆನಂದ್

info.varthaman@gmail.com



ಕುಡಿಯುವ ನೀರು, ಜಾನುವಾರುಗಳ ಮೇವು ಸಮಸ್ಯೆ ಪರಿಹಾರಕ್ಕೆ ಕ್ರಮವಹಿಸಿ — ಪುಟ ಸಂ. 2


ಕುಡಿಯುವ ನೀರಿಗೆ ತೊಂದರೆಯಾಗದಿರಲಿ: ಯತೀಂದ್ರ ಸಿದ್ದರಾಮಯ್ಯ — ಪುಟ ಸಂ. 3


ಮತದಾರರ ಬಗ್ಗೆ ಕಾಂಗ್ರೆಸ್‌ಗೆ ಕಾಳಜಿ: ಕೆಪಿಸಿಸಿ ಉಪಾಧ್ಯಕ್ಷ ವಿ.ಆರ್.ಸುದರ್ಶನ್ — ಪುಟ ಸಂ. 4


9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 244 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಸಚಿವರ ಪೇಮೆಂಟ್ ಆಗಿಲ್ಲವೇ?

### ಖಾತೆ ಹಂಚಿಕೆ ಆಗದ ಬಗ್ಗೆ ಅಶೋಕ್ ಲೇವಡಿ



**ಬೆಂಗಳೂರು:** ನೂತನ ಸಚಿವರ ಪ್ರಮಾಣ ವಚನ ಸ್ವೀಕಾರ ಮುಗಿದು ಮೂರು ದಿನಗಳೇ ಕಳೆದಿವೆ. ಆದರೆ ಖಾತೆಗಳ ಹಂಚಿಕೆಯಾಗಿಲ್ಲ. ಪೇಮೆಂಟ್ ಆಗಿಲ್ಲವೆಂದು ತಡೆ ಹಿಡಿದಿದ್ದೀರೋ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಪ್ರಶ್ನಿಸಿದ್ದಾರೆ.

ಪೇಮೆಂಟ್ ಕೋಟಾ ಸಚಿವರಿಗೆ ಖಾತೆ ಹಂಚಲು ಹೈಕಮಾಂಡ್ ಅನುಮತಿಗಾಗಿ ಕಾಯುತ್ತಿದ್ದೀರೋ ಅಥವಾ ನಿಗದಿಯಾದ ಪೇಮೆಂಟ್ ಇನ್ನೂ 'ಖಾತೆ'ಗೆ ಜಮಾ ಆಗಿಲ್ಲವೆಂದು ತಡೆ ಹಿಡಿದಿದ್ದೀರೋ? ಎಂದು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಡಮ್ಮಿ ಸಿಎಂ, ರಬ್ಬರ್ ಸ್ಟ್ಯಾಂಪ್ ಸಿಎಂ. ದೆಹಲಿ 'ಕಲೆಕ್ಷನ್ ಏಜೆಂಟ್' ರಣದೀಪ್ ಸುರ್ಜೇವಾಲಾ ಸಾಹೇಬರು, ಅಸಮಾಧಾನಗೊಂಡ ಶಾಸಕರ ಮನೆ ಮನೆಗೆ ತೆರಳಿ ತೇಪೆ ಹಚ್ಚುವುದರಲ್ಲಿ ಕುಸಿಯುತ್ತಿರುವ ಸರ್ಕಾರಕ್ಕೆ 'ಪ್ಯಾಚ್ ವರ್ಕ್' ಹಾಕುವುದರಲ್ಲೇ ಬ್ಯುಸಿ ಎಂದು ಲೇವಡಿ ಮಾಡಿದ್ದಾರೆ ಪುಟ 2ಕ್ಕೆ

## ಕೃಷಿ ಅಧಿಕಾರಿ ನೇಮಕ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು:** ವಿವಾದಕ್ಕೆ ಕಾರಣವಾಗಿದ್ದ ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿ ಪರೀಕ್ಷೆಯನ್ನು ಸರ್ಕಾರ ತಾತ್ಕಾಲಿಕವಾಗಿ ಮುಂದೂಡಿದೆ.

ಆಗಸ್ಟ್ 8 ಮತ್ತು 9ರಂದು ನಡೆಯಬೇಕಿದ್ದ ಲಿಖಿತ ಪರೀಕ್ಷೆಯನ್ನು ಮುಂದೂಡುವ ಮೂಲಕ ವಿದ್ಯಾರ್ಥಿಗಳ ಹೋರಾಟಕ್ಕೆ ಜಯ ಸಿಕ್ಕಿದೆ. ಕೃಷಿ ಅಧಿಕಾರಿ ಹುದ್ದೆ ನೇಮಕಾತಿ ನಿಯಮಗಳ ವಿರುದ್ಧ ಮುಷ್ಕರ ನಿರತ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯ ವಿದ್ಯಾರ್ಥಿಗಳನ್ನು ಸಚಿವ ಪ್ರಿಯಾಂಕ್ ಖರ್ಗೆ ಭೇಟಿಯಾಗಿ ಪರೀಕ್ಷೆ ಮುಂದೂಡಿಕೆ ವಿಚಾರ ಪ್ರಕಟಿಸಿದರು.

### ಜಲಾಶಯಗಳ ನೀರಿನ ಮಟ್ಟ

| | |
|---|---|
| **ಕೆ ಆರ್ ಎಸ್** | |
| ಗರಿಷ್ಠ ಮಟ್ಟ | 124.80 ಅಡಿ |
| ಇಂದಿನ ಮಟ್ಟ | 106.17 ಅಡಿ |
| ಒಳಹರಿವು | 8517 ಕ್ಯುಸೆಕ್ |
| ಹೊರ ಹರಿವು | 2034 ಕ್ಯುಸೆಕ್ |
| **ಕಬಿನಿ ಜಲಾಶಯ** | |
| ಗರಿಷ್ಠ ಮಟ್ಟ | 2284 ಅಡಿ |
| ಇಂದಿನ ಮಟ್ಟ | 2281.82 ಅಡಿ |
| ಒಳಹರಿವು | 10797 ಕ್ಯುಸೆಕ್ |
| ಹೊರ ಹರಿವು | 11042 ಕ್ಯುಸೆಕ್ |
| **ಹಾರಂಗಿ ಜಲಾಶಯ** | |
| ಗರಿಷ್ಠ ಮಟ್ಟ | 2859 ಅಡಿ |
| ಇಂದಿನ ಮಟ್ಟ | 2857.92 ಅಡಿ |
| ಒಳಹರಿವು | 6820 ಕ್ಯುಸೆಕ್ |
| ಹೊರ ಹರಿವು | 4000 ಕ್ಯುಸೆಕ್ |
| **ಹೇಮಾವತಿ ಜಲಾಶಯ** | |
| ಗರಿಷ್ಠ ಮಟ್ಟ | 2922 ಅಡಿ |
| ಇಂದಿನ ಮಟ್ಟ. | 2913.36 ಅಡಿ |
| ಒಳಹರಿವು | 5768 ಕ್ಯುಸೆಕ್ |
| ಹೊರಹರಿವು | 500 ಕ್ಯುಸೆಕ್ |

## ಮಾತು ತಪ್ಪಿದ ಸಿದ್ದರಾಮಯ್ಯ

### 3 ಬಾರಿ ಮಾತು ಕೊಟ್ಟಿದ್ದರು: ಬಿ.ಆರ್.ಪಾಟೀಲ್ ಕಿಡಿ

**ಕಲಬುರಗಿ:** ನನಗೆ ಸಚಿವ ಸ್ಥಾನ ನೀಡುವಲ್ಲಿ ಕಲಬುರಗಿ ಜಿಲ್ಲೆಯ ನಾಯಕರೇ ಅಡ್ಡಿಯಾಗಿರುವುದಾಗಿ ಸಿದ್ದರಾಮಯ್ಯ ತಿಳಿಸಿದ್ದಾರೆಂದು ಆಳಂದ ಶಾಸಕ ಬಿ.ಆರ್.ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಕಲಬುರಗಿಯಲ್ಲಿ ಮಾತನಾಡಿದ ಅವರು, ಅದು ಯಾವ ಲೀಡರ್ ಅಂಥ ನನಗೂ ಗೊತ್ತಿಲ್ಲ. ಸಿದ್ದರಾಮಯ್ಯ ಜಾರಿಕೊಳ್ಳಲು ನೆಪ ಮಾತ್ರಕ್ಕೆ ಈ ರೀತಿ ಹೇಳಿದ್ದಾರೋ ಅಥವಾ ಸತ್ಯ ಹೇಳಿದ್ರಾ ಅದು ಸಹ ಗೊತ್ತಿಲ್ಲ ಎಂದು ತಿಳಿಸಿದರು.

ನಾನು ಸುಮೋಟೊ ಮಂತ್ರಿ ಮಾಡಿ ಅಂತಾ ಎಲ್ಲೂ ಹೋಗಿಲ್ಲ. ಸಿದ್ದರಾಮಯ್ಯ ಚುನಾವಣೆ ಸಂದರ್ಭದಲ್ಲಿ, ನನ್ನ ಗೆಳೆಯನನ್ನು ಆಯ್ಕೆ ಮಾಡಿ ಕಳುಹಿಸಿ. ನಾನು ಸಚಿವನನ್ನಾಗಿ ಮಾಡಿ ಕಳುಹಿಸುತ್ತೇನೆ ಅಂತಾ ಜನತೆಗೆ ಹೇಳಿದ್ದರು. ನನಗೆ ಬೇಜಾರ್ ಆಗಿದ್ದು ಏನಂದ್ರೆ, ಸಿದ್ದರಾಮಯ್ಯ ಮಾತು ಕೊಟ್ಟು ಮಾತು ತಪ್ಪಿದರು. ಮೂರು ಬಾರಿ ಕರೆದು ಮಂತ್ರಿ ಮಾಡುತ್ತೇನೆ ಅಂತಾ ಹೇಳಿದ್ದರು. ಆದರೆ, ಮಾಡಿಲ್ಲ ಎಂದು ಪಾಟೀಲ್ ಅಸಮಾಧಾನ ಹೊರಹಾಕಿದರು.

ಸದ್ಯ 140 ಜನ ಶಾಸಕರು ಇದ್ದಾರೆ. ಹೀಗಾಗಿ ಅವರು ನನ್ನನ್ನು ಕರೆದು ಮಾತಾನಾಡುವ ಸಂದರ್ಭವೇ ಇಲ್ಲ. ಇನ್ನು 2028ರ ಚುನಾವಣೆ ಸ್ಪರ್ಧೆ ವಿಚಾರದ ಬಗ್ಗೆ ಮಾತನಾಡಿದ ಬಿ.ಆರ್. ಪಾಟೀಲ್, ಕಾದು ನೋಡಿ ಎಂ ದಷ್ಟೇ ಪ್ರತಿಕ್ರಿಯಿಸಿದರು.

## 14ರಂದು ಪರಿಷತ್ ಸಭಾಪತಿ ಸ್ಥಾನಕ್ಕೆ ರಾಜೀನಾಮೆ: ಹೊರಟ್ಟಿ

**ಬೆಂಗಳೂರು:** ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಆಗಸ್ಟ್ 14ರಂದು ಅಧಿಕೃತವಾಗಿ ರಾಜೀನಾಮೆ ಸಲ್ಲಿಸುವುದಾಗಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ವಿಧಾನ ಮಂಡಲ ಅಧಿವೇಶನ ಆಗಸ್ಟ್ 13ರಿಂದ ಪ್ರಾರಂಭವಾಗಲಿದೆ. ಮೊದಲ ದಿನ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ಕಲಾಪ ನಡೆಯಲಿದೆ. ಆಗಸ್ಟ್ 14ರಂದು ಅಧಿವೇಶನದ ಎರಡನೇ ದಿನ ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ ನೆರವೇರಿದ ತಕ್ಷಣವೇ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಹೊರಟ್ಟಿ ತಿಳಿಸಿದರು.



ಸಾಂವಿಧಾನಿಕ ಹುದ್ದೆಗೆ ಈ ರೀತಿ ಅಗೌರವ ತರುವುದು ಹಾಗೂ ಹೈಜಾಕ್ ಮಾಡುವುದು ಸರಿಯಲ್ಲ. ಹೈಕಮಾಂಡ್ ಆದೇಶವಿದೆ. ಹೀಗಾಗಿ ರಾಜೀನಾಮೆ ಕೊಡಿ ಎಂದು ಸಿಎಂ ಹೇಳಿದರು. ಸಿದ್ದರಾಮಯ್ಯನವರು ಕೂಡ ನಾನು ಯಾರ ಬಳಿಯೂ ಮಾತನಾಡುವುದಿಲ್ಲ ಎಂದು ಹೇಳಿದ್ದರು. ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರವೂ ನಾನು ಸದನದಲ್ಲಿ ಸಾಮಾನ್ಯ ಸದಸ್ಯನಾಗಿ ಭಾಗವಹಿಸುತ್ತೇನೆ ಎಂದು ತಿಳಿಸಿದರು.

ನನ್ನ ಮೇಲೆ ಈ ರೀತಿ ಅವಿಶ್ವಾಸ ವ್ಯಕ್ತಪಡಿಸುವ ಮಾತುಗಳನ್ನಾಡಿರುವುದು ನನ್ನ ಮನಸ್ಸಿಗೆ ತೀವ್ರ ಘಾಸಿ ಉಂಟು ಮಾಡಿದೆ. ಇಂತಹ ವಾತಾವರಣದಲ್ಲಿ ಮುಂದುವರಿಯಲು ನನಗೆ ಇಷ್ಟವಿಲ್ಲ, ಆದ್ದರಿಂದಲೇ ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೊರಟ್ಟಿ ಹೇಳಿದರು. ಇದು ಪುಟ 2ಕ್ಕೆ

## ದರ್ಶನ್‌ಗೆ 'ಮಾಫಿ ಸಾಕ್ಷಿ' ಸಂಕಷ್ಟ

### ಪ್ರದೋಷ್ ಬೆನ್ನಲ್ಲೇ ಮತ್ತಿಬ್ಬರು 'ಅಪ್ರೂವರ್'?



**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಮತ್ತೊಂದು ಕಾನೂನು ಸಂಕಷ್ಟ ಎದುರಾಗಿದೆ. ಕೊಲೆ ಪ್ರಕರಣದ 14ನೇ ಆರೋಪಿ (ಎ–14) ಪ್ರದೋಷ್ ತನ್ನನ್ನು 'ಮಾಫಿ ಸಾಕ್ಷಿ'ಯಾಗಿ ಪರಿಗಣಿಸುವಂತೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಈ ಬೆನ್ನಲ್ಲೇ ಮತ್ತೆ ಇಬ್ಬರು ಕೋರ್ಟ್ ನಲ್ಲಿ ಸತ್ಯ ಹೇಳಲು ಮುಂದಾಗಿದ್ದಾರೆ.

ಕೊಲೆ ಪ್ರಕರಣದ ಸತ್ಯಾಂಶಗಳನ್ನು ನ್ಯಾಯಾಲಯದ ಮುಂದೆ ಬಹಿರಂಗಪಡಿಸಲು ಸಿದ್ಧನಿದ್ದೇನೆ ಎಂದು ಪ್ರದೋಷ್ ಈಗಾಗಲೇ ಮಾಫಿ ಸಾಕ್ಷಿಗೆ ಅರ್ಜಿ ಸಲ್ಲಿಸಿದ್ದಾರೆ. ವಿಚಾರಣೆ ಸಹ ಆರಂಭವಾಗಿದೆ. ಇದೀಗ ಮತ್ತಿಬ್ಬರು ಮಾಫಿ ಸಾಕ್ಷಿಯಾಗಲು ನಿರ್ಧರಿಸಿ ಅರ್ಜಿ ಸಲ್ಲಿಸಲು ಮುಂದಾಗಿದ್ದು, ಬೇಲ್ ಸಿಗದೆ ಜೈಲಿನಲ್ಲಿ ಪರದಾಡುತ್ತಿರುವ ನಟ ದರ್ಶನ್‌ಗೆ ಮತ್ತಷ್ಟು ಸಂಕಷ್ಟ ತಂದಿಟ್ಟಿದೆ.

ಪ್ರದೋಷ್, ತನ್ನನ್ನು ಮಾಫಿ ಸಾಕ್ಷಿ (ಅಪ್ರೂವರ್) ಆಗಿ ಪರಿಗಣಿಸುವಂತೆ ಕೋರಿ 59ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾನೆ. ಈ ಅರ್ಜಿಯ ವಿಚಾರಣೆ ಗುರುವಾರ ಆರಂಭವಾಗಿದೆ. ಪರಪ್ಪನ ಅಗ್ರಹಾರ ಜೈಲಿನಿಂದಲೇ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರದೋಷ್ ನನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಯಿತು. ವಿಚಾರಣೆ ವೇಳೆ ಪ್ರದೋಷ್ ಪರ ವಕೀಲ ದಿವಾಕರ್, ಮೊದಲು ನಮ್ಮ ಕಕ್ಷಿದಾರರ ಹೇಳಿಕೆಯನ್ನು ದಾಖಲಿಸಿಕೊಳ್ಳಲಿ. ಆ ನಂತರ ಪ್ರಾಸಿಕ್ಯೂಷನ್ ಈ ಕುರಿತು ನಿರ್ಧಾರ ತೆಗೆದುಕೊಳ್ಳಲಿ ಎಂದು ನ್ಯಾಯಪೀಠಕ್ಕೆ ಮನವಿ ಮಾಡಿದರು. ವಾದ ಪ್ರತಿವಾದ ಆಲಿಸಿದ ಪುಟ 2ಕ್ಕೆ

# ಬಲಗೈ ಹೊಸಮುಖಕ್ಕೆ ಆದ್ಯತೆ

## ಎಚ್‌ಸಿಎಂ ಹೆಸರಿಗೆ ಹೈಕಮಾಂಡ್ ಒಪ್ಪಲಿಲ್ಲ: ಸಚಿವ ಯತೀಂದ್ರ

**ಮೈಸೂರು:** ಡಾ.ಎಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ಕೊಡುವಂತೆ ಸಿದ್ದರಾಮಯ್ಯ ಶಿಫಾರಸು ಮಾಡಿದ್ದರು. ದಲಿತ ಬಲಗೈ ಸಮುದಾಯದಲ್ಲಿ ಹೊಸ ಮುಖಕ್ಕೆ ಅವಕಾಶ ನೀಡುವ ಸಲುವಾಗಿ ಹೈಕಮಾಂಡ್ ಪಿ.ಎಂ. ನರೇಂದ್ರಸ್ವಾಮಿ ಅವರನ್ನು ಆಯ್ಕೆ ಮಾಡಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.



ನಗರದಲ್ಲಿ ಗುರುವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ತಂದೆ ಶಿಫಾರಸು ಮಾಡಿದವರಲ್ಲಿ ಬಹುತೇಕರಿಗೆ ಸ್ಥಾನ ಸಿಕ್ಕಿದೆ. ಅವರು ನೀಡಿದ್ದ ಎರಡು ಪಟ್ಟಿಯಲ್ಲೂ ಮಹದೇವಪ್ಪ ಹೆಸರಿತ್ತಾದರೂ ಹೈಕಮಾಂಡ್ ಒಪ್ಪಿಲ್ಲ ಎಂದರು.

ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ಕೊಡುವಂತೆ ಕೇಳಿರಲಿಲ್ಲ. ಗಾಯತ್ರಿ ಅವರು ಸಚಿವರಾಗದ ವಿಚಾರದಲ್ಲಿ ತಂದೆಯ ಪಾತ್ರವಿಲ್ಲ. ತನ್ವೀರ್ ಸೇಠ್ ಅವರಿಗೆ ಸಚಿವ ಸ್ಥಾನ ತಪ್ಪಿದ ಹಿಂದೆ ಅವರ ಕೈವಾಡವಿಲ್ಲ ಎಂದು ಹೇಳಿದರು.

ಈ ಸಚಿವ ಸಂಪುಟದ ಬಗ್ಗೆ ಸಿದ್ದರಾಮಯ್ಯ ಅವರಿಗೆ ಯಾವ ಅಸಮಾಧಾನವೂ ಇಲ್ಲ. ಕೆಲವೊಮ್ಮೆ ಕೆಲವು ಜಾತಿಗಳಿಗೆ ಅವಕಾಶ ತಪ್ಪುತ್ತದೆ. ಅದನ್ನು ಬೇರೆ ರೀತಿಯಲ್ಲಿ ಸರಿದೂಗಿಸಲಾಗುತ್ತದೆ ಎಂದರು.

ತಂದೆ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಕಾರಣದಿಂದ ನನಗೆ ಸಚಿವ ಸ್ಥಾನ ನೀಡಲಾಗಿದೆ. ಇಲ್ಲದಿದ್ದರೆ ಸಹಜವಾಗಿಯೇ ನಮ್ಮ ಸಮುದಾಯಕ್ಕೆ ಬೇಸರವಾಗುತ್ತಿತ್ತು. ಹೀಗಾಗಿ, ನನಗೆ ಸ್ಥಾನ ಕೊಟ್ಟಿದ್ದರಲ್ಲಿ ಯಾವುದೇ ತಪ್ಪಿಲ್ಲ. ಹಿರಿಯರಾದ ಮಹದೇವಪ್ಪ ಹಾಗೂ ತನ್ವೀರ್ ಸೇಠ್ ಅವರನ್ನು ಭೇಟಿಯಾಗಿ ಮಾತನಾಡುತ್ತೇನೆ ಎಂದು ಪ್ರತಿಕ್ರಿಯಿಸಿದರು.

ತನ್ವೀರ್‌ಗೆ ಸಚಿವ ಸ್ಥಾನ ತಪ್ಪಲು ಸಿದ್ದರಾಮಯ್ಯ ಕಾರಣ ಎಂಬ ವಿಶ್ವನಾಥ್ ಹೇಳಿಕೆಗೆ ಪ್ರತಿಕ್ರಿಯಿಸಿ, ಅವರು ಏನೇನೋ ಹೇಳುತ್ತಾರೆ. ಸಾಕ್ಷಿ ಆಧಾರವಿಲ್ಲದೇ

### ಹಿಂದೂ ರಾಷ್ಟ್ರವಾದರೆ ಮತ್ತೆ ಜಾತಿ ವ್ಯವಸ್ಥೆ

ಈ ದೇಶ ಹಿಂದೂ ರಾಷ್ಟವಾದರೆ ಜಾತಿ ವ್ಯವಸ್ಥೆ ಮತ್ತೆ ಬರುತ್ತದೆ ಎಂದು ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರು ಈ ದೇಶ ಹಿಂದೂ ರಾಷ್ಟ ಆಗಬಾರದೆ ಎಂಬ ಪ್ರಶ್ನೆಗೆ, ಈ ದೇಶ ಹಿಂದೂ ರಾಷ್ಟವಾದರೆ ಹಿಂದುತ್ವವಾದಿಗಳು ಮನುಸ್ಮೃತಿವಾದಿಗಳಲ್ಲಿರುವ ಸಾಮಾಜಿಕ ವ್ಯವಸ್ಥೆಯನ್ನು ವಾಪಸ್ ತರುತ್ತಾರೆ. ಅದು ಹಿಂದುಳಿದ ವರ್ಗಗಳ ಜನರನ್ನು ಶೋಷಣೆ ಮಾಡುವ ವ್ಯವಸ್ಥೆ. ಆ ರೀತಿ ಶೋಷಣೆಯಾದರೆ ಹಿಂದುಳಿದ, ದಲಿತ

## ನಾನೇ ಮುಖ್ಯಮಂತ್ರಿ ಇದ್ದಂತೆ!, ಮನೆಮಗ

### ಡಿ.ಕೆ.ಶಿವಕುಮಾರ್ ಮನೆಮಗ: ಶಿವಗಂಗಾ ಬಸವರಾಜ್



**ದಾವಣಗೆರೆ:** ನಾನು ಡಿ.ಕೆ.ಶಿವಕುಮಾರ್ ಮನೆಮಗ, ಶಿವನ ಮುಂದೆ ಇರುವ ಬಸವ ನಾನು. ನಾನೇ ಮುಖ್ಯಮಂತ್ರಿ ಇದ್ದಂತೆ. ಮನೆ ಮಗನಿಗೆ ಯಾವಾಗಲೂ ಆಶೀರ್ವಾದ ಇದ್ದೇ ಇರುತ್ತದೆ ಎಂದು ಶಾಸಕ ಶಿವಗಂಗಾ ಬಸವರಾಜ್ ಹೇಳಿದರು.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪಕ್ಷದಲ್ಲಿ ಐದಾರು ಬಾರಿ ಗೆದ್ದ ಹಿರಿಯ ಶಾಸಕರು ಇದ್ದಾರೆ. ನನಗೆ ಮಂತ್ರಿ ಸ್ಥಾನ ಸಿಗುವ ನಿರೀಕ್ಷೆ ಇತ್ತು. ಆದರೆ ಸಿಕ್ಕಿಲ್ಲ. ಮುಂದೆ ಸಾಕಷ್ಟು ಅವಕಾಶಗಳಿವೆ. ಕಾದು ನೋಡೋಣ. ಈಗ ಅಭಿವೃದ್ಧಿ ಬಗ್ಗೆ ಮಾತನಾಡಬೇಕಿದೆ ಎಂದರು.

ಭ್ರಷ್ಟಾಚಾರ ಆರೋಪ ಇದ್ದರೂ ನಾಗೇಂದ್ರಗೆ ಸಚಿವ ಸ್ಥಾನ ನೀಡಿದ್ದಾರೆ ಎಂಬ ವಿಪಕ್ಷಗಳ ಆರೋಪಕ್ಕೆ, ಭ್ರಷ್ಟಾಚಾರ ಆರೋಪ ಪುಟ 2ಕ್ಕೆ

## ಛಲವಾದಿ ದೂರು ಕೊಡಲಿ: ಪ್ರಿಯಾಂಕ್ ಖರ್ಗೆ ತಿರುಗೇಟು

**ಬೆಂಗಳೂರು:** ಮಾಜಿ ಸಚಿವ ತಿಮ್ಮಾಪುರ್–ನಂಜಯ್ಯಮಠ ಆಡಿಯೋ ವಿಚಾರವಾಗಿ ಛಲವಾದಿ ನಾರಾಯಣಸ್ವಾಮಿ ದೂರು ಕೊಡಲಿ ಅಂತ ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.



ಆಡಿಯೋ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ತಿಮ್ಮಾಪುರ್ ಮತ್ತು ನಂಜಯ್ಯಮಠ ಸ್ಪಷ್ಟವಾಗಿ ಹೇಳಿದ್ದಾರೆ. ಆಡಿಯೋ ಛಲವಾದಿ ನಾರಾಯಣಸ್ವಾಮಿ ಅವರ ಬಳಿ ಇದೆ. ನಾನೇ ಈಗ ಗೃಹ ಸಚಿವ. ನನಗೆ ದೂರು ಕೊಡಿ. ಫಾರೆನ್ಸಿಕ್ ಲ್ಯಾಬ್‌ಗೆ ಕಳಿಸಿ ರಿಪೋರ್ಟ್ ತರಿಸುತ್ತೇನೆ. ನಿಮಗೆ ಎಲ್ಲಿಂದ ಬಂತು ಅಂತ ನೀವು ಹೇಳಿ, ಅವರು ಮಾತಾಡಿದ್ದಾರಾ ಇಲ್ಲವಾ ನಾನು ಹೇಳ್ತೀನಿ ಎಂದು ಹೇಳಿದರು. ಪುಟ 2ಕ್ಕೆ

## ಬರ ಪರಿಸ್ಥಿತಿ ಎದುರಿಸಲು ಅಧಿಕಾರಿಗಳಿಗೆ ಸೂಚನೆ

**ಮೈಸೂರು:** ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಅಗತ್ಯವಿರುವ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳಬೇಕು. ಜನ, ಜಾನುವಾರುಗೆ ಕುಡಿಯುವ ನೀರು ಪೂರೈಕೆಯಲ್ಲಿ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಸೂಚಿಸಿದರು.



ನಗರದ ಮಹಾನಗರಪಾಲಿಕೆ ವಲಯ ಕಚೇರಿಯಲ್ಲಿ ಗುರುವಾರ ನಡೆದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಾರ್ವಜನಿಕರು ನೀರಿನ ಸಮಸ್ಯೆ ಎದುರಿಸದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಸರ್ಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳು ಮತ್ತು ಪರಿಹಾರ ಫಲಾನುಭವಿಗಳಿಗೆ ಪುಟ 2ಕ್ಕೆ

## ಡಿಜಿಟಲ್ ಪಾವತಿಗೆ ಶುಲ್ಕ: ಮಸೂದೆ ಅಂಗೀಕಾರ

**ನವದೆಹಲಿ:** ಏಕೀಕೃತ ಪಾವತಿ ವ್ಯವಸ್ಥೆ (ಯುಪಿಐ) ಸೇರಿದಂತೆ ಡಿಜಿಟಲ್ ಪಾವತಿ ವ್ಯವಸ್ಥೆಗಳ ಮೇಲೆ ಭವಿಷ್ಯದಲ್ಲಿ ಶುಲ್ಕ ವಿಧಿಸಲು ಕೇಂದ್ರ ಸರ್ಕಾರಕ್ಕೆ ಕಾನೂನುಬದ್ಧ ಅಧಿಕಾರ ನೀಡುವ ಮಹತ್ವದ ತಿದ್ದುಪಡಿ ಮಸೂದೆಯನ್ನು ಲೋಕಸಭೆ ಗುರುವಾರ ಅಂಗೀಕರಿಸಿದೆ. ಪುಟ 2ಕ್ಕೆ




# ಪಿಡಿಒಗಳ ವಿರುದ್ಧ ಕಠಿಣ ಕ್ರಮ

## ವಿಬಿ ರಾಮ್ ಜಿ ನಿರ್ಲಕ್ಷ್ಯ: ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ

**ಬೆಂಗಳೂರು:** ಮನ್ರೇಗಾ ಬದಲಿಗೆ ಜಾರಿಯಾಗಿರುವ ವಿಬಿ ರಾಮ್ ಜಿಯಲ್ಲಿ ಉದ್ಯೋಗ ನೀಡದೆ, ಕೆಲಸ ಸೃಜಿಸದೆ ನಿರ್ಲಕ್ಷ್ಯ ತೋರಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಡಕ್ ಎಚ್ಚರಿಕೆ ನೀಡಿದರು.



ವಿಕಾಸಸೌಧದಲ್ಲಿ ಗುರುವಾರ ಇಲಾಖೆ ಉನ್ನತಾಧಿಕಾರಿಗಳ ಸಭೆ ನಡೆಸಿದ ಅವರು, 2025ರ ಜುಲೈ ತಿಂಗಳಲ್ಲಿ ಮನ್ರೇಗಾ ಅಡಿ ಉದ್ಯೋಗ ನೀಡಿ, ಮಾನವ ದಿನ ಸೃಜಿಸಿದ್ದ ಪಂಚಾಯಿತಿಗಳಲ್ಲಿ ಈ ವರ್ಷ ಜುಲೈನಲ್ಲಿ ಒಬ್ಬರಿಗೂ ಉದ್ಯೋಗ ನೀಡದಿದ್ದರೆ ಅಂತಹವರಿಗೆ ನೋಟಿಸ್ ಜಾರಿ ಮಾಡಿ ಎಂದು ಸೂಚಿಸಿದರು.

ಬೆಂಗಳೂರು ಸುತ್ತಮುತ್ತ 382 ಕೂಲಿಗೆ ಜನರು ಮುಂದೆ ಬರುವುದಿಲ್ಲ. ಆದರೆ, ಗ್ರಾಮೀಣ ಪ್ರದೇಶದ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಗ್ರಾಮೀಣ ಅರ್ಹ ಫಲಾನುಭವಿಗಳಿಗೆ ಕೆಲಸ ನೀಡದೆ ಕರ್ತವ್ಯಲೋಪ ಎಸಗಿದಲ್ಲಿ ಕಾರಣ ಕೇಳಿ ನೋಟಿಸ್ ನೀಡಿ, ಉತ್ತರ ಪಡೆಯಿರಿ. ನಿರ್ಲಕ್ಷ್ಯ, ಉದಾಸೀನತೆ ಸಾಬೀತಾದಲ್ಲಿ ಅಮಾನತು ಮಾಡುವಂತೆ ಕಾರ್ಯದರ್ಶಿ ಮತ್ತು ಆಯುಕ್ತರಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ಡಿ.ರಂದೀಪ್, ಆಯುಕ್ತರಾದ ದಿವ್ಯಾ ಪ್ರಭು, ಫೌಜಿಯಾ ತರನ್ನುಂ ಮತ್ತಿತರರು ಉಪಸ್ಥಿತರಿದ್ದರು.

### ಪ್ರತಿ ದಿನ 5 ಲಕ್ಷ ಮಾನವದಿನ ಸೃಜನೆ

ವಿಬಿಜಿ ರಾಮ್ ಜಿಯಡಿ ಪ್ರತಿ ದಿನ 5 ಲಕ್ಷ ಮಾನವದಿನ ಸೃಜನೆ ಆಗುವವರೆಗೆ ಕಾರ್ಯದರ್ಶಿಗಳು, ಆಯುಕ್ತರು ಎಲ್ಲ ಜಿಲ್ಲಾ ಪಂಚಾಯತಿಗಳ ಸಿಇಒಗಳೊಂದಿಗೆ ನಿತ್ಯ ವರ್ಚುವಲ್ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಬೇಕು. ಅದೇ ರೀತಿ ಸಿಇಒಗಳು ಇ.ಒ, ಪಿಡಿಒಗಳೊಂದಿಗೆ ಸಭೆ ನಡೆಸಿ ಪ್ರಗತಿ ಪರಿಶೀಲಿಸಬೇಕು ಎಂದು ಸೂಚಿಸಿದರು.

# ಆಸ್ತಿ ವಿವರ ಸಲ್ಲಿಕೆಗೂ ಆನ್‌ಲೈನ್

## ರಾಜ್ಯ ಸರ್ಕಾರಿ ನೌಕರರ ಕಾರ್ಯಕ್ಷಮತೆ ಮೌಲ್ಯಮಾಪನ ಜಾರಿ

**ಬೆಂಗಳೂರು:** ರಾಜ್ಯ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಇನ್ನು ಮುಂದೆ ವಾರ್ಷಿಕ ಕಾರ್ಯಕ್ಷಮತೆ ಮೌಲ್ಯಮಾಪನ ವರದಿ (ಎಪಿಎಆರ್) ಮತ್ತು ಸ್ಥಿರಾಸ್ತಿ ವಿವರಗಳನ್ನು (ಐಪಿಆರ್) ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು ಎಂದು ರಾಜ್ಯ ಸರ್ಕಾರ ಆದೇಶಿಸಿದೆ.



ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಹೊಸ ಆದೇಶದ ಪ್ರಕಾರ, 2026ರ ಆಗಸ್ಟ್ 20ರಿಂದ ಆನ್‌ಲೈನ್ ಮೂಲಕವೇ ಎಪಿಎಆರ್ ಹಾಗೂ ಐಪಿಆರ್ ಸಲ್ಲಿಕೆ ಮಾಡಬೇಕು.

ಡಿಪಿಎಆರ್ ಅಧಿಕಾರಿಗಳ ಪ್ರಕಾರ, ಇದುವರೆಗೆ ಈ ಪ್ರಕ್ರಿಯೆಯನ್ನು ಕೈಬರಹದ (ಮ್ಯಾನುಯಲ್) ಮೂಲಕ ನಡೆಸಲಾಗುತ್ತಿತ್ತು. ಅದು ಸಮಯ ತೆಗೆದುಕೊಳ್ಳುವ ಸಂಕೀರ್ಣ ಪ್ರಕ್ರಿಯೆಯಾಗಿತ್ತು. ಈಗ ಡಿಜಿಟಲ್ ವ್ಯವಸ್ಥೆ ಜಾರಿಯಾಗಿರುವುದರಿಂದ ಕಡಿಮೆ ಸಮಯದಲ್ಲಿ ವಿವರಗಳನ್ನು ಸಲ್ಲಿಸಲು ಸಾಧ್ಯವಾಗಲಿದೆ.

ಅಧಿಕಾರಿಗಳು ಅಥವಾ ನೌಕರರು ಸಲ್ಲಿಸುವ ಕಾರ್ಯಕ್ಷಮತೆ ವರದಿ ಹಾಗೂ ಆಸ್ತಿ–ಹೊಣೆಗಾರಿಕೆಗಳ ವಿವರಗಳನ್ನು ಇ–ಪಿಎಆರ್ ವ್ಯವಸ್ಥೆ ಸ್ವೀಕರಿಸಲಿದೆ. ಬಳಿಕ ಸಂಬಂಧಿತ ಇಲಾಖೆ ಅವುಗಳನ್ನು ಪರಿಶೀಲಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಪ್ರಕಾರ, ಆಸ್ತಿ ಮತ್ತು ಹೊಣೆಗಾರಿಕೆಗಳ ಘೋಷಣೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈ ವ್ಯವಸ್ಥೆಯನ್ನು ಈಗಾಗಲೇ ಐಎಎಸ್, ಐಪಿಎಸ್ ಮತ್ತು ಐಎಫ್‌ಎಸ್ ಅಧಿಕಾರಿಗಳು ಸಲ್ಲಿಸುತ್ತಿರುವ ಮಾದರಿಯಲ್ಲಿಯೇ ರಾಷ್ಟ್ರೀಯ ಮಾಹಿತಿ ವಿಜ್ಞಾನ ಕೇಂದ್ರ ಅಭಿವೃದ್ಧಿಪಡಿಸಿದೆ.

ಸರ್ಕಾರದ 1994ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿಯೇ ಆಸ್ತಿ ವಿವರಗಳನ್ನು ಸಲ್ಲಿಸಬೇಕಾಗುತ್ತದೆ. ಆದರೆ, ಸಲ್ಲಿಕೆ ಮಾತ್ರ ಆನ್‌ಲೈನ್ ಪುಟ 2ಕ್ಕೆ

# ಎಸ್ಐಆರ್ ಶೇ.99.94ರಷ್ಟು ಪೂರ್ಣ

## 2 ದಿನದಲ್ಲಿ ಎನ್ಯುಮರೇಷನ್ ನಮೂನೆ ನೀಡುವಂತೆ ಜಿಲ್ಲಾಧಿಕಾರಿ ಕರೆ

ರಾಮನಗರ: ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯ ಶೇ.99.94ರಷ್ಟು ಪೂರ್ಣಗೊಂಡಿದ್ದು, ಬಾಕಿ ಉಳಿದ 518 ಮತದಾರರು ತಮ್ಮ ಎನ್ಯುಮರೇಷನ್ ಅರ್ಜಿ ನಮೂನೆಯನ್ನು ಇದೇ ಆ.8 ರೊಳಗೆ ವಾಪಸ್ ನೀಡುವಂತೆ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಕರೆ ನೀಡಿದರು.

ನಗರದ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.



### ಆ.17ರಂದು ಕರಡು ಪಟ್ಟಿ ಪ್ರಕಟ

ಆ.17ರಂದು ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಾಗುವುದು ಹಾಗೂ ಅಂದಿನಿಂದ ಸೆಪ್ಟೆಂಬರ್ 16ರ ವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ, ಈ ಹಂತದಲ್ಲಿ ಮತದಾರರ ಹೆಸರು ಸೇರ್ಪಡೆಗೊಳಿಸಲು ಅಥವಾ ತೆಗೆದುಹಾಕಲು ಅವಕಾಶ ಕಲ್ಪಿಸಲಾಗಿದೆ ಈ ಸಂದರ್ಭದಲ್ಲಿ ಅರ್ಜಿ ಸಲ್ಲಿಸಿದವರಿಗೆ ನೋಟಿಸ್ ನೀಡಿ ಮುಂದಿನ ಪ್ರಕ್ರಿಯೆ ಜರುಗಿಸಲಾಗುವುದು, ಅಕ್ಟೋಬರ್ 19ಕ್ಕೆ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದವರು ತಿಳಿಸಿದರು.

### ಆಗಸ್ಟ್ 8, ಕೊನೆ ದಿನ

ಜಿಲ್ಲೆಯಲ್ಲಿ 518 ವಾಪಸ್ ಬರಬೇಕಾದ ಅರ್ಜಿಗಳನ್ನು ಕೂಡಲೇ ಸ್ಥಳೀಯ ಬಿ ಎಲ್ ಒಗಳಿಗೆ ನೀಡಬಹುದಾಗಿದೆ ಆ ಬಿಎಲ್ಒಗಳು ಅವರ ಮೊಬೈಲ್ ನಂಬರನ್ನು ನೀಡಿದ್ದು ಅವರನ್ನು ಸಂಪರ್ಕಿಸಿ ಅರ್ಜಿ ನಮೂನೆ ನೀಡಬಹುದು ಅಥವಾ ಬಿ ಎಲ್ಎ ಅವರಿಗಾದರೂ ನೀಡಬಹುದಾಗಿದೆ, ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಯಾರೊಬ್ಬರೂ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೊಳಿಯಬಾರದು ಎಂಬುದೇ ಜಿಲ್ಲಾಡಳಿತದ ಆಶಯ ಎಂದು ಡಿಸಿಯವರು ಮನವಿ ಮಾಡಿದರು.ಎನ್ಯುಮರೇಷನ್ ನಮೂನೆಯನ್ನು ವಾಪಸ್ ನೀಡಲು ಆಗಸ್ಟ್ 8 ಕೊನೆಯ ದಿನವಾಗಿದ್ದು, ಆಗಸ್ಟ್ 8ರ ಮಧ್ಯರಾತ್ರಿ ಈ ಕರಡು ಪಟ್ಟಿಯನ್ನು ಫ್ರೀಜ್ ಮಾಡಲಾಗುತ್ತದೆ, ನಂತರದಲ್ಲಿ ಎನ್ಯೂಮರೇಷನ್ ನಮೂನೆಯನ್ನು ಸ್ವೀಕರಿಸಲು ಅವಕಾಶವಿರುವುದಿಲ್ಲ ಎಂದು ಅವರು ತಿಳಿಸಿದರು.

### ಶೇ 11.87

ಜಿಲ್ಲೆಯಲ್ಲಿ 9,38,586 ಮತದಾರರಿದ್ದು ಅವರೆಲ್ಲರಿಗೂ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್ಐಆರ್) ಸಂಬಂಧಿಸಿದಂತೆ ಎನ್ಯುಮರೇಷನ್ ಅರ್ಜಿ ನಮೂನೆಯನ್ನು ವಿತರಿಸಲಾಗಿದೆ, ಆ ಪೈಕಿ 8,26,620 ಮತದಾರರು ತಮ್ಮ ಎನ್ಯುಮರೇಷನ್ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಸಲ್ಲಿಸುವ ಮೂಲಕ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಖಚಿತ ಪಡಿಸಿಕೊಂಡಿದ್ದಾರೆ. 1,11,448 ಅಂದರೆ ಶೇ.11.87ರಷ್ಟು ಮತದಾರರು ಎಎಸ್ಡಿಡಿಓ (ASDDO-Absent, Shifted, Duplicate, Dead, and Others) ಪಟ್ಟಿಯಲ್ಲಿ ಗುರುತಿಸಿಕೊಂಡಿರುತ್ತಾರೆ, ಅಂದರೆ ಆ ಮತದಾರರು ಮೃತಪಟ್ಟವರು, ಗೈರಾದವರು, ಶಾಶ್ವತವಾಗಿ ಸ್ಥಳಾಂತರಗೊಂಡವರು, ಎರಡು ಕಡೆ ಮತದಾರರ ಹೆಸರಿದೆ ಎಂದು ತಿಳಿಸಿದವರಾಗಿರುತ್ತಾರೆ, ಉಳಿದಂತೆ ಜಿಲ್ಲೆಯಲ್ಲಿ 518 ಮತದಾರರ ಎನ್ಯುಮರೇಷನ್ ಅರ್ಜಿ ನಮೂನೆಗಳು ವಾಪಸ್ ಬರಬೇಕಿದೆ, ಇನ್ನೆರಡು ದಿನದಲ್ಲಿ ಅವರೆಲ್ಲರೂ ನಮೂನೆಯನ್ನು ಹಿಂತಿರುಗಿಸುವಂತೆ ಜಿಲ್ಲಾಧಿಕಾರಿಯವರು ಕೋರಿದರು. ಎಎಸ್ಡಿಡಿಓ ಪಟ್ಟಿಯಲ್ಲಿ ಮೃತರಾದವರು 33,000, ಶಾಶ್ವತವಾಗಿ ಸ್ಥಳಾಂತರಗೊಂಡವರು 47,000, ಎರಡು ಕಡೆ ಹೆಸರಿದೆ ಎಂದವರು 15,000 ಹಾಗೂ ಗೈರಾದವರು 13,000 ಸೇರಿದಂತೆ ಒಟ್ಟು 1,11,448 ಜನರಿದ್ದಾರೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

# ಕುಡಿಯುವ ನೀರು, ಜಾನುವಾರುಗಳ ಮೇವು ಸಮಸ್ಯೆ ಪರಿಹಾರಕ್ಕೆ ಕ್ರಮವಹಿಸಿ

## ಬರ ಪರಿಸ್ಥಿತಿ, ಅತಿವೃಷ್ಟಿ ನಿರ್ವಹಣೆ ಕುರಿತ ಜಿಲ್ಲಾ ಉಸ್ತುವಾರಿ ಸಚಿವ ಸಿ. ಪುಟ್ಟರಂಗಶೆಟ್ಟಿ ಸೂಚನೆ

ಚಾಮರಾಜನಗರ: ಜಿಲ್ಲೆಯಲ್ಲಿ ಪ್ರಸ್ತುತ ತಲೆದೋರಿರುವ ಕುಡಿಯುವ ನೀರಿನ ಅಭಾವ ಹಾಗೂ ಜಾನುವಾರುಗಳ ಮೇವಿನ ಸಮಸ್ಯೆಯನ್ನು ಪರಿಹರಿಸಲು ಅಧಿಕಾರಿಗಳು ತಕ್ಷಣವೇ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಬರ ಪರಿಸ್ಥಿತಿ ಹಾಗೂ ಅತಿವೃಷ್ಟಿ ನಿರ್ವಹಣೆಯ ಜಿಲ್ಲಾ ಉಸ್ತುವಾರಿ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರು, ಮೇವಿನ ಅಭಾವ ಹಾಗೂ ಪ್ರಕೃತಿ ವಿಕೋಪ ನಿರ್ವಹಣೆ ಕುರಿತು ಕರೆಯಲಾಗಿದ್ದ ತುರ್ತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಯಾವುದೇ ರೀತಿಯ ಕುಡಿಯುವ ನೀರಿನ ಕೊರತೆಯಾಗದಂತೆ ಅಧಿಕಾರಿಗಳು ಪೂರ್ಣ ಹೊಣೆಗಾರಿಕೆಯಿಂದ ಕೆಲಸ ಮಾಡಬೇಕು. ಕೊಳವೆಬಾವಿ ಸೇರಿದಂತೆ ಲಭ್ಯವಿರುವ ಪರ್ಯಾಯ ಮಾರ್ಗಗಳ ಮೂಲಕ ತಕ್ಷಣವೇ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದರು.

### ಕ್ಷೇತ್ರ ಭೇಟಿ ಮತ್ತು ನೈಜ ವರದಿಗೆ ಕಟ್ಟುನಿಟ್ಟಿನ ತಾಕೀತು

ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಹಾಗೂ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳನ್ನು ಹೊರತುಪಡಿಸಿ, ಉಳಿದಂತೆ ತಕ್ಷಣಕ್ಕೆ ನೀರು ಸರಬರಾಜು ಮಾಡಲು ಸಾಧ್ಯವಿರುವ ಎಲ್ಲಾ ಮಾರ್ಗಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು. ಅಧಿಕಾರಿಗಳು ಕೇವಲ ಕಚೇರಿಯಲ್ಲೇ ಕುಳಿತುಕೊಳ್ಳದೆ ಅಭಾವ ಪೀಡಿತ ಗ್ರಾಮಗಳಿಗೆ ಖುದ್ದು ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಬೇಕು. ಪೈಪ್ಲೈನ್ ಅಳವಡಿಕೆಯಲ್ಲಿ ಕಂಡುಬಂದಿರುವ ದೋಷಗಳು ಹಾಗೂ ಅರ್ಧಕ್ಕೆ ನಿಂತಿರುವ ಕಾಮಗಾರಿಗಳ ಬಗ್ಗೆ ನಿಖರ ವರದಿ ನೀಡಬೇಕು. ಶೀಘ್ರದಲ್ಲೇ ತಾವು ಜಿಲ್ಲೆಯ ಎಲ್ಲಾ ತಾಲೂಕುಗಳಿಗೂ ಭೇಟಿ ನೀಡಿ ಶಾಸಕರು ಮತ್ತು ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಲಿದ್ದು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಪೂರ್ಣ ಮಾಹಿತಿಯೊಂದಿಗೆ ಸಭೆಗೆ ಹಾಜರಾಗಬೇಕು ಎಂದು ಎಚ್ಚರಿಸಿದರು.

### ಶಾಸಕರ ಹಾಗೂ ಪ್ರಾಧಿಕಾರದ ಅಧ್ಯಕ್ಷರ ಸಲಹೆ

ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಗುಂಡ್ಲುಪೇಟೆ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್, ಕ್ಷೇತ್ರದಲ್ಲಿ ಕಂಡುಬರುತ್ತಿರುವ ನೀರಿನ ಸಮಸ್ಯೆಯನ್ನು ಎದುರಿಸಲು ಅಧಿಕಾರಿಗಳು ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು ಎಂದರು. ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ, ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಹೆಚ್ಚಿನ ಒತ್ತು ನೀಡುವುದರಿಂದ ಅಂತರ್ಜಲ ಮಟ್ಟ ಹೆಚ್ಚಿ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟರು. ಅಧಿಕಾರಿಗಳು ಮತ್ತು



ಜನಪ್ರತಿನಿಧಿಗಳು ಸಮನ್ವಯತೆಯಿಂದ ಕೆಲಸ ಮಾಡಿದರೆ ಮಾತ್ರ ಸಾರ್ವಜನಿಕರ ಸಂಕಷ್ಟಗಳಿಗೆ ಶೀಘ್ರ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಸಚಿವರು ಪುನರುಚ್ಚರಿಸಿದರು.

### ತಾಲೂಕುವಾರು ನೀರಿನ ಅಭಾವ ಸಿದ್ಧತೆಗಳ ವಿವರಣೆ

ಜಿಲ್ಲಾಧಿಕಾರಿ ಶ್ರೀರೂಪ ಅವರು ಸಭೆಗೆ ಮಾಹಿತಿ ನೀಡಿ, ಮುಂಬರುವ ದಿನಗಳಲ್ಲಿ ಚಾಮರಾಜನಗರ ತಾಲೂಕಿನ 42 ಗ್ರಾಮಗಳಲ್ಲಿ ಹಾಗೂ ಗುಂಡ್ಲುಪೇಟೆ ತಾಲೂಕಿನ 7 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆಯನ್ನು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ ನೂರಕ್ಕೂ ಹೆಚ್ಚು ಖಾಸಗಿ ಕೊಳವೆಬಾವಿಗಳನ್ನು ಕಾಯ್ದಿರಿಸಲಾಗಿದೆ ಎಂದರು. ಯಳಂದೂರು ತಾಲೂಕಿನ 9 ಗ್ರಾಮಗಳಲ್ಲಿ ಸಮಸ್ಯೆ ನಿರೀಕ್ಷಿಸಲಾಗಿದ್ದು, ಎಂಟು ಖಾಸಗಿ ಕೊಳವೆಬಾವಿಗಳನ್ನು ಗುರುತಿಸಲಾಗಿದೆ. ಕೊಳ್ಳೇಗಾಲ ತಾಲೂಕಿನಲ್ಲಿ ಯಾವುದೇ ತೊಂದರೆಯಿಲ್ಲ. ಹನೂರು ತಾಲೂಕಿನಲ್ಲಿ ತೀವ್ರ ಅಭಾವ ಕಂಡುಬಂದಿದ್ದು, ಪ್ರಸ್ತುತ 54 ಗ್ರಾಮಗಳಿಗೆ ಖಾಸಗಿ ಕೊಳವೆಬಾವಿ, ನೀರು ವಾಹನಗಳು (ಟ್ಯಾಂಕರ್) ಹಾಗೂ ಕೈಪಂಪ್ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಸಮಸ್ಯೆ ಎದುರಾಗಬಹುದಾದ ಹೆಚ್ಚುವರಿ ಗ್ರಾಮಗಳಿಗೂ ವಾಹನಗಳ ಮೂಲಕ ನೀರು ಸರಬರಾಜು ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ. ಚಂದ್ರು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ವಿವಿಧ ತಾಲೂಕುಗಳ ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

ಮೊದಲ ಪುಟದಿಂದ

### ಹಿಂದೂ ರಾಷ್ಟ್ರವಾದರೆ ಜಾತಿ ವ್ಯವಸ್ಥೆ

ಸಮುದಾಯದವರು ಜಾತಿ ವ್ಯವಸ್ಥೆಯಡಿ ಶೋಷಣೆಗೊಳಗಾಗುತ್ತೇವೆ. ಡಾ ಬಿ.ಆರ್ ಅಂಬೇಡ್ಕರ್ ಅವರು ಭಾರತ ಹಿಂದೂ ರಾಷ್ಟ್ರವಾದರೆ ದೇಶಕ್ಕೆ ಮಾರಕ ಎಂದಿದ್ದರು. ಅದನ್ನೇ ನಾನು ಹೇಳುತ್ತಿರುವುದು ಎಂದು ಹೇಳಿದರು.

### ಬಲಗೈ ಹೊಸಮುಖಕ್ಕೆ ಆದ್ಯತೆ

ಮಾತನಾಡುತ್ತಾರೆ. ಹೈಕಮಾಂಡ್ ಹಲವು ಕಾರಣದಿಂದ ನಿರ್ಧಾರವನ್ನು ಕೈಗೊಂಡಿದೆ ಎಂದರು. ಹಿಂದೆ ನಾನು, ತಾತ್ಕಾಲಿಕ ಉಸ್ತುವಾರಿ ಸಚಿವ ಆಗಿದ್ದೆ. ಈಗ ನಾನೇ ಜಿಲ್ಲಾ ಉಸ್ತುವಾರಿ ಸಚಿವ ಆಗುವುದು ಬಹುತೇಕ ಖಚಿತವಾಗಿದೆ. ಹೀಗಾಗಿ, ಅಧಿಕೃತವಾಗಿ ಮೈಸೂರು ಜಿಲ್ಲಾ ಪ್ರವಾಸ ಆರಂಭಿಸುತ್ತಿದ್ದೇನೆ ಎಂದು ಹೇಳಿದರು.

### ಮಸೂದೆ ಅಂಗೀಕಾರ

ತೆರಿಗೆ ಮತ್ತು ಇತರ ಕಾನೂನುಗಳ (ತಿದ್ದುಪಡಿ) ಮಸೂದೆ 2026 ಅನ್ನು ಧ್ವನಿ ಮತದ ಮೂಲಕ ಲೋಕಸಭೆಯಲ್ಲಿ ಅಂಗೀಕರಿಸಲಾಯಿತು. ಸದನದಲ್ಲಿ ಗದ್ದಲದ ನಡುವೆಯೇ ಯಾವುದೇ ಚರ್ಚೆಯಿಲ್ಲದೇ ಮಸೂದೆಗೆ ಅನುಮೋದನೆ ದೊರೆಯಿತು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ಈ ಮಸೂದೆ ಮಂಡಿಸಿದ್ದರು.

### ಆಸ್ತಿ ವಿವರ ಸಲ್ಲಿಕೆಗೂ ಆನ್ಲೈನ್

ಮೂಲಕ ನಡೆಯಲಿದೆ. ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು 2025-26ನೇ ಸಾಲಿನ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರವನ್ನು ಆಗಸ್ಟ್ 20ರಿಂದ ಇ-ಪಿಎಆರ್ ಅಪ್ಲಿಕೇಷನ್ ಮೂಲಕ ಸಲ್ಲಿಸಬೇಕು. ಪ್ರತಿ ವರ್ಷ ಮಾರ್ಚ್ ಅಂತ್ಯದೊಳಗೆ ಇದೇ ವ್ಯವಸ್ಥೆಯ ಮೂಲಕ ವಾರ್ಷಿಕ ಆಸ್ತಿ ವಿವರಗಳನ್ನು ಸಲ್ಲಿಸುವುದು ಕಡ್ಡಾಯ ಎಂದು ಸರ್ಕಾರ ಆದೇಶಿಸಿದೆ.

### ದರ್ಶನ್‌ಗೆ 'ಮಾಫಿ ಸಾಕ್ಷಿ' ಸಂಕಷ್ಟ

ನ್ಯಾಯಾಧೀಶರಾದ ಸುಜಾತಾ ಮಡಿವಾಳಪ್ಪ ಅವರು ಆಗಸ್ಟ್ 10ಕ್ಕೆ ಆದೇಶ ಕಾಯ್ದಿರಿಸಿದರು. ನಟ ದರ್ಶನ್ ಅವರ ಆಪ್ತ, 10ನೇ ಆರೋಪಿ ವಿನಯ್ ರಾಘವೇಂದ್ರ ಹಾಗೂ 8ನೇ ಆರೋಪಿ ರವಿಶಂಕರ್ ಕೂಡ ತಮ್ಮನ್ನೂ ಮಾಫಿ ಸಾಕ್ಷಿಯನ್ನಾಗಿ ಪರಿಗಣಿಸುವಂತೆ ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆ. ಅವರ ಪರ ವಕೀಲರು ಕೋರ್ಟ್ಗೆ ಅರ್ಜಿ ಸಲ್ಲಿಸಲು ನಿರ್ಧರಿಸಿದ್ದಾರೆಂಬ ಮಾಹಿತಿ ಲಭ್ಯವಾಗಿದೆ. ಆದರೆ, ಪ್ರದೋಷ್ ಪರ ವಕೀಲರು ತಮ್ಮ ಅರ್ಜಿಯೊಂದಿಗೆ ಇತರ ಆರೋಪಿಗಳ ಮನವಿಯನ್ನು ಸೇರಿಸದಂತೆ ಕೋರಿದ ಕಾರಣ, ನ್ಯಾಯಾಲಯ ವಿಚಾರಣೆಯನ್ನು ಮುಂದೂಡಿದೆ. ಆರ್.ಆರ್. ನಗರದ ಸ್ಟೋನಿ ಬ್ರೂಕ್ ಪಬ್ ಮಾಲೀಕ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಯಾಗಿರುವ ವಿನಯ್ ಪಬ್‌ನಲ್ಲಿ ದರ್ಶನ್ ಗ್ಯಾಂಗ್ ಕೊಲೆಗೆ ಸಂಚು ರೂಪಿಸಿತ್ತು ಎನ್ನಲಾಗಿದೆ.

### ಛಲವಾದಿ ದೂರು ಕೊಡಲಿ:

ಒಂದು ಕಂಪ್ಲೆಂಟ್ ಕೊಡಿ. ಸುಮ್ಮನೆ ಆಡಿಯೋ ಸಿಕ್ಕಿದೆ ಅಂತ ನಾವು ರಿಯಾಕ್ಟ್ ಮಾಡೋದು ಸರಿಯಲ್ಲ. ನಾರಾಯಣಸ್ವಾಮಿ ನನ್ನ ಬೆಸ್ಟ್ ಫ್ರೆಂಡ್, ದೂರು ಕೊಡಲಿ. ಅವರು ಹೇಳಿದ್ದನ್ನು ನಾವು ಗಂಭೀರವಾಗಿ ತಗೋಬೇಕು. ಸತ್ಯಾಂಶವನ್ನು ಸದನದಲ್ಲಿ ಮಂಡನೆ ಮಾಡ್ತೀನಿ ಎಂದು ಹೇಳಿದರು.

# ಗ್ಯಾರಂಟಿಗೆ 3 ವರ್ಷ: ಸಂಭ್ರಮ



ಎಚ್.ಡಿ.ಕೋಟೆ: ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿಗಳಿಗೆ ಮೂರು ವರ್ಷ ಪೂರ್ಣಗೊಂಡ ಹಿನ್ನೆಲೆ ಗಿಡ ನೆಟ್ಟು ಸಂಭ್ರಮ ವ್ಯಕ್ತಪಡಿಸಿದರು.

ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಗ್ರಾ.ಪಂ ವತಿಯಿಂದ ತುಂಬಸೋಗೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗಿಡ ನೆಟ್ಟು, ಸಂಭ್ರಮ ಆಚರಿಸಿದರು. ಪಂಚ ಗ್ಯಾರಂಟಿ ಯೋಜನೆಯ ಹೆಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ಚಾಮರಾಜು, ಸರಗೂರು ತಾಲೂಕು ಅಧ್ಯಕ್ಷ ಚಲುವರಾಜು, ತಾ. ಪಂ ಮಾಜಿ ಸದಸ್ಯ ಟಿ. ಅಂಕನಾಯಕ, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ರವಿ, ಶಾಲೆಯ ಮುಖ್ಯಶಿಕ್ಷಕ ಸೋಮಶೇಖರ್, ಅಂಗನವಾಡಿ ಕಾರ್ಯಕರ್ತೆಯರಾದ ದೇವಮ್ಮ, ಭವಾನಿ, ಆಶಾ ಕಾರ್ಯಕರ್ತೆಯರಾದ ಆಶಾ, ಮಂಜುಳಾ, ಪಾರ್ವತಿ, ಫಲಾನು ಭವಿಗಳಾದ ಸುಜಾತಾ, ಭಾಗ್ಯ, ಗೌರಿ, ಜ್ಯೋತಿ, ಶಶಿಕಲಾ, ಭವಾನಿ, ಚಂದನಾ, ವನಿತಾ ಸೇರಿದಂತೆ ಮತ್ತಿತರರಿದ್ದಾರೆ.

# ಕಾರ್ಪೊರೇಟ್‌ಗಳೇ ದೇಶ ಬಿಟ್ಟು ತೊಲಗಿ

ಮೈಸೂರು: ಐತಿಹಾಸಿಕ ಕ್ವಿಟ್ ಇಂಡಿಯಾ ಚಳವಳಿ ನೆನಪಿನಲ್ಲಿ ಆ.10 ರಂದು ಕಾರ್ಪೊರೇಟ್‌ಗಳೇ ದೇಶ ಬಿಟ್ಟು ತೊಲಗಿ ಎಂಬ ಘೋಷಣೆಯೊಂದಿಗೆ ಸಯುಕ್ತ ಹೋರಾಟ ಕರ್ನಾಟಕದ ಕರೆ ಮೇರೆಗೆ ಬೃಹತ್ ಮತ ಪ್ರದರ್ಶನ ಹಾಗೂ ಜೈಲ್ ಭರೋ ಚಳವಳಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ಕಾರ್ಮಿಕ ಮುಖಂಡ ಜಗದೀಶ್ ಸೂರ್ಯ ತಿಳಿಸಿದರು.

ನಗರದಲ್ಲಿ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಬೆಳಗ್ಗೆ 10.30ಕ್ಕೆ ಮಹಾರಾಜ ಕಾಲೇಜು ಮೈದಾನದಿಂದ ರಾಮಸ್ವಾಮಿ ವೃತ್ತ, ಮೆಟ್ರೋಪೋಲ್ ವೃತ್ತದ ಮೂಲಕ ರೈಲು ನಿಲ್ದಾಣಕ್ಕೆ ಸಾವಿರಾರು ಸಂಖ್ಯೆಯಲ್ಲಿ ರೈತರು, ಕಾರ್ಮಿಕರು ಸಾಗಿ ನಿಲ್ದಾಣಕ್ಕೆ ಮುತ್ತಿಗೆ ಹಾಕಲಿದ್ದಾರೆಂದರು. ಬಲವಂತ ಹಾಗೂ ಅನ್ಯಾಯದ ಭೂಸ್ವಾಧೀನ- ಕಾರ್ಪೊರೇಟ್ ಭೂ ಕಬಳಿಕೆ ವಿರೋಧಿಸಿ, ಕಾರ್ಮಿಕ ವಿರೋಧೀ ಕನಿಷ್ಠ ಕೂಲಿ ಪರಿಷ್ಕರಣೆ, ವಿಬಿ ಗ್ರಾಮ್ ಜಿ ಕಾಯ್ದೆ, ವಿದ್ಯುತ್ ತಿದ್ದುಪಡಿ ಕಾಯ್ದೆ -2025, ಬೀಜ ಕಾಯ್ದೆ, ಕೃಷಿ ಮಾರುಕಟ್ಟೆ ಕುರಿತ ರಾಷ್ಟ್ರೀಯ ಧೋರಣಾ ಚೌಕಟ್ಟು ಹಾಗೂ 4 ಕಾರ್ಮಿಕ ಸಂಹಿತೆಗಳ ರದ್ದತಿಗೆ ಈ ವೇಳೆ ಒತ್ತಾಯಿಸಲಾಗುವುದು. ಎಂ.ಎಸ್. ಸ್ವಾಮಿನಾಥನ್ ಶಿಫಾರಸಿನಂತೆ ರೈತರ ಕೃಷಿ ಉತ್ಪನ್ನಗಳಿಗೆ ಕನಿಷ್ಠ




ಬೆಂಬಲ ಬೆಲೆಗೆ ಶಾಸನ, ಎಲ್ಲಾ ರೈತ, ಕೃಷಿ ಕೂಲಿಕಾರ, ಮಹಿಳೆಯರ ಎಲ್ರಲ ರೀತಿಯ ಸಾಲ ಮನ್ನಾ ಮಾಡಲು ಹಾಗೂ ಋಣಮುಕ್ತ ಕಾಯ್ದೆ ಜಾರಿಗೆ ಮತ್ತು ಶಾಸನಬದ್ಧ ಜೀವನಾವಶ್ಯಕ ಕನಿಷ್ಠ ಕೂಲಿ ಶಾಸಸನಕ್ಕೆ , ಶಾಸನ ಸಭೆಗಳಲ್ಲಿ ಮಹಿಳಾ ಮೀಸಲಾತಿ ಜಾರಿಗೆ ಒತ್ತಾಯಿಸಲಾಗುವುದು ಎಂದರು. ಎಸ್‌ಕೆಎಂ-ಜೆಸಿಟಿಯು ಕರೆಯ ಮೇರೆಗೆ ದೇಶದಾದ್ಯಂತ ಈ ಜೈಲ್ ಭರೋ ಚಳವಳಿ ನಡೆಯಲಿದ್ದು, ಅದರಂತೆ ನಗರದಲ್ಲಿಯೂ ನಡೆಯಲಿದೆ. ಹೀಗಾಗಿ ರೈತರು, ಕಾರ್ಮಿಕರು, ಇನ್ನಿತರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು. ರೈತ ಹಾಗೂ ಕಾರ್ಮಿಕ ಮುಖಂಡರುಗಳಾದ ಹೊಸೂರು ಕುಮಾರ್, ಬಾಲಾಜಿರಾವ್,, ದೇವದಾಸ್, ಡಿ. ಜಗನ್ನಾಥ್, ಚೌಡಳ್ಳಿ ಜವರಯ್ಯ, ಕಂದೇಗಾಲ ಶ್ರೀನಿವಾಸ್, ಬಸವರಾಜ್, ಪಿ. ಮರಂಕಯ್ಯ ಇದ್ದರು.

# ನಾಳೆ ಗಾಯನ ಕಾರ್ಯಕ್ರಮ

ಮೈಸೂರು: ಹೊಸಬೆಳಕು ಗಾಯನ ಬಳಗದಿಂದ ಆ.8 ರಂದು ಸಂಜೆ 4 ರಿಂದ ರಾತ್ರಿ 9.30ರವರೆಗೆ ನಗರದ ನಾದಬ್ರಹ್ಮ ಸಭಾಂಗಣದಲ್ಲಿ 75 ನೇ ಗಾಯನ ಕಾರ್ಯಕ್ರಮದ ವಜ್ರ ಮಹೋತ್ಸವ ನಡೆಯಲಿದೆ ಎಂದು ಆಯೋಜಕರಾದ ಉಷಾ ಸುಧಾಕರ್ ತಿಳಿಸಿದರು,.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, 35 ಗಾಯಕರು ಭಾಗವಹಿಸಲಿದ್ದು ರಾಜ್ಯದ ವಿವಿಧ ಜಿಲ್ಲೆ ಮಾತ್ರವಲ್ಲದೆ, ಹೊರ ರಾಜ್ಯಗಳಿಂದಲೂ ಗಾಯಕರು ಆಗಮಿಸಿ, ಕನ್ನಡ, ಹಿಂದಿ ಗೀತೆ ಹಾಡಲಿದ್ದಾರೆ. ಸುಮಾರು 50 ಹಾಡುಗಳು ಮೂಡಿ ಬರಲಿವೆ. ಇದು ಎಲ್ಲರಿಗೂ ಉಚಿತ ಪ್ರವೇಶವಿರುವ ಕರೋಕೆ ಕಾರ್ಯಕ್ರಮವಾಗಿದೆ ಎಂದರು.ರಮೇಶ್, ರವಿಶಂಕರ್, ರಾಧಿಕಾ, ರೂಪಾ, ವೆಂಕಟೇಶ್ ಪದಕಿ ಇದ್ದರು.



# ಮಿಶ್ರ ಕೃಷಿ, ಸಾವಯವ ಬೇಸಾಯ ಅಳವಡಿಸಿಕೊಳ್ಳಿ

**ಗುಂಡ್ಲುಪೇಟೆ, :-** ರೈತರು ಸಾಂಪ್ರದಾಯಿಕ ಕೃಷಿಯ ಜೊತೆಗೆ ಮಿಶ್ರ ಕೃಷಿ, ಸಾವಯವ ಕೃಷಿ ಹಾಗೂ ಸಿರಿಧಾನ್ಯಗಳ ಬೇಸಾಯವನ್ನು ಅಳವಡಿಸಿಕೊಂಡರೆ ಉತ್ಪಾದನಾ ವೆಚ್ಚ ಕಡಿಮೆಯಾಗುವುದರೊಂದಿಗೆ ಉತ್ತಮ ಆದಾಯ ಗಳಿಸಲು ಸಾಧ್ಯವಾಗುತ್ತದೆ ಎಂದು ಕೃಷಿ ಮೇಲ್ವಿಚಾರಕ ಮಾದೇವ ಪ್ರಸಾದ್ ಹೇಳಿದರು.

ಕೃಷಿ ಇಲಾಖೆಯ ಬರಗಿ ವಲಯದ ವತಿಯಿಂದ ಕೃಷಿ ವಿಸ್ತರಣಾ ಕಾರ್ಯಕ್ರಮದಡಿ ಕೋಟೆಕೆರೆ ಗ್ರಾಮದಲ್ಲಿ ಆಯೋಜಿಸಿದ್ದ ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾರ್ಯಕ್ರಮವನ್ನು. ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಪ್ರಸ್ತಾವಿಕವಾಗಿ ಮಾತನಾಡಿದ ಮಾದೇವ ಪ್ರಸಾದ್, ಬರಗಿ ವಲಯದಲ್ಲಿ ಕೃಷಿ ಇಲಾಖೆಯಿಂದ ಜಾರಿಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳು, ರೈತರಿಗೆ ಲಭ್ಯವಿರುವ ಸೌಲಭ್ಯಗಳು ಹಾಗೂ ಆಧುನಿಕ ಕೃಷಿ ಪದ್ಧತಿಗಳ ಕುರಿತು ಮಾಹಿತಿ ನೀಡಿದರು. ಮಿಶ್ರ ಕೃಷಿ, ಸಾವಯವ ಕೃಷಿ, ಸಿರಿಧಾನ್ಯಗಳ ಬೇಸಾಯ, ಮಣ್ಣಿನ ಫಲವತ್ತತೆ ಕಾಪಾಡುವ ವಿಧಾನಗಳು ಹಾಗೂ ಬೆಳೆ ವೈವಿಧ್ಯತೆ ಅಳವಡಿಸಿಕೊಳ್ಳುವ ಅಗತ್ಯವನ್ನು ವಿವರಿಸಿದರು.

ತೋಟಗಾರಿಕಾ ಇಲಾಖೆಯ ಸಹಾಯಕ ಅಧಿಕಾರಿ ಲೀಲಾವತಿ ಮಾತನಾಡಿ, ಹಣ್ಣು ಹಾಗೂ ತರಕಾರಿ ಬೆಳೆಗಳ ವೈಜ್ಞಾನಿಕ ಬೇಸಾಯ, ಸಾವಯವ ವಿಧಾನದಲ್ಲಿ ತರಕಾರಿ ಉತ್ಪಾದನೆ, ತೋಟಗಾರಿಕಾ ಇಲಾಖೆಯ ವಿವಿಧ ಯೋಜನೆಗಳು, ಸಹಾಯಧನ ಸೌಲಭ್ಯಗಳು ಹಾಗೂ ರೈತರು ಅವುಗಳನ್ನು ಪಡೆದುಕೊಳ್ಳುವ ವಿಧಾನಗಳ ಕುರಿತು



ಮಾಹಿತಿ ನೀಡಿದರು. ರೈತರು ಇಲಾಖೆಗಳ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಆದಾಯ ಹೆಚ್ಚಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ರಂಗಸ್ವಾಮಿ ಹಾಗೂ ರಂಗನಾಥ್, ಮುಖಂಡರಾದ ಕುಮಾರ್ ಮತ್ತು ಮಹದೇವಸ್ವಾಮಿ, ವಲಯ ಮೇಲ್ವಿಚಾರಕರಾದ ದೇವೇಂದ್ರ, ಸೇವಾ ಪ್ರತಿನಿಧಿ ಶಶಿಕಲಾ, ಸಂಘದ ಸದಸ್ಯರು ಹಾಗೂ ಗ್ರಾಮಸ್ಥರು ಭಾಗವಹಿಸಿ ಕೃಷಿ ಮತ್ತು ತೋಟಗಾರಿಕೆ ತಜ್ಞರೊಂದಿಗೆ ಸಂವಾದ ನಡೆಸಿದರು. ರೈತ ಕ್ಷೇತ್ರ ಪಾಠಶಾಲೆಯಲ್ಲಿ ಬೆಳೆ ನಿರ್ವಹಣೆ, ಆಧುನಿಕ ತಂತ್ರಜ್ಞಾನ ಅಳವಡಿಕೆ, ಸರ್ಕಾರಿ ಯೋಜನೆಗಳ ಸದುಪಯೋಗ ಹಾಗೂ ಪರಿಸರ ಸ್ನೇಹಿ ಕೃಷಿ ಪದ್ಧತಿಗಳ ಕುರಿತು ರೈತರಿಗೆ ಸಮಗ್ರ ಮಾಹಿತಿ ನೀಡಲಾಯಿತು

ಮೊದಲ ಪುಟದಿಂದ

### 14ರಂದು ಪರಿಷತ್ ಸಭಾಪತಿ ಸ್ಥಾನಕ್ಕೆ ರಾಜೀನಾಮೆ: ಹೊರಟ್ಟಿ

ಕಾಂಗ್ರೆಸ್ ಹೈಕಮಾಂಡ್ ತೆಗೆದುಕೊಂಡಿರುವ ಅಂತಿಮ ತೀರ್ಮಾನ ಎಂದು ಸ್ಪಷ್ಟಪಡಿಸಿದ ಸಿಎಂ ಸಭಾಪತಿ ಸ್ಥಾನ ತ್ಯಾಗ ಮಾಡುವಂತೆ ಹೊರಟ್ಟಿ ಅವರಲ್ಲಿ ವಿನಂತಿಸಿಕೊಂಡಿದ್ದರು. ಈ ವಿನಂತಿಗೆ ಸ್ಪಂದಿಸಿದ ಹೊರಟ್ಟಿ ರಾಜೀನಾಮೆಗೆ ಸಮ್ಮತಿಸಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಆ ಸ್ಥಾನದಿಂದ ಬದಲಾಯಿಸದಂತೆ ರಾಜ್ಯ ಸರ್ಕಾರದ ಪ್ರಮುಖ ಸಚಿವರಾದ ಸತೀಶ್ ಜಾರಕಿಹೊಳಿ, ಚೆಲುವರಾಯಸ್ವಾಮಿ, ಜಮೀರ್ ಅಹಮದ್ ಖಾನ್, ಯು.ಟಿ. ಖಾದರ್ ಹಾಗೂ ಎನ್.ಎ.ಹ್ಯಾರಿಸ್ ಅವರು ಮುಖ್ಯಮಂತ್ರಿಗಳ ಮೇಲೆ ತೀವ್ರ ಒತ್ತಡ ಹೇರಿದ್ದರು. ಆದರೆ ಸಚಿವರ ಮನವಿಯ ಹೊರತಾಗಿಯೂ ಡಿಕೆ ಶಿವಕುಮಾರ್ ತಮ್ಮ ನಿರ್ಧಾರವನ್ನು ಬದಲಿಸಲಿಲ್ಲ ಎನ್ನಲಾಗಿದೆ.

### ಬರ ಎದುರಿಸಲು ಸೂಚನೆ

ತಲುಪುವಂತೆ ನಿಗಾ ವಹಿಸಬೇಕು ಎಂದು ನಿರ್ದೇಶನ ನೀಡಿದರು. ಇಲಾಖೆಗಳ ನಡುವೆ ಸಮನ್ವಯ ಇರಬೇಕು. ಜನರ ಹಿತಾಸಕ್ತಿಯನ್ನು ಆದ್ಯತೆಯಾಗಿ ಪರಿಗಣಿಸಿ ತ್ವರಿತ ಹಾಗೂ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

### ಮುಖ್ಯಮಂತ್ರಿ ಇದ್ದಂತೆ

ಯಾರ ಮೇಲೆ ಇಲ್ಲ ಹೇಳಿ? ಬಿಜೆಪಿಯವರಿಗೆ ಇದರ ಬಗ್ಗೆ ಮಾತನಾಡೋ ನೈತಿಕತೆ ಇಲ್ಲ. ಆರೋಪ ಸಾಬೀತಾದ್ರೆ ಆಗ ಮಾತಾಡಲಿ. ಕಾನೂನು ಪ್ರಕಾರ ಏನಿದೆ ಅದೇ ರೀತಿ ಅರೆಸ್ಟ್ ಮಾಡಿದ್ದರು. ಈಗ ಹೊರಗೆ ಬಂದಿದ್ದಾರೆ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ಕೊಟ್ಟಿದ್ದು ಸರಿ ಇದೆ ಎಂದು ಸಮರ್ಥಿಸಿಕೊಂಡರು. ಸಚಿವ ಸಂಪುಟದಲ್ಲಿ ಡಿಕೆಶಿ ಆಪ್ತರು, ಸಿದ್ದರಾಮಯ್ಯ ಆಪ್ತರು ಎಂದು ಬರೋದಿಲ್ಲ. ಪ್ರಾಂತ್ಯವಾರು ಸಚಿವ ಸ್ಥಾನ ನೀಡಿದ್ದಾರೆ. ನಮ್ಮ ಜಿಲ್ಲೆಯಲ್ಲಿ ಬಸವಂತಪ್ಪ ಅವರಿಗೆ ಕೊಟ್ಟಿದ್ದಾರೆ. ಈ ವಿಚಾರದಲ್ಲಿ ನಮಗೆ ಸಂತೋಷವಿದೆ ಎಂದರು. ನಾನು ರೈತರ ಕೋಟಾ ಅಡಿ ಮಂತ್ರಿ ಸ್ಥಾನ ಕೇಳಿದ್ದೆ, ಆದರೆ ಕೊಟ್ಟಿಲ್ಲ. ಮುಂದೆ ಸಾಕಷ್ಟು ಅವಕಾಶ ಇದೆ. ಇನ್ನೂ ಮೊದಲ ಬಾರಿ ಗೆದ್ದಿರುವೆ. ಸಿಎಂ ರಾಜಕೀಯ ಕಾರ್ಯದರ್ಶಿ ಕೊಟ್ಟರೂ ನಿಭಾಯಿಸುವೆ ಎಂದು ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನದ ಬಗ್ಗೆ ಆಕಾಂಕ್ಷೆ ವ್ಯಕ್ತಪಡಿಸಿದರು.

00000

# ಉಚಿತ ಆರೋಗ್ಯ-ಕಣ್ಣಿನ ತಪಾಸಣಾ ಶಿಬಿರ

ಮೈಸೂರು: ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಸುವರ್ಣ ಬೆಳಕು ಫೌಂಡೇಶನ್, ಪಾಂಚಜನ್ಯ ಚಾರಿಟೇಬಲ್ ಟ್ರಸ್ಟ್ ಹಾಗೂ ಗುರು ವಿನಾಯಕ ಸ್ನೇಹ ಬಳಗ ಸಂಯುಕ್ತ ಆಶ್ರಯದಲ್ಲಿ ಎಎಸ್‌ಜಿ ಕಣ್ಣಿನ ಆಸ್ಪತ್ರೆ ಮತ್ತು ಸುಯೋಗ್ ಮಲ್ಟಿ-ಸ್ಪೆಷಾಲಿಟಿ ಆಸ್ಪತ್ರೆ ಸಹಯೋಗದೊಂದಿಗೆ ನಗರದ ಬಂಬೂ ಬಜಾರ್ ಮೇದರ್ ಬ್ಲಾಕ್ 3ನೇ ಮೇನ್ ಸಮುದಾಯ ಭವನದಲ್ಲಿ ಗುರುವಾರ ಬೃಹತ್ ಉಚಿತ ಆರೋಗ್ಯ ಮತ್ತು ಕಣ್ಣಿನ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಗುರು ವಿನಾಯಕ ಸ್ನೇಹ ಬಳಗದ ಸಂಸ್ಥಾಪಕ ಗುರು ವಿನಾಯಕರ ಜನ್ಮದಿನವನ್ನು ಸಮಾಜಮುಖಿ ಕಾರ್ಯಕ್ರಮದ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮವನ್ನು ಮಾಜಿ ಶಾಸಕ ಎಲ್.ನಾಗೇಂದ್ರ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿ, ನಗರ ಪ್ರದೇಶದ ಜನರು ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ಇಂತಹ ಉಚಿತ ಆರೋಗ್ಯ ತಪಾಸಣಾ ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕು. ಆರಂಭಿಕ




ಹಂತದಲ್ಲೇ ಆರೋಗ್ಯ ಸಮಸ್ಯೆಗಳನ್ನು ಪತ್ತೆಹಚ್ಚುವುದರಿಂದ ಉತ್ತಮ ಚಿಕಿತ್ಸೆ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಶಿಬಿರದಲ್ಲಿ ರಕ್ತದೊತ್ತಡ, ಮಧುಮೇಹ ಸೇರಿದಂತೆ ವಿವಿಧ ಆರೋಗ್ಯ ತಪಾಸಣೆಗಳನ್ನು ಉಚಿತವಾಗಿ ನಡೆಸಲಾಯಿತು. ಅಲ್ಲದೆ ಪರಿಣಿತ ವೈದ್ಯರು ಆರೋಗ್ಯ ಸಲಹೆ ಹಾಗೂ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ನಗರ ಎಸ್‌ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ. ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿ ಕೃಷ್ಣಕುಮಾರ್, ಸುವರ್ಣ ಬೆಳಕು ಫೌಂಡೇಶನ್ ಅಧ್ಯಕ್ಷ ಎಸ್. ಮಹೇಶ್, ನಾಗೇಶ್ ನಾಯಕ, ಪಾಲಿಕೆ ಮಾಜಿ ಸದಸ್ಯ ಎಂ.ಚಿಕ್ಕವೆಂಕಟು, ಬೋ.ಉಮೇಶ್, ಬಿ.ವಿ.ರವೀಂದ್ರ, ನಗರ ಕಾರ್ಯದರ್ಶಿ ಎಂ.ಎಸ್.ಪುನೀತ್, ಮರಿಸ್ವಾಮಿನಾಯಕ, ಯಾದವಗಿರಿ ವಾರ್ಡ್ ಬಿಜೆಪಿ ಅಧ್ಯಕ್ಷ ಕಿರಣ್ ಬೋಲಾರೆ, ನಿವೃತ್ತ ಇಂಜಿನಿಯರ್ ಷಣ್ಮುಗಂ, ಮುರುಗೇಶ್, ಜೀವನ್ ಪ್ರಕಾಶ್, ಮಂಜುನಾಥಪುರಂ ಅನಿಲ್, ಸುನೀಲ್, ಗೋಕುಲಂ ಜಯಣ್ಣ, ಕೇಬಲ್ ವಿಜಿ, ನಂದೀಶ್, ಲೋಕೇಶ್, ಮನೀಷ್ ಸೇರಿ ಇತರರು ಉಪಸ್ಥಿತರಿದ್ದರು.

# ಟಿಬಿಐಎಫ್‌ನ ಐಡಿಯಾಫೋರ್ಜ್‌ಗೆ ಚಾಲನೆ



ಮೈಸೂರು: ಮಹಿಳೆಯರಿಗಾಗಿ ಜೆಎಸ್‌ಎಸ್‌ಎಸ್ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಆ?ಯಂಡ್ ಟೆಕ್ನಾಲಜಿಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಬೆಂಬಲಿತ ಜೆಎಸ್‌ಎಸ್‌ಎಸ್ ಟೆಕ್ನಾಲಜಿ ಬಿಸಿನೆಸ್ ಇನ್‌ಕ್ಯುಬೇಟರ್ ಫೌಂಡೇಶನ್ ವತಿಯಿಂದ ಐಡಿಯಾಫೋರ್ಜ್–2026 ಎಂಬ ಆರು ವಾರಗಳ ಪೂರ್ವ ಇನ್‌ಕ್ಯುಬೇಷನ್ ಕಾರ್ಯಕ್ರಮಕ್ಕೆ ಸಿಎಫ್‌ಟಿಆರ್‌ಐ ನಿರ್ದೇಶಕ ಡಾ.ಗಿರಿಧರ್ ಪರ್ವತು ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, "ನವೋದ್ಯಮಿಗಳ ಹೊಸ ಆಲೋಚನೆಗಳನ್ನು ತಂತ್ರಜ್ಞಾನ ಆಧಾರಿತ, ಹೂಡಿಕೆ ಸ್ಟಾರ್ಟ್ ಅಪ್‌ಗಳಾಗಿ ಆಕರ್ಷಿಸುವ ರೂಪಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಮಾರ್ಗದರ್ಶನ, ತಜ್ಞರ ಸಲಹೆ, ಉದ್ಯಮ ಸಂಪರ್ಕ ಹಾಗೂ ಉದ್ಯಮಶೀಲತಾ ಪರಿಸರದ ನೆರವಿನೊಂದಿಗೆ ಭಾಗವಹಿಸುವವರಿಗೆ ಸಮಗ್ರ ತರಬೇತಿ ನೀಡುತ್ತಿರುವುದು ಉತ್ತಮ ಬೆಳವಣಿಗೆ," ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಡಾ.ಅನುಪಮಾ ಪಂಡಿತ್ ಮಾತನಾಡಿ, "ಐಡಿಯಾಫೋರ್ಡ್2026ರ ಮೊದಲ ಬ್ಯಾಚ್‌ಗೆ 49 ಸ್ಟಾರ್ಟ್ ಅಪ್‌ಗಳು ನೋಂದಾಯಿಸಿವೆ. ಕೃಷಿ ತಂತ್ರಜ್ಞಾನ (ಅಗ್ರಿಟೆಕ್), ಆಹಾರ ತಂತ್ರಜ್ಞಾನ ಹಾಗೂ ಆರೋಗ್ಯ ಕ್ಷೇತ್ರಗಳ ನವೋದ್ಯಮಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿವೆ. ಆರು ವಾರಗಳ ಅವಧಿಯಲ್ಲಿ ಸಮಸ್ಯೆ ಗುರುತಿಸುವಿಕೆ, ಪರಿಹಾರ ಅಭಿವೃದ್ಧಿ ಕಲ್ಪನೆ ಪರಿಶೀಲನೆ, ಗ್ರಾಹಕರ ಅಧ್ಯಯನ, ಮಾರುಕಟ್ಟೆ ತಂತ್ರ, ಪ್ರೊಟೋಟೈಪ್ ಅಭಿವೃದ್ಧಿ, ವ್ಯವಹಾರ ಮಾದರಿ, ಬಿಸಿನೆಸ್ ಪ್ಲಾನ್, ಪಿಚ್ ಡೆಕ್ ಸಿದ್ದತೆ, ಬೌದ್ಧಿಕ ಆಸ್ತಿ ಹಕ್ಕುಗಳು, ಸರಕಾರಿ ನೀತಿಗಳು, ಕಾನೂನು ಅನುಸರಣೆ ಹಾಗೂ ಹೂಡಿಕೆ ಅವಕಾಶಗಳ ಕುರಿತು ತಜ್ಞರಿಂದ ತರಬೇತಿ ಮತ್ತು ವೈಯಕ್ತಿಕ ಮಾರ್ಗದರ್ಶನ ನೀಡಲಾಗುತ್ತಿದೆ," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿಎಫ್‌ಟಿಆರ್‌ಐ ಹಿರಿಯ ವಿಜ್ಞಾನಿ ಡಾ.ತನಾಜಿ ಜಿ.ಕುಡ್ರೆ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಅಧ್ಯಕ್ಷಡಾ. ಕೆ.ಬಿ.ಲಿಂಗರಾಜು, ಸೌತ್ ಇಂಡಿಯನ್ ಏಂಜೆಲ್ ನೆಟ್ವರ್ಕ್ ಸಿಇಒ ಶ್ರವಣ್ ಮೂರ್ತಿ, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಮೈಸೂರು ಕ್ಲಸ್ಟರ್ ಮುಖ್ಯಸ್ಥ ಸುರ್ ಕೆ.ಎಸ್.ಸುಧೀರ್ ಇತರರು ಭಾಗವಹಿಸಿದ್ದರು.

# ಪರಮೇಶ್ವರ್ ಹುಟ್ಟುಹಬ್ಬ ಆಚರಣೆ



ಮೈಸೂರು: ಮೈಸೂರು ಜಿಲ್ಲಾ ಡಾ.ಜಿ.ಪರಮೇಶ್ವರ್ ಅಭಿಮಾನಿಗಳ ಬಳಗದವತಿಯಿಂದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ 75ನೇ ವರ್ಷದ ಹುಟ್ಟುಹಬ್ಬ ಆಚರಿಸಲಾಯಿತು.

ನಗರದ ಕೋಟೆ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಈಡುಗಾಯಿ ಸಮರ್ಪಿಸಿ, ಸಿಹಿ ವಿತರಿಸುವ ಮೂಲಕ ಡಿಸಿಎಂ ಡಾ.ಜಿ. ಪರಮೇಶ್ವರ್ ಅಭಿಮಾನಿಗಳು ಹುಟ್ಟುಹಬ್ಬ ಆಚರಿಸಿದರು. ಈ ವೇಳೆ ಕೆಪಿಸಿಸಿ ವಕ್ತಾರ ಎಚ್.ಎ.ವೆಂಕಟೇಶ್ ಮಾತನಾಡಿ, ಉಪಮುಖ್ಯಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡಿರುವ ಡಾ. ಜಿ ಪರಮೇಶ್ವರ್ ಅವರು ನಾಡು ಕಂಡಂತಹ ಪ್ರಜ್ಞಾವಂತ ನಾಗರೀಕ ನಡವಳಿಕೆಯ ಉತ್ತಮ ಗುರಿ ಹೊಂದಿರುವ ಅಪರೂಪದ ರಾಜಕಾರಣಿ. ರಾಜಕಾರಣವನ್ನು ಅಧಿಕಾರವೆಂದು ತಿಳಿದು ದುರುಪಯೋಗಪಡಿಸಿಕೊಳ್ಳುತ್ತಿರುವ ಈ ಕಾಲಘಟ್ಟದಲ್ಲಿ ಪರಮೇಶ್ವರ್ ಅವರು ತಮ್ಮ ಉದಾತ್ತವಾದ ನಿಲುವು , ಗುರಿ ಹಾಗೂ ಜ್ಞಾನದಿಂದ ಸಂಶೋಧನೆಯ ಶಕ್ತಿಯಿಂದ ಹೊಸದಾದ ಒಂದು ಗುರುತನ್ನು ಸಮಾಜದಲ್ಲಿ ಹೊಂದಿದ್ದಾರೆ. ಕರ್ನಾಟಕದ ರಾಜಕಾರಣದಲ್ಲಿ ದೀರ್ಘಕಾಲ ಸಚಿವರಾಗಿ ಆಡಳಿತ ನಡೆಸಿರುವ ಅನುಭವ ಹೊಂದಿದ್ದಾರೆಂದರು. ಮೈಸೂರು ಜಿಲ್ಲಾ ಜಿ ಪರಮೇಶ್ವರ ಅಭಿಮಾನಿಗಳ ಅಧ್ಯಕ್ಷ ಸಿ. ಮಂಜುನಾಥ್, ಮಹೇಂದ್ರ ಕುಮಾರ್, ಎಂ. ಮಣಿಕಂಠ, ಪ್ರಸನ್ನ ಕಳಸ್ತವಾಡಿ, ಡೈರಿ ವೆಂಕಟೇಶ್, ಕುರುಬರಹಳ್ಳಿ ಕೋಟೆ ಮಂಜು, ಹೇಮಂತ್ ಕುಮಾರ್, ಬಿ.ಎಲ್ ಪುಟ್ಟಸ್ವಾಮಿ, ಹೈಕೋರ್ಟ್ ನ್ಯಾಯವಾದಿ ನಂಜುಂಡಸ್ವಾಮಿ, ಎಚ್. ಎನ್.ಸುಶಾಂತ್, ಜೆ.ಪುನೀತ್, ಎ.ಆದರ್ಶ್, ನಿಂಗು, ಪ್ರಕಾಶ್, ಕಿರಣ್, ಸೂರಿ, ಮಧು, ಸುಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ದಿನೇಶ್ ಗುಂಡುರಾವ್‌ಗೆ ಸಚಿವ ಸ್ಥಾನ ನೀಡುವಂತೆ ಆಗ್ರಹ



ಮೈಸೂರು: ರಾಜ್ಯ ಸಚಿವ ಸಂಪುಟ ಪುನಾರಚನೆ ವೇಳೆ ಹಿರಿಯ ಅನುಭವಿ ರಾಜಕಾರಣಿ ಹಾಗೂ ಮಾಜಿ ಸಚಿವರಾದ ದಿನೇಶ್ ಗುಂಡೂರಾವ್ ಅವರನ್ನು ಕೈಬಿಟ್ಟಿರುವುದು ಸಾಮಾಜಿಕ ನ್ಯಾಯ ಹಾಗೂ ಬ್ರಾಹ್ಮಣ ಸಮುದಾಯಕ್ಕೆ ಮಾಡಿರುವ ಅನ್ಯಾಯವಾಗಿದೆ. ಹೀಗಾಗಿ ಕೂಡಲೇ ಅವರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕೆಂದು ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಬಿ. ಆರ್.ನಟರಾಜ್ ಜೋಯಿಸ್ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಾಂಗ್ರೆಸ್ ಪಕ್ಷಕ್ಕೆ ಬೆನ್ನೆಲುಬಾಗಿ ದುಡಿದು, ರಾಜ್ಯದಲ್ಲಿ ಉತ್ತಮ ಆಡಳಿತ ನಡೆಸಿದ ಮಾಜಿ ಸಿಎಂ ದಿ. ಗುಂಡೂರಾವ್ ಅವರ ಪುತ್ರರಾದ ದಿನೇಶ್ ಗುಂಡೂರಾವ್ ಅವರು ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ನಾಡಿಗೆ ನೀಡಿದ ಕೊಡುಗೆ ಅನನ್ಯವಾಗಿದೆ. ಅಲ್ಲದೆ, ದೇಶಪಾಂಡೆ ಅವರಂತಹ ನಾಯಕರೂ ಇದ್ದಾರೆ. ಹೀಗಿದ್ದರೂ ಸಂಪುಟದಲ್ಲಿ ವಿಪ್ರ ಸಮುದಾಯದ ಯಾರೊಬ್ಬರನ್ನೂ ಸಚಿವರನ್ನಾಗಿಸದಿರುವುದು ಸಮುದಾಯಕ್ಕೆ ನೋವುಂಟು ಮಾಡಿದೆ. ಇದು ಸಿಎಂ ಡಿ.ಕೆ. ಶಿವಕುಮಾರ್ ಅವರ ಬಗ್ಗೆ ಸಮಾಜದಲ್ಲಿ ಬೇಸರ ತರಿಸುವಂತದ್ದಾಗಿದೆ. ಸಂಪುಟದಲ್ಲಿ ವಿಪ್ರ ಸಮುದಾಯದ ಓರ್ವರೂ ಇಲ್ಲದಿರುವುದು ನೋವುಂಟು ಮಾಡುವ ಸಂಗತಿಯಾಗಿದೆ ಎಂದರು.

ಹಿರಿಯ ಸಮಾಜ ಸೇವಕ ರಘುರಾಂ ವಾಜಪೇಯಿ ಮಾತನಾಡಿ, ಸ್ವಾತಂತ್ರಾ?ಯ ನಂತರ ಯಾವುದೇ ಸರ್ಕಾರದಲ್ಲಿಯೂ ವಿಪ್ರರಿಗೆ ಸೂಕ್ತ ಸ್ಥಾನಮಾನ ಇರುತ್ತಿತ್ತು. ಅದು ಎಂದಿಗೂ ಕೈತಪ್ಪಿಲ್ಲ. ಅಲ್ಲದೆ, ಸಮುದಾಯದವರು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ತಮ್ಮ ಜವಾಬ್ದಾರಿ ನಿರ್ವಹಿಸಿದ್ದಾರೆ. ಆದರೆ ಈಚೆಗೆ ಸಮುದಾಯಕ್ಕೆ ಅನ್ಯಾಯ ಮಾಡಲಾಗುತ್ತಿದೆ. ಯು.ಬಿ. ವೆಂಕಟೇಶ್ ಅವರ ಎಂಎಲ್ಸಿ ಸ್ಥಾನ ಮುಂದುವರಿಸದಿರುವುದು, ದಿನೇಶ್ ಗುಂಡೂರಾವ್ ಅವರಿಗೆ ಈಗ ಸಚಿವ ಸ್ಥಾನ ನೀಡದಿರುವುದು ಇದಕ್ಕೆ ಉದಾಹರಣೆಯಾಗಿದೆ. ಹೀಗಾಗಿ ಈ ಲೋಪ ಸರಿಪಡಿಸಿಕೊಳ್ಳಬೇಕೆಂದು ಸಿಎಂ ಡಿ.ಕೆ. ಶಿವಕುಮಾರ್‌ರಲ್ಲಿ ಮನವಿ ಮಾಡಿದರು. ಸುರೇಶ್ ಯಡಹಳ್ಳಿ, ಬ್ಯಾಂಕ್ ಅಶೋಕ್, ವಿಜಯಲಕ್ಷ್ಮಿ?ಮ ಮೊದಲಾದವರು ಇದ್ದರು.

# 17ರಿಂದ ಅನಿರ್ದಿಷ್ಟಾವಧಿ ಮುಷ್ಕರ

ಗುಂಡ್ಲುಪೇಟೆ: ಆಲಂಬೂರು ಏತ ನೀರಾವರಿ ಯೋಜನೆ ವ್ಯಾಪ್ತಿಯ ನಾಲ್ಕನೇ ಹಂತದ ಕೆರೆಗಳಿಗೆ ಇದುವರೆಗೆ ನೀರು ಹರಿಸದಿರುವುದನ್ನು ಖಂಡಿಸಿ, ಆಗಸ್ಟ್ 17ರಿಂದ ತಾಲೂಕು ಕಚೇರಿ ಎದುರು ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ರೈತರು ತೀರ್ಮಾನಿಸಿದರು.

ತಾಲೂಕಿನ ಸ್ಕಂದಗಿರಿ ಪಾರ್ವತಾಂಬೆ ಸನ್ನಿಧಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ನಾಲ್ಕನೇ ಹಂತದ ಕೆರೆಗಳ ನೀರು ಹರಿಸುವಂತೆ ರೈತರು ಹಾಗೂ ವಿವಿಧ ಗ್ರಾಮಗಳ ಮುಖಂಡರು ಸರ್ಕಾರವನ್ನು ಒತ್ತಾಯಿಸಿದರು. ಸಭೆಯಲ್ಲಿ ಮಾತನಾಡಿದ ಮುಖಂಡರು, ಆಲಂಬೂರು ಏತ ನೀರಾವರಿ ಯೋಜನೆಯ ನಾಲ್ಕನೇ ಹಂತದ ಕೆರೆಗಳಿಗೆ ನೀರು ಹರಿಸುವ ವಿಚಾರದಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ ಹಾಗೂ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ತಾರತಮ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿ, ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯದ ಹಿನ್ನೆಲೆಯಲ್ಲಿ ಹೋರಾಟದ ಮಾರ್ಗವನ್ನು ಅನಿವಾರ್ಯವಾಗಿ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಕೆರೆಗಳಿಗೆ ತಕ್ಷಣ ನೀರು ಹರಿಸದಿದ್ದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಸಭೆಯಲ್ಲಿ ಎಚ್ಚರಿಕೆ ನೀಡಲಾಯಿತು. ಸಬೆಯಲ್ಲಿ ಸುತ್ತಲಿನ ಗ್ರಾಮಸ್ಥರು ಹಾಗೂ ರೈತ ಮುಖಂಡರು ಭಾಗವಹಿಸಿದ್ದರು.



# ಕುಡಿಯುವ ನೀರಿಗೆ ತೊಂದರೆಯಾಗದಿರಲಿ

## ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿಕೆ । ಅಧಿಕಾರಿಗಳ ಸಭೆ



ಮೈಸೂರು: ಜಿಲ್ಲೆಯಲ್ಲಿ ಶೇ.58ರಷ್ಟು ಮಳೆಯ ಕೊರತೆಯಾಗಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕಾ ಕ್ರಮ ಹಾಗೂ ಯೋಜನೆಗಳನ್ನು ರೂಪಿಸಿಕೊಳ್ಳಬೇಕು ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ನಗರದ ಶಾರದದೇವಿನಗರ ಮೈಸೂರು ಮಹಾನಗರಪಾಲಿಕೆ ವಲಯ ಕಚೇರಿ 3 ರಲ್ಲಿ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ಕಳೆದ 3 ದಿನಗಳಿಂದ ಮಳೆಯಾಗುತ್ತಿದ್ದು, ಜಲಾಶಯದಿಂದ ಬಿಡಲಾಗುವ ನೀರನ್ನು ಆದ್ಯತೆಯ ಮೇಲೆ ಕೆರೆಗಳನ್ನು ತುಂಬಿಸಲು ಬಳಸಬೇಕು. ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಕೆರೆಗಳು ಸಮರ್ಪಕವಾಗಿ ತುಂಬಿಸಲು ನಿಗಾ ವಹಿಸಬೇಕು. ಮುಂದಿನ ವರ್ಷದ ಜೂನ್ ಮಾಹೆ ಯವರೆಗೆ ಬರ ಪರಿಸ್ಥಿತಿಯನ್ನು ಎದುರಿಸಬೇಕಾಗಬಹುದು. ಅಧಿಕಾರಿಗಳು ಬರ ಪರಿಸ್ಥಿತಿ ಎದುರಿಸಲು ಸನ್ನದ್ಧರಾಗಬೇಕು. ಕೆರೆಗೆ ನೀರು ತುಂಬಿಸುವುದರಿಂದ ಗ್ರಾಮೀಣ ಭಾಗದಲ್ಲಿ ಬೋರ್ ವೆಲ್ ಗಳು ರೀಚಾಜ್ 9 ಆಗುತ್ತದೆ. ನಗರ ಪ್ರದೇಶದ ಚಿತ್ರಣ ಬೇರೆ ಇದ್ದು, ಬೋರ್ ವೆಲ್ ಗಳನ್ನು ರೀಚಾರ್ಜ್ ಮಾಡಲು ಹೊಸ ಚಿಂತನೆ ನಡೆಸಬೇಕಿದೆ ಎಂದರು.

ಬರ ಪರಿಸ್ಥಿತಿಯ ಹಿನ್ನಲೆ ಸಾಂಕ್ರಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಹೊಸ ಬೋರ್ ವೆಲ್ ಕೊರೆಸಿದ ಸಂದರ್ಭದಲ್ಲಿ ಹಾಗೂ ಕುಡಿಯುವ ನೀರನ್ನು ಒದಗಿಸುವ ಮೂಲಗಳಲ್ಲಿ ನೀರನ್ನು ನಿಗಧಿತವಾಗಿ ರಸಾಯನಿಕ ಹಾಗೂ ಜೈವಿಕ ಪರೀಕ್ಷೆಗಳಿಗೆ ಒಳಪಡಿಸಿ. ಹೆಚ್ಚಿನ ನೀರಿನ ಬೇಡಿಕೆ ಇರುವ ಭತ್ತ, ಕಬ್ಬು, ಮುಂತಾದ ವಾಣಿಜ್ಯ ಬೆಳೆಗಳನ್ನು ಬರ ಪರಿಸ್ಥಿತಿಯ ಹಿನ್ನಲೆಯಲ್ಲಿ ಬೆಳೆಯದಮತೆ ಈಗಾಗಲೇ ಕೃಷಿ ಇಲಾಖೆಯಿಂದ ರೈತರಿಗೆ ತಿಳಿಸಲಾಗಿದೆ. ಇದರ ಬದಲಾಗಿ ಪರ್ಯಾಯ ಬೆಳೆಗಳಾದ ರಾಗಿ, ಜೋಳ, ಸಿರಿಧಾನ್ಯ ಇನ್ನಿತರೆ ಬೆಳೆಗಳನ್ನು ಬೆಳೆಯಲು ನಿರಂತರವಾಗಿ ಜಾಗೃತಿ ಮೂಡಿಸಲಾಗುತ್ತಿದೆ. ರೈತರು ಸಹ ಸಹಕರಿಸಬೇಕು. ಬರಗಾಲ ಮುಂದುವರೆದಲ್ಲಿ ಬೋರ್ ವೆಲ್ ಗಳಿಂದ ದೊರೆಯುವ ನೀರು ಸಹ ಕ್ಷೀಣಿಸಬಹುದು ನಂತರ ಟ್ಯಾಂಕರ್ ಅಥವಾ ಖಾಸಗಿ ಟ್ಯಾಂಕರ್ ಅವಲಂಬಿಸಬೇಕಾಗುತ್ತದೆ. ಅಧಿಕಾರಿಗಳು ಕರ್ಯಪ್ರವೃತ್ತರಾಗಿ ಯೋಜನೆಗಳನ್ನು ರೂಪಿಸಿಕೊಳ್ಳಿ ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ ಕೆರೆ ತುಂಬಿಸುವ ಸಂದರ್ಭದಲ್ಲಿ ಎಲ್ಲಾ ಕೆರೆಗಳಿಗೆ ನೀರು ಸಮನಾಗಿ ಹಂಚಿಕೆಯಾಗಬೇಕು. ಮೈಸೂರು ನಗರ ವ್ಯಾಪ್ತಿಯಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳು ಕಸವನ್ನು ಸರಿಯಾಗಿ ವಿಲೇವಾರಿ ಮಾಡಲು ಕ್ರಮ ವಹಿಸಬೇಕು ಎಂದರು. ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ ರೆಡ್ಡಿ ಮಾತನಾಡಿ ಹೂಟಗಳ್ಳಿಯ 6 ವಾರ್ಡ್‌ಗಳಿಗೆ 6 ಟ್ಯಾಂಕರ್ ಮೂಲಕ, ಬೋಗಾದಿಯ 2 ವಾರ್ಡ್ ಗಳಿಗೆ 3 ಟ್ಯಾಂಕರ್ ಮೂಲಕ ಹಾಗೂ ರಮ್ಮನಳ್ಳಿಯ 5 ವಾರ್ಡ್ ಗಳಿಗೆ 5 ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ರೈತರು ಕಳೆದ ಸಾಲಿನಲ್ಲಿ 2,22,000 ಹೆಕ್ಟೇರ್ ಭೂಮಿಯಲ್ಲಿ ಬಿತ್ತನೆ ಮಾಡಿದ್ದರು, ಸದರಿ ಸಾಲಿನಲ್ಲಿ 60– 70 ಸಾವಿರ ಹೆಕ್ಟೇರ್ ಬಿತ್ತನೆ ಕಡಿಮೆಯಾಗಿದ್ದು, 1,66,000 ಹೆಕ್ಟೇರ್ ಬಿತ್ತನೆಯಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತೆ ಎಂ.ಕೆ. ಸವಿತಾ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಯತೀಂದ್ರ ಸಿದ್ದರಾಮಯ್ಯರಿಂದ ಬರ ವೀಕ್ಷಣೆ



**ಮೈಸೂರು:** ನಗರಾಭಿವೃದ್ಧಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ನಂಜನಗೂಡು ತಾಲೂಕಿನ ವಿವಿಧ ಭಾಗಗಳಿಗೆ ಭೇಟಿ ನೀಡಿ ಬರ ವೀಕ್ಷಣೆ ಮಾಡಿದರು.

ನಂಜನಗೂಡು ತಾಲೂಕಿನ ಹನುಮನಪುರ ಗ್ರಾಮಕ್ಕೆ ಭೇಟಿ ನೀಡಿ ಬರ ವೀಕ್ಷಣೆ ಮಾಡಿದರು. ಮೈಸೂರು ಜಿಲ್ಲೆಗೆ ಮಳೆ ಕೊರತೆ ಉಂಟಾಗಿದ್ದು, ರೈತರು ಬೆಳೆದ ಬೆಳೆಗಳು ಮಳೆ ಇಲ್ಲದೆ ಒಣಗುತ್ತಿವೆ. ಹೆಚ್ಚಿನ ಪ್ರಮಾಣದ ಬೆಳೆ ನಷ್ಟ ಉಂಟಾಗಿದೆ. ಇಂದು ನಂಜನಗೂಡು ನಂಜನಗೂಡು ತಾಲ್ಲೂಕು, ನಾಳೆ ಹುಣಸೂರು ತಾಲ್ಲೂಕಿಗೆ ಬೇಟಿ ನೀಡಿ ಬರ ವೀಕ್ಷಣೆ ಮಾಡಲಾಗುವುದು. ಕುಡಿಯುವ ನೀರಿನ ಬಳಕೆಗೆ ಕಾರ್ಯ ಗ್ರಾಮದಲ್ಲಿ 12 ಕೊಳವೆ ಬಾವಿಗಳನ್ನು ಕೊರೆಸಿದ್ದು, ಇದರಲ್ಲಿ 3 ರಲ್ಲಿ ಮಾತ್ರ ನೀರು ಬರುತ್ತಿವೆ. ಗ್ರಾಮಸ್ಥರ ಕೋರಿಕೆಯ ಮೇರೆಗೆ ಕೆರೆಯ ಬಳಿ ಮತ್ತೊಂದು ಕೊಳವೆ ಬಾವಿ ಕೊರೆಸುವಂತೆ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಇಂಜಿನಿಯರ್ ವರಿಗೆ ಸೂಚನೆ ನೀಡಿದ ಅವರು ಅದರಲ್ಲೂ ನೀರು ಬರದೆ ಇದ್ದರೆ ಟ್ಯಾಂಕರ್ ಮೂಲಕ ನೀರು ಪೂರೈಸುವಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಜ್ಯಾದ್ಯಂತ ಜಿಲ್ಲೆಗಳ ಬರ ಅಧ್ಯಯನಕ್ಕೆ ನೇಮಿಸಿರುವ ಉಸ್ತುವಾರಿ ಸಚಿವಗಳು ಆಯಾ ಜಿಲ್ಲೆಗಳಲ್ಲಿ ಬೇಟಿ ನೀಡುವಂತೆ ಮಾನ್ಯ ಮುಖ್ಯಮಂತ್ರಿ ನಿರ್ದೇಶನ ನೀಡಿರುತ್ತಾರೆ. ಅದರಂತೆ ಬರ ವೀಕ್ಷಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಊರಿನ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಸಚಿವರಿಗೆ ಮನವಿಗಳನ್ನು ಸಲ್ಲಿಸಿ, ಕಬಿನಿ ಜಲಾಶಯ ತುಂಬಿದ್ದು, ಸುತ್ತಮುತ್ತಲಿನ ಗ್ರಾಮಗಳ ಕೆರೆ ಕಟ್ಟೆಗಳನ್ನು ತುಂಬಿಸಲು ಕ್ರಮವಹಿಸಬೇಕು. ಇದರಿಂದ ಅಂತರ್ಜಲ ಮಟ್ಟ ಹೆಚ್ಚಾಗುತ್ತದೆ. ದನಕರುಗಳಿಗೆ ಕುಡಿಯಲು ನೀರು ದೊರೆಯುತ್ತದೆ. ನಾಲೆಗಳಲ್ಲಿ ಹೂಳು ತುಂಬಿದ್ದು ಹೂಳು ತೆಗೆಸಬೇಕು. ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಪರಿಹರಿಸಬೇಕು ಎಂದು ಮನವಿ ಸಲ್ಲಿಸಿದರು. ಈ ಸಂಧರ್ಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಎಸ್.ಬಾಲದಂಡಿ ಸೇರಿ ಇತರರು ಉಪಸ್ಥಿತರಿದ್ದರು.

# ಸಚಿವರಿಂದ ಬರ ಅಧ್ಯಯನ

ಚಾಮರಾಜನಗರ: ಸಚಿವ ಸ್ಥಾನ ಸಿಕ್ಕ ಬಳಿಕ ಪುಟ್ಟರಂಗಶೆಟ್ಟಿ ಜಿಲ್ಲೆಯ ವಿವಿಧೆಡೆ ಬರ ಅಧ್ಯಯನ ಪ್ರವಾಸ ಕೈಗೊಂಡಿದ್ದು, ಚಾಮರಾಜನಗರ ತಾಲೂಕು, ಗುಂಡ್ಲುಪೇಟೆ ತಾಲೂಕಿನಲ್ಲಿ ಬರ ಅಧ್ಯಯನ ನಡೆಸಿದರು.



ತಾಲೂಕಿನ ಹರವೆ, ಮಲೆಯೂರು ಹಾಗೂ ಗುಂಡ್ಲುಪೇಟೆ ತಾಲೂಕಿನ ಸಿಗೇವಾಡಿ, ಬಲಚವಾಡಿ, ರಂಗನಾಥಪುರ ಗ್ರಾಮಗಳಲ್ಲಿ ಶಾಸಕ ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷ ಮರಿಸ್ವಾಮಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಬೆಳೆ ವೀಕ್ಷಿಸಿದರು. ನೀರು ಕೊರತೆಯಾಗಿ ಒಣಗಿರುವ ಹತ್ತಿ, ಜೋಳ, ಬಾಳೆ ಫಸಲನ್ನು ವೀಕ್ಷಿಸಿದರು. ಮಳೆ ಕೊರತೆಯಿಂದ ಫಸಲು ಒಣಗಿದೆ, ಕೊಳವೆ ಬಾವಿಗಳಲ್ಲೂ ನೀರಿಲ್ಲ, ಸೂಕ್ತ ಪರಿಹಾರ ಕೊಡಿಸಿ ಎಂದು ಸಚಿವರಲ್ಲಿ ರೈತರು ಮನವಿ ಮಾಡಿದರು.

ಸರ್ಕಾರಕ್ಕೆ ವಸ್ತುಸ್ಥಿತಿ ಬಗ್ಗೆ ವರದಿ ಸಲ್ಲಿಸಲಿದ್ದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ. ಬರಪೀಡಿತ ಜಿಲ್ಲೆ ಎಂದು ಘೋಷಿಸಲು ನಾನೂ ಕೂಡ ಮುಖ್ಯಮಂತ್ರಿಗೆ ಮನವಿ ಮಾಡುತ್ತೇನೆ ಎಂದರು.

ಸಾಲುಸಾಲು ಸಮಸ್ಯೆಗಳನ್ನು ತೆರೆದಿಟ್ಟ ಜನರು: ಸಚಿವ ಪುಟ್ಟರಂಗಶೆಟ್ಟಿ ಬರ ಅಧ್ಯಯನ ಪ್ರವಾಸ ಕೈಗೊಂಡಿದ್ದ ವೇಳೆ ಅದ್ದೂರಿ ಸ್ವಾಗತವೂ ಸಿಕ್ಕಿತು. ಜೊತೆಗೆ, ಸಾಲುಸಾಲು ಸಮಸ್ಯೆಗಳ ಅನಾವರಣವೂ ಆಯಿತು. ಹಳೇಪುರ ಗ್ರಾಮದಲ್ಲಿ ವ್ಯಕ್ತಿಯೊಬ್ಬರು ತಮ್ಮ ಮಗನಿಗೆ ಕಳೆದ 6 ತಿಂಗಳಿನಿಂದ ವಿಕಲಚೇತನ ಪಿಂಚಣಿ ಬರುತ್ತಿಲ್ಲ ಎಂದು ಅಳಲು ತೋಡಿಕೊಂಡರು. ಅಂಗವಿಕಲ ವೇತನ ಬರ್ತಾ ಇಲ್ಲ. ಜಿಲ್ಲಾಧಿಕಾರಿಗಳ ಕಚೇರಿಗೆ ಹೋಗಿ ಸಾಕಾಗಿ ಹೋಗಿದೆ. ಏನೋ ಒಂದು ಕಾರಣ ಹೇಳಿ ಕಚೇರಿಯಿಂದ ಕಚೇರಿಗೆ ಅಲೆಸುತ್ತಿದ್ದಾರೆ. ಮಳೆ ಇಲ್ಲ, ಬೆಳೆ ಇಲ್ಲ, ಮಗನಿಗೂ ಪಿಂಚಣಿಯೂ ಇಲ್ಲ ಎಂದು ಪೋಷಕರು ಆಕ್ರೋಶ ಹೊರಹಾಕಿದರು. ಸಚಿವರು ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಗುಂಡ್ಲುಪೇಟೆ ತಾಲೂಕಿನ ರಂಗನಾಥಪುರ ಗ್ರಾಮದಲ್ಲಿ ಮಹಿಳೆಯರು ತಮ್ಮ ಗ್ರಾಮದಲ್ಲಿ ಮೂಲಸೌಕರ್ಯ ಕೊರತೆ ಇದ್ದು ರಸ್ತೆ, ಕುಡಿಯುವ ನೀರು, ಚರಂಡಿ ವ್ಯವಸ್ಥೆ ಇಲ್ಲವೆಂದು ದೂರಿದರು.

# ಅಪಪ್ರಚಾರ ಮಾಡಿದ್ರೆ ಮಾನನಷ್ಟ ಕೇಸ್



ಚಾಮರಾಜನಗರ, ಮಂತ್ರಿಗಿರಿಗಾಗಿ ಪೇಮೆಂಟ್ ನೀಡಿದ್ದಾರೆ, ವಿಧಾನಸೌಧದಲ್ಲಿ ಹಣ ಪಡೆದಿದ್ದರು ಎಂಬ ಮಾಜಿ ಸಚಿವ ತಿಮ್ಮಾಪುರ ಹಾಗೂ ಕಾಂಗ್ರೆಸ್ ಮುಖಂಡ ಎಸ್.ಜಿ.ನಂಜಯ್ಯನಮಠ ಅವರದ್ದು ಎನ್ನಲಾದ ಆಡಿಯೋ ಬಗ್ಗೆ ಸಚಿವ ಸಿ.ಪುಟ್ಟರಂಗಶೆಟ್ಟಿ ಗರಂ ಆಗಿ ಪ್ರತಿಕ್ರಿಯಿಸಿದ್ದಾರೆ. ಚಾಮರಾಜನಗರದ ಪ್ರವಾಸಿಮಂದಿರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪುಟ್ಟರಂಗಶೆಟ್ಟಿ ಎಲ್ಲಿ ಹಣ ಹೂತಿಟ್ಟಿದ್ದರು, ಅವರಿಗೆ ಅಷ್ಟೊಂದು ದುಡ್ಡು ಎಲ್ಲಿಂದ ಬಂತು ಎಂದು ಅವರನ್ನೇ ಕೇಳಿ, ನಾನು ಬೇರೆ ರೀತಿ ಮಾತನಾಡಬೇಕಾಗುತ್ತದೆ ಎಂದು ಸಿಡಿಮಿಡಿಕೊಂಡರು.

**ಅಪಪ್ರಚಾರ ಮಾಡಿದ್ರೆ ಮಾನನಷ್ಟ ಮೊಕದ್ದಮೆ ಹೂಡುವೆ**

ವಿಧಾನಸೌಧದಲ್ಲಿ ಹಣ ಪಡೆದ ಆರೋಪದ ಬಗ್ಗೆ ಎಲ್ಲಾ ಪರಿಶೀಲನೆ ಆಗಿದೆ, ವಜಾ ಕೂಡ ಆಗಿದೆ. ಈ ರೀತಿ ಅಪಪ್ರಚಾರ ಮಾಡಿದರೆ ಮಾನನಷ್ಟ ಮೊಕದ್ದಮೆ ಹೂಡುತ್ತೇನೆ. ನಾನು ಆಡಿಯೋ ಹುಡುಕುತ್ತಿದ್ದೇನೆ. ಯಾರು ಆತ, ಯಾಕೆ ಆ ರೀತಿ ಹೇಳಿದ್ದಾನೆ ಎಂದು ಪರಿಶೀಲಿಸುತ್ತಿದ್ದೇನೆ ಎಂದರು.

ಚಕ್ಕೆರೆ ಕೆಪಿಎಸ್‌ನಲ್ಲಿ 'ಸಾಧಕರೊಂದಿಗೆ ಸಮಾಗಮ

# ಕೀಳರಿಮೆ ಬೇಡ ಸಾಧನೆಯೇ ಗುರಿಯಾಗಲಿ: ಯೋಗಾನಂದ

ಚನ್ನಪಟ್ಟಣ: ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಯಾವುದೇ ಕೀಳರಿಮೆಗೆ ಒಳಗಾಗದೆ ಆತ್ಮವಿಶ್ವಾಸದಿಂದ ಶ್ರಮಿಸಿದರೆ ಜಾಗತಿಕ ಮಟ್ಟದಲ್ಲೂ ಸಾಧನೆ ಮಾಡಲು ಸಾಧ್ಯ ಎಂದು ನಾರ್ವೆಯಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿರುವ ಚಕ್ಕೆರೆ ಕರ್ನಾಟಕ ಪಬ್ಲಿಕ್ ಶಾಲೆಯ ಹಳೆಯ ವಿದ್ಯಾರ್ಥಿ ಯೋಗಾನಂದ ಹೇಳಿದರು.

ಚನ್ನಪಟ್ಟಣ ತಾಲ್ಲೂಕಿನ ಚಕ್ಕೆರೆ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ 'ಸಾಧಕರೊಂದಿಗೆ ಸಮಾಗಮ' ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.




ನಾನು ಕೂಡ ಇದೇ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿ ಇಂದು ಯುರೋಪ್ ಖಂಡದ ನಾರ್ವೆ ದೇಶದಲ್ಲಿ ಕಳೆದ 15 ವರ್ಷಗಳಿಂದ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದೇನೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಅಥವಾ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಎಂಬ ಕೀಳರಿಮೆಯನ್ನು ತೊರೆದು ಸ್ಪಷ್ಟ ಗುರಿಯೊಂದಿಗೆ ಅಧ್ಯಯನ ಮಾಡಬೇಕು. ನಿರಂತರ ಪರಿಶ್ರಮ, ಶಿಸ್ತು ಮತ್ತು ಆತ್ಮವಿಶ್ವಾಸ ಯಶಸ್ಸಿನ ಮೂಲಮಂತ್ರಗಳು. ತಂದೆ‌ತಾಯಿ ಹಾಗೂ ಗುರುಹಿರಿಯರನ್ನು ಗೌರವಿಸಿ, ಎಷ್ಟೇ ಉನ್ನತ ಸ್ಥಾನಕ್ಕೇರಿದರೂ ತಾವು ಕಲಿತ ಶಾಲೆಯನ್ನು ಎಂದಿಗೂ ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯ ಶಿಕ್ಷಕ ಯೋಗೇಶ್ ಚಕ್ಕೆರೆ ನಮ್ಮ ಶಾಲೆಯ 2001ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಯಾಗಿದ್ದ ಯೋಗಾನಂದ ಅವರು ಇಂದು ನಾರ್ವೆಯಲ್ಲಿ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವುದು ಶಾಲೆಗೆ ಹೆಮ್ಮೆಯ ಸಂಗತಿ. ಅವರ ಸಾಧನೆ ಇಂದಿನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಅವರ ಜೀವನಯಾನವನ್ನು ಮಾದರಿಯಾಗಿ ತೆಗೆದುಕೊಂಡು ಉನ್ನತ ಗುರಿ ಹೊಂದಬೇಕು ಎಂದು ಹೇಳಿದರು.

ಹತ್ತು ದಿನಗಳ ರಜೆಯ ನಿಮಿತ್ತ ಸ್ವದೇಶಕ್ಕೆ ಆಗಮಿಸಿದ್ದ ಯೋಗಾನಂದ ಅವರನ್ನು ಶಾಲೆಗೆ ಆಹ್ವಾನಿಸಿ, ಶಾಲೆಯ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಅವರು ವಿದ್ಯಾರ್ಥಿಗಳೊಂದಿಗೆ ತಮ್ಮ ಜೀವನಾನುಭವಗಳನ್ನು ಹಂಚಿಕೊಂಡು, ಶಿಕ್ಷಣ, ಶಿಸ್ತು ಮತ್ತು ಆತ್ಮವಿಶ್ವಾಸದ ಮಹತ್ವದ ಕುರಿತು ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಮಧುಸೂದನ್, ಬಿ.ಕೆ. ಲತಾ, ರಾಜಣ್ಣ, ಶಶಿರೇಖಾ, ರಶ್ಮಿ, ಶಶಿಕುಮಾರ್, ರಾಜೇಶ್, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನಾಳೆ ಗಾಯನ ಕಾರ್ಯಕ್ರಮ

ಮೈಸೂರು: ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಆ.8 ರ ಬೆಳಗ್ಗೆ 11 ರಿಂದ ರಾತ್ರಿ 7 ರವೆಗೆ ಡಾ.ಎಸ್. ಜಾನಕಿ ಸ್ಮರಣಾರ್ಥ ಪುರಭವನ ಸಭಾಂಗಣದಲ್ಲಿ ಅಮ್ಮನ ನೆನಪು ಶೀರ್ಷಿಕೆಯ ಯುಗಳ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಆಯೋಜಕ ಮೈಸೂರು ಜಯರಾಂ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವೃತ್ತಿ ಗಾಯಕರಾದ ಗೋಪಾಲ್, ಕೃಷ್ಣಮೂರ್ತಿ, ತಮ್ಮರಾಜ್, ವೈ. ಆರ್.ನಾಗೇಂದ್ರ, ತ್ಯಾಗರಾಜ್, ಮಹೇಂದ್ರ, ಲಕ್ಷ?ಮಣ್, ನಂದಕುಮಾರ್, ಟಿ.ವಿ.ಎಸ್. ಕುಮಾರ್, ಶ್ರೀಕಂಠರಾವ್, ಮಂಜು, ಯೋಗಿ, ನಾಗೇಂದ್ರ, ನಂಜುಂಡಯ್ಯ, ಗಾಯಕಿಯರಾದ ಶಾರದಮ್ಮ, ರೀನಾ, ಅಶ್ವಿನಿ ಶಾಸ್ತ್ರಿ, ಶ್ರುತಿ, ರಾಣಿ, ಶಶಿಕಲಾ, ಜಯಲಕ್ಷ್ಮಿ ಹಾಡಲಿದ್ದಾರೆ ಎಂದರು. ನಾಗರಾಜ್ ವಿ. ಭೈರಿ, ರಘುರಾಂ ವಾಜಪೇಯಿ, ವೆಂಕಟೇಶ್, ಸಿ. ನಾರಾಯಣಗೌಡ, ಉದಯಕುಮಾರ್ ಅತಿಥಿಗಳಾಗಿರುವರು. ಕಾರ್ಯಕ್ರಮಕ್ಕೆ ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದರು. ಗೋಪಾಲ್, ಕೃಷ್ಣಮೂರ್ತಿ, ಟಿ.ವಿ.ಎಸ್. ಕುಮಾರ್, ನಾಗೇಂದ್ರ, ಲತಾ ಬಾಲಕೃಷ್ಣ ಇದ್ದರು.



# ಕ್ರೀಡೆಯಿಂದ ಆರೋಗ್ಯ ವೃದ್ಧಿ: ಬಸವರಾಜು



ಮೈಸೂರು: ಕ್ರೀಡೆಯಲ್ಲಿ ಭಾಗವಹಿಸುವುದರಿಂದ ದೈಹಿಕ ಆರೋಗ್ಯ, ಮಾನಸಿಕ ದೃಢತೆ ಮತ್ತು ಆತ್ಮವಿಶ್ವಾಸ ವೃದ್ಧಿಯಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ದೈನಂದಿನ ಜೀವನದಲ್ಲಿ ಆಟೋಟಗಳನ್ನು ರೂಢಿಸಿಕೊಳ್ಳಬೇಕು ಎಂದು ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದ ಸಂಸ್ಥಾಪಕ ಎಸ್.ಬಸವರಾಜು ಸಲಹೆ ನೀಡಿದರು.

ದೈಹಿಕ ಶಿಕ್ಷಣ ಶಿಕ್ಷಕರ ಕ್ರೀಡಾ ಬಳಗದಿಂದ ಕುವೆಂಪುನಗರದ ವಿವೇಕಾನಂದ ಕ್ರೀಡಾಂಗಣದಲ್ಲಿ ಬುಧವಾರ ಆಯೋಜಿಸಿದ್ದ 3ನೇ ವರ್ಷದ ಅರ್ಜುನ ಕಪ್ ಜಿಲ್ಲಾ ಮಟ್ಟದ ಪ್ರೌಢಶಾಲಾ ಬಾಲಕರ ವಾಲಿಬಾಲ್/ ಖೋ, ಖೋ ಹಾಗೂ ಬಾಲಕಿಯರ ಥ್ರೋ ಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರತಿಯೊಂದು ಮಕ್ಕಳಲ್ಲೂ ಅಗಾಧವಾದ ಪ್ರತಿಭೆ ಇದೆ. ಅದನ್ನು ವ್ಯಕ್ತಪಡಿಸಲು ಕ್ರೀಡಾಕೂಟಗಳು ಮುಖ್ಯ ವೇದಿಕೆಯಾಗಿದೆ. ನಗರ ಹಾಗೂ ಗ್ರಾಮೀಣ ಕ್ರೀಡಾಪಟುಗಳಿಗೆ ಸೂಕ್ತ ವೇದಿಕೆ ಕಲ್ಪಿಸುವುದೇ ಈ ಕ್ರೀಡಾಕೂಟದ ಮುಖ್ಯ ಉದ್ದೇಶವಾಗಿದೆ. ಇಲ್ಲಿನ ಪ್ರತಿಭೆಗಳು ಕ್ರೀಡೆಯಲ್ಲಿ ಭಾಗವಹಿಸಿ ಜಿಲ್ಲೆ ಮತ್ತು ರಾಜ್ಯಕ್ಕೆ ಹೆಸರು ಮತ್ತು ಕೀರ್ತಿ ತರಬೇಕು. ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲೂ ಮಿಂಚಬೇಕು. ಕ್ರೀಡೆಯಲ್ಲಿ ಸೋಲು–ಗೆಲುವು ಮುಖ್ಯವಲ್ಲ, ಇಲ್ಲಿ ಸ್ಪರ್ಧಿಸುವುದು ಮುಖ್ಯ. ಇಂತಹ ಕ್ರೀಡಾ ವೇದಿಕೆಗಳನ್ನು ಸಿಕ್ಕಾಗ ಸದ್ಬಳಕೆ ಮಾಡಿಕೊಳ್ಳಬೇಕು. ಓದಿನ ಸರಿಸಮಾನವಾಗಿ ಕ್ರೀಡೆಯಲ್ಲೂ ತೊಡಗಬೇಕು. ಮಕ್ಕಳು ಕ್ರೀಡಾಸ್ಫೂರ್ತಿ ತೋರಿಸಬೇಕು ಎಂದು ಸಲಹೆ ನೀಡಿದರು.

ಸಂಜೆ ನಡೆದ ಸಮಾರೋಪ ಸಮಾರಂಭದಲ್ಲಿ ಶಾಸಕ ಶ್ರೀವತ್ಸ ವಿಜೇತರಿಗೆ ಬಹುಮಾನ ವಿತರಣೆ ಮಾಡಿ ಶುಭಕೋರಿದರು. ಕಾರ್ಯಕ್ರಮದಲ್ಲಿ ಸ್ಪೈನಿಕ ಅಕಾಡೆಮಿ ಸಂಸ್ಥಾಪಕ ಸಿ.ಎಂ.ಶ್ರೀಧರ್, ದೈಹಿಕ ಶಿಕ್ಷಣ ಪರಿಷತ್ತಿನ ಕೃಷ್ಣಸ್ವಾಮಿ, ಮಧು, ಮಲ್ಲೇಶ್, ಅನಿಲ್, ವೆಂಕಟೇಶ್, ಮಂಜು, ನಾಗೇಂದ್ರ, ಗಂಗೇಶ್, ರವಿ, ಚಂದ್ರ, ಶಿವಕುಮಾರ್ ಇತರರು ಇದ್ದರು. ವಾಲಿಬಾಲ್ (ಬಾಲಕರ ವಿಭಾಗ): ಪೊಲೀಸ್ ಪಬ್ಲಿಕ್ ಶಾಲೆ(ಪ್ರ), ಜೆಎಸ್ಎಸ್ಎಸ್(ದ್ವಿ), ವಿಜಿಕೆ ಮುಳ್ಳೂರು(ತೃ), ಪಶ್ಚಿಮ ಲಯನ್ಸ್, ಸೇವಾನಿಕೇತನ(ನಾ). ಖೋಖೋ: ಈಸ್ಟ್ ವೆಸ್ಟ್ ಇಂಟರ್ ನ್ಯಾಷನಲ್ ಸ್ಕೂಲ್(ಪ್ರ), ಎಎಂಐಎಸ್ ಹೆಬ್ಬಾಳ್ (ದ್ವಿ), ಕುವೆಂಪುನಗರ ಕೆಪಿಎಸ್(ತೃ), ವಿವಿಐಬಿಎಂ ಶ್ರೀ(ನಾ). ಥ್ರೋ ಬಾಲ್ ಬಾಲಕಿಯರ ವಿಭಾಗ : ಬೋಗಾದಿ ಕ್ರಿಸ್ಟ್ ಪಬ್ಲಿಕ್ ಶಾಲೆ(ಪ್ರ), ಸಿದ್ಧಾರ್ಥನಗರ ಜೆಎಸ್ಎಸ್ಎಸ್(ದ್ವಿ), ತಾಂಡವಪುರ ಕ್ರಿಸ್ಟ್ ಪಬ್ಲಿಕ್ ಶಾಲೆ (ತೃ), ಪ್ರಮತಿ ಹಿಲ್ ವ್ಯೂವ್ ಅಕಾಡೆಮಿ(ನಾ).

# 'ಶತಚಂಡಿಕಾ ಯಾಗ'ಕ್ಕೆ ಚಾಲನೆ



ಮೈಸೂರು: ಗಣಪತಿ ಸಚ್ಚಿದಾನಂದ ಆಶ್ರಮದ ಅವಧೂತ ದತ್ತ ಪೀಠದಲ್ಲಿ ಆಷಾಢ ಮಾಸ ಹಾಗೂ ಚಾತುರ್ಮಾಸ್ಯದ ಪ್ರಯುಕ್ತ ಆಯೋಜಿಸಲಾಗಿರುವ 'ಶತಚಂಡಿಕಾ ಯಾಗ'ಕ್ಕೆ ಆಶ್ರಮದ ಕಿರಿಯ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ವಿಧ್ಯುಕ್ತವಾಗಿ ಚಾಲನೆ ನೀಡಿದರು.

ಈ ವೇಳೆ ತಮ್ಮ ಆಶೀರ್ವಚನ ಬೋಧಿಸಿದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ, ವಿಶ್ವ ಶಾಂತಿಯ ಸಂಕಲ್ಪ ಸಕಲರ ಒಳಿತಿಗಾಗಿ, ಲೋಕ ಕಲ್ಯಾಣಕ್ಕಾಗಿ ಚಂಡಿಕಾ ಮಾತೆ ಮತ್ತು ಚಾಮುಂಡೇಶ್ವರಿಯಲ್ಲಿ ಎಲ್ಲರೂ ಭಕ್ತಿಯಿಂದ ಪ್ರಾರ್ಥಿಸಬೇಕು. ಆಶ್ರಮದಲ್ಲಿ ಸತತ ನಾಲ್ಕನೇ ವರ್ಷ ಈ ಶತಚಂಡಿಕಾ ಯಾಗವನ್ನು ಆಯೋಜಿಸಲಾಗಿದ್ದು, ಇದೇ ರೀತಿ ಹತ್ತು ವರ್ಷಗಳ ಕಾಲ ಮುಂದುವರಿಸಿ, ತದನಂತರ ಬೃಹತ್ 'ಸಹಸ್ರ ಚಂಡಿಕಾ ಯಾಗ'ವನ್ನು ಮಾಡುವ ಸಂಕಲ್ಪ ಹೊಂದಲಾಗಿದೆ ಎಂದು ತಿಳಿಸಿದರು. ಗಣಪತಿ ಸಚ್ಚಿದಾನಂದ ಸ್ವಾಮೀಜಿಗೆ ಚಂಡಿಕಾ ಹೋಮವೆಂದರೆ ಅತ್ಯಂತ ಪ್ರೀತಿ. ನವರಾತ್ರಿಯ ಮಹಾನವಮಿಯ ದಿನ ಸ್ವತಃ ಶ್ರೀಗಳೇ ಅಮ್ಮನವರ ರೂಪದಲ್ಲಿ ಬಂದು ಯಾಗದ ಪೂರ್ಣಾಹುತಿ ಸಮರ್ಪಿಸುವ ದೃಶ್ಯ ಕಣ್ಣನ ಸೆಳೆಯುವಂತಿರುತ್ತದೆ ಎಂದು ಸ್ಮರಿಸಿದರು. ಶತಚಂಡಿಕಾಯಾಗದ ವೇಳೆ ಮುಡಾ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್, ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ವಿಕಾಸ್ ಶಾಸ್ತ್ರಿ, ಕಲ್ಯಾಣ್ ಇತರರು ಉಪಸ್ಥಿತರಿದ್ದರು.

# ಆ.8ರಂದು ವಿಪಿಎಫ್ ಪದಾಧಿಕಾರಿಗಳ ಪದಗ್ರಹಣ



ಮೈಸೂರು: ತ್ರಿಮತಸ್ಥ ಬ್ರಾಹ್ಮಣ ಸಮುದಾಯಗಳನ್ನು ಒಂದೇ ವೇದಿಕೆಯಡಿಯಲ್ಲಿ ಒಗ್ಗೂಡಿಸಿ, ಪರಸ್ಪರ ಸಹಕಾರ, ಸೇವಾ ಮನೋಭಾವ, ಸಮಾಜಮುಖಿ ಚಟುವಟಿಕೆಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ದಶಕಗಳಿಂದ ಕಾರ್ಯಪ್ರವೃತ್ತವಾಗಿರುವ ವಿಪ್ರ ಪ್ರೊಫೆಷನಲ್ ಫೋರಂ(ವಿಪಿಎಫ್) ವತಿಯಿಂದ ಆ.8ರಂದು ವಿಪಿಎಫ್‌ನ 2026–28ನೇ ಸಾಲಿನ ಕಾರ್ಯಕಾರಿ ಸಮಿತಿಯ ಪದಗ್ರಹಣ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮುದಾಯದ ಸಾಧಕರಿಗೆ "ವಿಪ್ರರತ್ನ" ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ.

ನಗರದ ಗಣಪತಿ ಸಚ್ಚಿದಾನಂದ ಆಶ್ರಮದ ನಾದಮಂಟಪದಲ್ಲಿ ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಹಾಗೂ ಕಿರಿಯ ಶ್ರೀಗಳಾದ ದತ್ತ ವಿಜಯಾನಂದ ಸ್ವಾಮೀಜಿಗಳ ಸಾನಿಧ್ಯದಲ್ಲಿ ಸಮಾರಂಭ ನಡೆಯಲಿದೆ. 10ನೇ ವರ್ಷದ ಸಂಭ್ರಮಾಚರಣೆ ಹಾಗೂ ವಿಪ್ರರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮೈಸೂರು ಸೇರಿದಂತೆ ವಿವಿಧೆಡೆಗಳಲ್ಲಿರುವ ತ್ರಿಮತಸ್ಥ ಬ್ರಾಹ್ಮಣ ಸಮುದಾಯದ ನೂರಾರು ಮಂದಿ ಭಾಗವಹಿಸಲಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ವಿಪ್ರ ಪ್ರೊಫೆಷನಲ್ ಫೋರಂನ ನೂತನ ಅಧ್ಯಕ್ಷ ಡಾ.ಎಸ್.ಮುರುಳಿ, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ವಿಪ್ರ ಸಮುದಾಯದವರು ಪರಸ್ಪರ ಪರಿಚಿತರಾಗಿ, ಅಗತ್ಯ ಸಂದರ್ಭದಲ್ಲಿ ಪರಸ್ಪರ ಸಹಕಾರಿಯಾಗಬೇಕು. ವೇದ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಇನ್ನಷ್ಟು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಉದ್ದೇಶವೂ ಈ ಕಾರ್ಯಕ್ರಮದ ಪ್ರಮುಖ ಆಶಯವಾಗಿದೆ ಎಂದರು.

ಈ ನಿಟ್ಟಿನಲ್ಲಿ ವಿಪ್ರ ಪ್ರೊಫೆಷನಲ್ ಫೋರಂ ಹತ್ತು ವರ್ಷಗಳಿಂದ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದು, ಇದೀಗ ಹೊಸ ಕಾರ್ಯಕಾರಿ ಸಮಿತಿಯ ಪದಗ್ರಹಣದ ಹಿನ್ನೆಲೆಯಲ್ಲಿ ಫೋರಂನ ಧ್ಯೇಯ, ಸಾಧನೆಗಳು, ಮುಂದಿನ ಕಾರ್ಯಯೋಜನೆಗಳ ಕುರಿತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಇದರ ಭಾಗವಾಗಿ ಆ. 8ರ ಶನಿವಾರ ಸಂಜೆ 6 ಗಂಟೆಗೆ ಗಣಪತಿ ಸಚ್ಚಿದಾನಂದ ಆಶ್ರಮದ ನಾದಮಂಟಪದಲ್ಲಿ ಸಮಾರಂಭ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಳೆದ ಹತ್ತು ವರ್ಷಗಳ ಹಿಂದೆ ಮೈಸೂರಿನಲ್ಲಿ ಆರಂಭವಾದ ವಿಪ್ರ ಪ್ರೊಫೆಷನಲ್ ಫೋರಂ, ಆರಂಭದಲ್ಲಿ ಶಿಕ್ಷಣ ಕ್ಷೇತ್ರದ ವೃತ್ತಿಪರರನ್ನು ಒಗ್ಗೂಡಿಸುವ ಉದ್ದೇಶದಿಂದ ಕಾರ್ಯಾರಂಭ ಮಾಡಿತ್ತು. ಆದರೆ ಇಂದು ಶಿಕ್ಷಣ ಮಾತ್ರವಲ್ಲದೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಪ್ರ ಸಮುದಾಯದ ವೃತ್ತಿಪರರನ್ನು ಒಂದೇ ವೇದಿಕೆಗೆ ತರುವ ಸಂಘಟನೆಯಾಗಿ ಬೆಳೆಯುತ್ತಿದೆ. 10ನೇ ವರ್ಷದ ಅಂಗವಾಗಿ ಮೈಸೂರು ಹಾಗೂ ಸುತ್ತಮುತ್ತಲಿನ ವಿಪ್ರ ಸಮುದಾಯದ ಎಲ್ಲರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಪರಸ್ಪರ ಪರಿಚಯ, ಸಹಕಾರ ಮತ್ತು ಸಂಘಟನೆ ವೃದ್ಧಿಸುವ ಉದ್ದೇಶದಿಂದ ಈ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

"ವಿಪ್ರರತ್ನ" ಪ್ರಶಸ್ತಿ ಪ್ರದಾನ: ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಶ್ರೀ ಶಂಕರನಾಥ್ ಜೋಯಿಸ್, ಚಾಮುಂಡಿಬೆಟ್ಟದ ಶಶಿಶೇಖರ ದೀಕ್ಷಿತ್, ಶಂಕರ ಮಠದ ಆಚಾರ್ಯರು, ಉತ್ತರಾದಿ ಮಠದ ಅನಿರುದ್ಧಾಚಾರ್ಯರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ 15 ಗಣ್ಯರಿಗೆ "ವಿಪ್ರರತ್ನ" ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಈ ಎಲ್ಲಾ ಕಾರ್ಯಕ್ರಮದ ನಂತರ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಗಳ ಆಶೀರ್ವಚನ ಇರಲಿದ್ದು, ಬಳಿಕ ಎಲ್ಲರಿಗೂ ಭೋಜನ ಹಾಗೂ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

# ಮತದಾರರ ಬಗ್ಗೆ ಕಾಂಗ್ರೆಸ್‌ಗೆ ಕಾಳಜಿ

## ವಾಸ ದೃಢೀಕರಣ ಪತ್ರ ಕೊಡುವ ಅವಕಾಶ ರಾಜ್ಯ ಸರ್ಕಾರಕ್ಕಿದೆ, ಬಿಜೆಪಿ ವಿರೋಧ ಸಲ್ಲದು



ರಾಮನಗರ: ಎಸ್.ಐ.ಆರ್ ಪ್ರಗತಿಯಲ್ಲಿದ್ದು ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಕೈಬಿಟ್ಟು ಹೋಗಬಾರದು ಎಂಬ ಉದ್ದೇಶದಿಂದ ರಾಜ್ಯದಲ್ಲಿ ವಾಸ ಮಾಡುತ್ತಿರುವ ನಾಗರೀಕರಿಗೆ ರಾಜ್ಯ ಸರ್ಕಾರ ವಾಸ ದೃಢೀಕರಣ ಕೊಡಲು ಉದ್ದೇಶಿಸಿದೆ, ಆದರೆ ಬಿಜೆಪಿ ಪಕ್ಷ ಇದನ್ನು ವಿರೋಧಿಸುತ್ತಿದೆ ಎಂದು ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ವಿ.ಆರ್.ಸುದರ್ಶನ್ ದೂರಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರಕ್ಕೆ ಪೌರತ್ವ ಪ್ರಮಾಣ ಪತ್ರವನ್ನು ಕೊಡುವ ಅಧಿಕಾರ ಇಲ್ಲ. ಅದೇನಿದ್ದರು. ಕೇಂದ್ರ ಸರ್ಕಾರದ ಅಧಿಕಾರ, ಆದರೆ ವಾಸ ದೃಢೀಕರಣ ಪತ್ರ ಕೊಡಲು ರಾಜ್ಯ ಸರ್ಕಾರಗಳಿಗೆ ಅವಕಾಶವಿದೆ ಎಂದರು.

### ಕಾಂಗ್ರೆಸ್ ವಿರುದ್ಧ ಸುಳ್ಳು ಆರೋಪಗಳು

ಎಸ್‌ಐಆರ್ ವಿಚಾರದಲ್ಲಿ ಕೆಪಿಸಿಸಿ ಅಲರ್ಟ್ ಆಗಿ ಕೆಲಸ ಮಾಡುತ್ತಿದೆ, ನಾವು ಇಷ್ಟು ಸಕ್ರಿಯವಾಗುತ್ತೇವೆ ಎಂದು ನಿರೀಕ್ಷಿಸದ ಬಿಜೆಪಿಯವರು ರಾಜ್ಯ ಸರ್ಕಾರದ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ, ಭಾವನೆಗಳನ್ನು ಉದ್ರೇಕಿಸಿ ರಾಜಕಾರಣ ಮಾಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಪಕ್ಷ ಎಸ್.ಐ.ಆರ್ ವಿ?ಯವನ್ನು ಗಂಭೀರವಾಗಿ ಪರಿಗಣಿಸಿ ಪಕ್ಷದ ಬಿ.ಎಲ್.ಒ 2 ಗಳ ಮೂಲಕ ಮನೆ ಮನೆ ಭೇಟಿ ನೀಡಿ ಮತದಾರರ ಹಕ್ಕು ಖಚಿತಪಡಿಸಿ ಫಾರಂ ಸಂಗ್ರಹಿಸುವ ಕೆಲಸ ಮಾಡುತ್ತಿದೆ. ನಮ್ಮ ಎಲ್ಲಾ ಬಿಎಲ್‌ಓಗಳು ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ, ವಾರ್ ರೂಂ ಆರಂಭಿಸಿ ಪ್ರತಿ ಜಿಲ್ಲೆಗಳಿಗೂ ಎಸ್.ಐ.ಆರ್. ಮಾನಿಟರಿಂಗ್ ಸಮಿತಿ ರಚನೆ ಮಾಡಲಾಗಿದೆ, ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳಿಗೆ ಬಿಎಲ್‌ಓ ನೇಮಕದ ಬಗ್ಗೆ ಆಸಕ್ತಿ ಇದೆಯೋ ಇಲ್ಲವೋ ಗೊತ್ತಿಲ್ಲ. ಕಾಂಗ್ರೆಸ್ ಪಕ್ಷ ಯಶಸ್ವಿಯಾಗಿ ಈ ಕಾರ್ಯದಲ್ಲಿ ತೊಡಗಿಸಿಕೊಂಡಿದೆ, ಇದರಿಂದ ಮತದಾರರಿಗೆ ಅನುಕೂಲವಾಗುತ್ತಿದೆ, ಪಕ್ಷದ ವತಿಯಿಂದ ಸಹಾಯವಾಣಿ ಕೇಂದ್ರ ತೆರೆದು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

### 2015ರಲ್ಲಿ ಎಸ್.ಐ.ಆರ್ ಮಾಡಲಿಲ್ಲವೇಕೆ?

ಪ್ರತಿ ಹತ್ತು ವ?ಕ್ಕೊಮ್ಮೆ ಎಸ್‌ಐಆರ್ ಮಾಡಬೇಕು ಎಂದು ಪ್ರಜಾ ಪ್ರತಿನಿಧಿ ಕಾಯ್ದೆ ಹೇಳುತ್ತದೆ. ಆದರೆ, ಬಿಜೆಪಿಯವರು 2015ರಲ್ಲೇ ಈ ಕೆಲಸ ಮಾಡದೆ ನಿರ್ಲಕ್ಷ್ಯ ತೋರಿದರು. ಈ ಬಗ್ಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿಯವರು ಅಧಿವೇಶನದಲ್ಲಿ ಪ್ರಸ್ತಾಪಿಸಿದ್ದರು. ತದ ನಂತರ ಎನ್.ಡಿ.ಎ ಸರ್ಕಾರ ಎಸ್‌ಐಆರ್‌ಗೆ ಮುಂದಾಗಿದೆ. ಆದರೆ, ಅದನ್ನು ತನ್ನ ರಾಜಕೀಯ ಹಿತಾಸಕ್ತಿಗೆ ಅನುಗುಣವಾಗಿ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಗಂಗಾಧರ್, ಎಸ್‌ಐಆರ್ ಸಮಿತಿ ಉಸ್ತುವಾರಿ ನಿಜಾಂ ಫೌಜ್‌ದಾರ್, ಕಾನೂನು ಘಟಕದ ಅನಂತ ನಾಯಕ್, ವಿಧಾನ ಪರಿ?ತ್ ಸದಸ್ಯ ಎಸ್.ರವಿ, ಮಾಜಿ ಶಾಸಕ ಕೆ.ರಾಜು, ರಾಮನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಜಿಲ್ಲಾ ಕಾರ್ಮಿಕ ಘಟಕದ ಅಧ್ಯಕ್ಷ ಪುಟ್ಟರಾಜು, ನಗರಸಭೆ ಸದಸ್ಯೆ ಪಾರ್ವತಮ್ಮ, ಮುಖಂಡರಾದ ಸಿಎನ್‌ಆರ್ ವೆಂಕಟೇಶ್, ಕೆ.ರಮೇಶ್ ನರಸಿಂಹಯ್ಯ, ದೀಲಿಪ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕೆಪಿಸಿಸಿಯಲ್ಲಿ ವಾರ್ ರೂಂ ಸ್ಥಾಪನೆ

ದೇಶದ ಎಲ್ಲಾ ಬೆಳವಣಿಗೆ, ಆಗುಹೋಗುಗಳನ್ನು ಅರ್ಥಮಾಡಿಕೊಂಡು ಇಂದಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಂದು ಕೆಪಿಸಿಸಿ ಅಧ್ಯಕ್ಷರಾಗಿದ್ದಾಗ ಕಾಂಗ್ರೆಸ್ ನಡೆ ನಿಮ್ಮ ರಕ್ಷಣೆ ಕಡೆ ಎಂಬ ಕಾರ್ಯಕ್ರಮ ನೀಡಿದ್ದರು. ಇದರ ಪರಿಣಾಮ 2013 ರಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿದ್ದ ವಿಧಾನಸಭಾ ಅಭ್ಯರ್ಥಿಗಳು ಮತ್ತು 2024ರಲ್ಲಿ ಸ್ಪರ್ಧಿಸಿದ್ದ ಲೋಕಸಭಾ ಅಭ್ಯರ್ಥಿಗಳು, ಡಿಸಿಸಿ, ಬ್ಲಾಕ್ ಅಧ್ಯಕ್ಷರುಗಳಿಗೆ ಜವಾಬ್ದಾರಿ ನೀಡಲಾಯಿತು. ರಾಜ್ಯದಲ್ಲಿರುವ 59 ಸಾವಿರ ಬೂತ್‌ಗಳಿಗೆ ನೀವು ಬಿಎಲ್‌ಓ–2 ಗಳನ್ನು ನೇಮಕ ಮಾಡಬೇಕೆಂದು ತಿಳಿಸಲಾಯಿತು ಎಂದು ವಿವರಿಸಿದರು.

ಬಿಜೆಪಿಯವರು ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನಲ್ಲಿ ಚುನಾವಣಾ ಆಯೋಗವನ್ನು ದುರುಪಯೋಗಪಡಿಸಿಕೊಂಡು ತಮ್ಮ ಅನುಕೂಲಕ್ಕೆ ತಕ್ಕ ಹಾಗೆ ವಿಧಾನಸಭಾ ಚುನಾವಣೆಗಳಲ್ಲಿ ಗೆಲ್ಲಲು ಹೇಗೆ ಉಪಯೋಗಿಸಿಕೊಳ್ಳಬೇಕೋ ಹಾಗೆ ಎಸ್‌ಐಆರ್ ಅನ್ನು ಅನುಕೂಲ ಮಾಡಿಕೊಂಡರು, ಕರ್ನಾಟಕ ರಾಜ್ಯದಲ್ಲಿ ಅವರ ನಿರೀಕ್ಷೆ ಹುಸಿಯಾಯಿತು. ಪಶ್ಚಿಮ ಬಂಗಾಳ ಮತ್ತು ಬಿಹಾರದ ಚುನಾವಣೆಯಲ್ಲಿ ಪಡೆದ ಲಾಭವನ್ನು ರಾಜ್ಯದಲ್ಲೂ ಪಡೆಯಲು ಪ್ರಯತ್ನಪಟ್ಟರು. ಆದರೆ ಕಾಂಗ್ರೆಸ್ ಪಕ್ಷವು ಮತದಾರರ ಪಟ್ಟಿಯಲ್ಲಿ ಇಷ್ಟೊಂದು ಆಸಕ್ತಿ ತೆಗೆದುಕೊಳ್ಳುತ್ತದೆ ಎಂಬುದನ್ನು ಅವರು ಊಹಿಸಿರಲಿಲ್ಲ ಎಂದರು.

### ಅಲೆಮಾರಿಗಳು, ಅನಕ್ಷರಸ್ಥರ ಕಾಳಜಿ ಇರಲಿ

ಜಿಲ್ಲೆಯಲ್ಲಿ 1 ಲಕ್ಷಕ್ಕೂ ಅಧಿಕ ಮಂದಿ ಮತದಾರರನ್ನು ಎ.ಎಸ್.ಡಿ.ಡಿ.ಒ ಅಂದರೆ ಮರಣ ಹೊಂದಿದವರು, ಖಾಯಂ ಆಗಿ ಸ್ಥಳಾಂತರ ಆದವರು, ಪತ್ತೆಹಚ್ಚಲಾಗದ/ಅಲಭ್ಯ ಮತದಾರರು ಎಂದು ಗುರುತಿಸಲಾಗಿದೆ. ಈ ಪೈಕಿ ಮರಣ ಹೊಂದಿದ ಮತದಾರರನ್ನು ಹೊರತು ಪಡಿಸಿ, ಉಳಿದವರ ಪೈಕಿ ಅಲೆಮಾರಿಗಳು, ಅನಕ್ಷರಸ್ಥರು, ಹೆಸರಿನ ಸ್ಪೆಲ್ಲಿಂಗ್‌ನಲ್ಲಿ ಸಮಸ್ಯೆ ಇದ್ದವರನ್ನು ಗುರುತಿಸಲಾಗಿದೆ. ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಸಾರ್ವಭೌಮರು. ಅಂತಹ ಪ್ರಜೆಗಳ ಬಗ್ಗೆ ಕಾಳಜಿ ಇರಬೇಕು. ಹೀಗೆ ಎ.ಎಸ್.ಡಿ.ಡಿ.ಒ ಎಂದು ಗುರುತಿಸಿ ಪಟ್ಟಿಯಿಂದ ಕೈಬಿಡುವುದು ಸರಿಯಲ್ಲ ಎಂದರು.

# ಆ.9ಕ್ಕೆ ನಾಟಕ ಪ್ರದರ್ಶನ

ಮೈಸೂರು: ರಂಗರಥ ಟ್ರಸ್ಟ್ ವತಿಯಿಂದ ಡಾ. ಸಿದ್ದಲಿಂಗ ಪಟ್ಟಣಶೆಟ್ಟಿ ಅವರ ಅನುವಾದಿತ ನಾಟಕ ಸರ?ಯಾಸ್ತದಿಂದ ಸರ?ಯೋದಯದವರೆಗೆ ಆಧಾರಿತ ಧರ್ಮನಟಿ ಪ್ರದರ್ಶನ ಆ. 9 ರಂದು ಸಂಜೆ 6.30ಕ್ಕೆ ನಟನ ರಂಗಶಾಲೆ ರಂಗ ಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಶ್ರೇತಾ ಶ್ರೀನಿವಾಸ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು 10 ನೇ ಶತಮಾನದ ಮಲ್ಲರಾಜ್ಯದ ರಾಜನ ಕಥೆಯಾಗಿದೆ. ಈ ನಾಟಕದ ವಸ್ತು ಹೆಣ್ಣಿನ ಅಸ್ಮಿತೆ ಪ್ರಶ್ನಿಸುತ್ತದೆಯಲ್ಲದೇ, ಅಂದಿನ ಹಾಗೂ ಇಂದಿನ ಸಾಮಾಜಿಕ ಮತ್ತು ರಾಜಕೀಯ ಸಂಕೀರ್ಣತೆಯನ್ನು ಚರ್ಚಿಸುತ್ತದೆ. ತಾವು ಹಾಗೂ ಆಸಿಫ್ ಕ್ಷತ್ರಿಯ ನಿರ್ದೇಶಿಸಿದ್ದು, ಸಂಗೀತ ಭಿನ್ನಷಡ್ಜ ಅವರದ್ದಾಗಿದೆ ಎಂದರು. ದತ್ತೇಶ್, ರಾಜೇಂದ್ರ, ಆಸಿಫ್ ಕ್ಷತ್ರಿಯ, ದಿಗ್ವಿಜಯ ಹೆಗ್ಗೋಡು ಇದ್ದರು.



# ಮಹಾಪ್ರಬಂಧಕರಿಂದ ಮೂಲಸೌಕರ್ಯ ಪರಿಶೀಲನೆ



ಮೈಸೂರು: ನೈರುತ್ಯ ರೈಲ್ವೆಯ ಮಹಾಪ್ರಬಂಧಕ ಪಿ.ಅನಂತ್ ಮೈಸೂರು ವಿಭಾಗದ ವಿವಿಧ ಘಟಕಗಳು ಹಾಗೂ ಮೂಲಸೌಕರ್ಯಗಳ ಸಮಗ್ರ ಪರಿಶೀಲನೆ ನಡೆಸಿದರು.

ಪರಿಶೀಲನೆಯ ಸಂದರ್ಭದಲ್ಲಿ ಅವರು ಮೈಸೂರು ರೈಲ್ವೆ ಆಸ್ಪತ್ರೆಗೆ ಭೇಟಿ ನೀಡಿ, ಅಲ್ಲಿನ ಆರೋಗ್ಯ ಸೇವೆಗಳ ಗುಣಮಟ್ಟ ಹಾಗೂ ರೋಗಿಗಳ ಆರೈಕೆಯನ್ನು ಪರಿಶೀಲಿಸಿದರು. ವೈದ್ಯರು, ಆಸ್ಪತ್ರೆಯ ಸಿಬ್ಬಂದಿ ಹಾಗೂ ರೋಗಿಗಳೊಂದಿಗೆ ಸಂವಾದ ನಡೆಸಿ, ವೈದ್ಯಕೀಯ ಉಪಕರಣಗಳು, ಆರೋಗ್ಯ ಸೌಲಭ್ಯಗಳು ಹಾಗೂ ಅಗತ್ಯ ಮೂಲಸೌಕರ್ಯಗಳ ಲಭ್ಯತೆಯನ್ನು ಅವಲೋಕಿಸಿದರು. ರೈಲ್ವೆ ನೌಕರರು ಮತ್ತು ಅವರ ಕುಟುಂಬಗಳಿಗೆ ಉತ್ತಮ, ಸಮಯೋಚಿತ ಹಾಗೂ ರೋಗಿ–ಕೇಂದ್ರಿತ ವೈದ್ಯಕೀಯ ಸೇವೆಗಳನ್ನು ಒದಗಿಸುವ ಅಗತ್ಯವನ್ನು ಅವರು ಒತ್ತಿಹೇಳಿದರು ಹಾಗೂ ಆಸ್ಪತ್ರೆಯನ್ನು ಆಧುನಿಕ ಸೌಲಭ್ಯಗಳಿಂದ ಸಜ್ಜುಗೊಳಿಸುವ ಮಹತ್ವವನ್ನು ವಿವರಿಸಿದರು.

ಮೈಸೂರು?ಚಾಮರಾಜನಗರ ವಿಭಾಗದಲ್ಲಿ ವಿಂಡೋ ಟ್ರೈಲಿಂಗ್ ಪರಿಶೀಲನೆ ನಡೆಸಿದರು. ಈ ವೇಳೆ ನಂಜನಗೂಡಿನಲ್ಲಿ ಸ್ಟೇಷನ್ ಮಾಸ್ಟರ್ ಪ್ಯಾನೆಲ್, ನಿಲ್ದಾಣ ಆವರಣ ಹಾಗೂ ರೈಲು ಹಳಿಗಳ ಪಾಯಿಂಟ್‌ಗಳನ್ನು ಪರಿಶೀಲಿಸಿದರು. ಚಾಮರಾಜನಗರ ನಿಲ್ದಾಣದಲ್ಲಿ ಅಮೃತ ಭಾರತ್ ಸ್ಟೇಷನ್ ಯೋಜನೆ ಅಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪ್ರಗತಿಯನ್ನು ಅವಲೋಕಿಸಿ, ಸ್ಟೇಷನ್ ಮಾಸ್ಟರ್ ಪ್ಯಾನೆಲ್ ಬೋರ್ಡ್ ಹಾಗೂ ನಂಜನಗೂಡು?ಚಾಮರಾಜನಗರ ವಿಭಾಗದ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ 35 ಅನ್ನು ಪರಿಶೀಲಿಸಿದರು. ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವುದರೊಂದಿಗೆ ಗುಣಮಟ್ಟ ಮತ್ತು ಸುರಕ್ಷತೆಯನ್ನು ಕಾಪಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮುದಿತ್ ಮಿತ್ತಲ್, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಶಮ್ಮಾಸ್ ಹಮೀದ್, ಸಿಪಿಎಂ/ ಗತಿಶಕ್ತಿ ಆನಂದ ಭಾರತಿ, ಮುಖ್ಯ ವೈದ್ಯಕೀಯ ಅಧೀಕ್ಷಕ ಡಾ.ಅಶೋಕ್ ಕುಮಾರ್ ಇತರರು ಉಪಸ್ಥಿತರಿದ್ದರು.

# ವಿ.ಶ್ರೀನಿವಾಸ ಪಸಾದ್ ಹುಟ್ಟುಹಬ್ಬ ಆಚರಣೆ



**ಚಾಮರಾಜನಗರ,** ಸ್ವಾಭಿಮಾನಿ ಚಕ್ರವರ್ತಿ ಮಾಜಿ ಸಂಸದರಾದ ದಿವಂಗತ ವಿ.ಶ್ರೀನಿವಾಸ ಪ್ರಸಾದ್ ರವರ 79ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದ ಪ್ರಮುಖರಾದ ನಗರಸಭಾ ಮಾಜಿ ಸದಸ್ಯ ರಾಮಸಮುದ್ರ ಬಸವರಾಜು, ಎಲ್.ಪ್ರಸನ್ನ ಅವರ ನೇತೃತ್ವದಲ್ಲಿ ನಗರದ ನ್ಯಾಯಾಲಯದ ರಸ್ತೆಯಲ್ಲಿರುವ ಪಾರ್ವತಿ ಬಾಲ ಸೇವಾಶ್ರಮದ ಮಕ್ಕಳಿಂದ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬವನ್ನು ಅರ್ಥಪೂರ್ಣ ವಾಗಿ ಆಚರಿಸಲಾಯಿತು.

ಪಾರ್ವತಿ ಬಾಲ ಸೇವಾಶ್ರಮದ ಮಕ್ಕಳಿಗೆ ವಿ. ಶ್ರೀನಿವಾಸ ಪ್ರಸಾದ್ ಅಭಿಮಾನಿ ಬಳಗದ ವತಿಯಿಂದ ಬೆಳಗಿನ ಉಪಹಾರ ವ್ಯವಸ್ಥೆ ಮಾಡಲಾಗಿತ್ತು. ತಾ.ಪಂ.ಮಾಜಿ ಅಧ್ಯಕ್ಷ ಚಿಕ್ಕಮಹದೇವು ಮಾತನಾಡಿ, ಕರ್ನಾಟಕ ರಾಜಕಾರಣದಲ್ಲಿ ದಿವಂಗತ ಮಾಜಿ ಕೇಂದ್ರ ಸಚಿವರಾದ ವಿ.ಶ್ರೀನಿವಾಸಪ್ರಸಾದ್ ಅವರು ಅಪರೂಪದ ರಾಜಕಾರಣಿಯಾಗಿದ್ದರು. ಅವರು ನಮ್ಮಿಂದ ದೂರವಾಗದಿದ್ದರು ಅವರು ಮಾಡಿರುವ ಜನಪರಸೇವೆ, ಕಾರ್ಯಗಳು ಜೀವಂತವಾಗಿ ಉಳಿದಿವೆ. ಅವರು ಸ್ವಾಭಿಮಾನದ ಪ್ರತೀಕವಾಗಿದ್ದರು. ಸ್ವಾಭಿಮಾನಕ್ಕೆ ಮತ್ತೊಂದು ಹೆಸರು ವಿ.ಶ್ರೀನಿವಾಸಪ್ರಸಾದ್. ಅವರು ರಾಜಕೀಯ ಜೀವನದುದ್ದಕ್ಕೂ ಸ್ವಾಭಿಮಾನದಿಂದ ಬದುಕಿದ್ದರು. ಅವರು ಅಂಬೇಡ್ಕರ್ ಅವರ ಅನುಯಾಯಿಯಾಗಿ ಅವರ ತತ್ತ್ವ ಆದರ್ಶಗಳನ್ನು ಮೈಗೂಡಿಸಿಕೊಂಡು ರಾಜಕಾರಣ ಮಾಡಿದರು. ಅವರು ಮೈಸೂರು, ಚಾಮರಾಜನಗರ ಜಿಲ್ಲೆಯಲ್ಲಿ ರಾಜಕಾರಣಿಗಳನ್ನು ಹುಟ್ಟು ಹಾಕಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ಆದರ್ಶ ವ್ಯಕ್ತಿತ್ವ, ಜೀವನಕ್ರಮ ನಮಗೆ ಮಾದರಿ, ಮಾರ್ಗದರ್ಶನವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭಾ ಮಾಜಿ ಮಾಜಿ ಅಧ್ಯಕ್ಷ ಸುರೇಶ್ ನಾಯಕ, ಸದಸ್ಯ ರಾಮಸಮುದ್ರ ಬಸವರಾಜು, ಎಲ್.ಪ್ರಸನ್ನ, ತಾ.ಪಂ.ಮಾಜಿ ಅಧ್ಯಕ್ಷ ಚಿಕ್ಕಮಹದೇವು, ಸಿ.ಕೆ.ಮಂಜುನಾಥ್, ನಾಗವಳ್ಳಿ ನಾಗಯ್ಯ, ಹೆಬ್ಬಸೂರು ರಂಗಸ್ವಾಮಿ, ಎಂ.ಶಿವಮೂರ್ತಿ, ನಾಗಬಸವಣ್ಣ, ಸಿದ್ದಯ್ಯನಪುರ ಶಿವರಾಜ್, ಮೋಹನ್, ರವಿಚಂದ್ರಪ್ರಸಾದ್ ಕಹಳೆ, ಮಹಾದೇವಸ್ವಾಮಿ,ಆಶ್ರಮದ ಮಾತಾಜಿ ಚಂದ್ರಕಲಾ, ವಿದ್ಯಾರ್ಥಿಗಳು ಇತರರು ಹಾಜರಿದ್ದರು.

## ಶೀಘ್ರದಲ್ಲೇ ಮೇಕೆದಾಟು ಯೋಜನೆ ಗುದ್ದಲಿ ಪೂಜೆ ಮಾಡಲು ಆಗ್ರಹ

# ಮಾಜಿ ಸಿಎಂ ಸ್ಟಾಲಿನ್ ವಿರುದ್ಧ ಪ್ರತಿಭಟನೆ



ಚಾಮರಾಜನಗರ: ಕರ್ನಾಟಕದಲ್ಲಿ ಮೇಕೆದಾಟು ಯೋಜನೆಗೆ ವಿರೋಧ ವ್ಯಕ್ತಪಡಿಸಿರುವ ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಸ್ಟಾಲಿನ್ ವಿರುದ್ಧ ಕರ್ನಾಟಕ ಸೇನಾಪಡೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಜಮಾಯಿಸಿದ್ದ ಪ್ರತಿಭಟನಾನಿರತರು ರಾಷ್ಟ್ರೀಯ ಹೆದ್ದಾರಿ ತಡೆದು ಸ್ಟಾಲಿನ್ ಭಾವಚಿತ್ರ ಹರಿದು ಅವರ ವಿರುದ್ಧ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ,

ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಸ್ಟಾಲಿನ್ ಅವರು ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವ ಸಲುವಾಗಿ ಪದೇಪದೇ ಮೇಕೆದಾಟು, ಕಾವೇರಿ ವಿಚಾರವನ್ನು ಮುಂದಿಟ್ಟುಕೊಂಡು ಪ್ರಚಾರ ಪಡೆಯುತ್ತಿರುವುದು ಅತ್ಯಂತ ಖಂಡನೀಯವಾಗಿದೆ. ಮೇಕೆದಾಟು ವಿಚಾರದಲ್ಲಿ ಈಗಾಗಲೇ ಸುಪ್ರೀಂ ಕೋರ್ಟ್ ಮತ್ತು ಕೇಂದ್ರ ಸರ್ಕಾರ ನಮ್ಮದು ಯಾವುದೇ ಅಭ್ಯಂತರ ಇರುವುದಿಲ್ಲ ಎಂದು ತಿಳಿಸಿವೆ ಆದರೂ ಕೂಡ ಸ್ಟಾಲಿನ್ ಅವರು ಮೇಕೆದಾಟು ವಿಚಾರವಾಗಿ ತಮ್ಮ ಸಂಸದರಿಂದ ಸಂಸತ್ ನಿಲುವಳಿ ಮಂಡಿಸಲು ಮುಂದಾಗಿರುವುದು ಅತ್ಯಂತ ಖಂಡನೀಯ ವಾಗಿ. ರಾಜ್ಯ ಸರ್ಕಾರ ಕಾಲಾಹರಣ ಮಾಡದೆ ಶೀಘ್ರದಲ್ಲೇ ಮೇಕೆದಾಟು ಯೋಜನೆಗೆ ಗುದ್ದಲಿ ಪೂಜೆ ಮಾಡಬೇಕು ಎಂದು ಶ್ರೀನಿವಾಸಗೌಡ ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಚಾ.ವೆಂ.ರಾಜ್ ಗೋಪಾಲ್, ಕಂಡಕ್ಟರ್ ಚಾ.ಸಿ.ಸೋಮನಾಯಕ, ನಿಜಧ್ವನಿಗೋವಿಂದ, ಆಟೋ ಲಿಂಗರಾಜು, ರಾಚಪ್ಪ, ಹೊಮ್ಮ ಲೋಕೇಶ್, ಮಹೇಶ್ ಗೌಡ, ಸತೀಶ್, ಅಮಚವಾಡಿ ರಾಜು, ಶಿವು, ಡ್ಯಾನ್ಸ್ ಬಸವರಾಜು, ತಾಂಡವಮೂರ್ತಿ, ವೀರಭದ್ರ, ಸುಬ್ಬಯ್ಯ, ರಾಜೇಂದ್ರ, ನಾಗರಾಜು, , ಮುತ್ತುರಾಜು, ಸಿದ್ದಶೆಟ್ಟಿ, ಇತರರು ಭಾಗವಹಿಸಿದ್ದರು.

# ನ್ಯಾಯಬೆಲೆ ಅಂಗಡಿಗಳು ತೂಕದಲ್ಲಿ ವ್ಯತ್ಯಾಸವಾಗದಂತೆ ಪಡಿತರ ವಿತರಿಸಿ: ಡಿಸಿ



**ಮಂಡ್ಯ:** ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ನಿಗದಿತ ವೇಳಾಪಟ್ಟಿಯಂತೆ ಸಮರ್ಪಕವಾಗಿ ಕಾರ್ಯನಿರ್ವಹಿಸಿ, ಅರ್ಹ ಫಲಾನುಭವಿಗಳಿಗೆ ತೂಕದಲ್ಲಿ ಯಾವುದೇ ವ್ಯತ್ಯಾಸವಾಗದಂತೆ ಎಚ್ಚರಿಕೆ ವಹಿಸಿ, ಪಾರದರ್ಶಕವಾಗಿ ವಿತರಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಪ್ರಕಟಣೆ ಹೊರಡಿಸುವ ಸಂಬಂಧ ಜಿಲ್ಲಾ ಮಟ್ಟದ ಸಮಿತಿ ಸಭೆಯಲ್ಲಿ ಮಾತನಾಡಿದರು.

ನ್ಯಾಯಬೆಲೆ ಅಂಗಡಿಗಳ ಅವಶ್ಯಕತೆ ಇರುವ ಪ್ರದೇಶಗಳನ್ನು ಗುರುತಿಸಿ, ಸರ್ಕಾರದ ಮಾರ್ಗಸೂಚಿಗಳ ಅನುಸಾರ ಜಿಲ್ಲೆಯಲ್ಲಿ 24 ಹೊಸ ನ್ಯಾಯಬೆಲೆ ಅಂಗಡಿಗಳನ್ನು ತೆರೆಯುವ ಕುರಿತು ಸಭೆಯಲ್ಲಿ ಅನುಮೋದನೆ ನೀಡಲಾಯಿತು. ಅರ್ಹ ಫಲಾನುಭವಿಗಳಿಗೆ ಪಡಿತರ ವಿತರಣೆ ಸುಗಮವಾಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಹಾಗೂ ಹೊಸ ನ್ಯಾಯಬೆಲೆ ಅಂಗಡಿಗಳ ಸ್ಥಾಪನೆಗೆ ಸಂಬಂಧಿಸಿದಂತೆ ಶೀಘ್ರದಲ್ಲೇ ಪ್ರಕಟಣೆ ಹೊರಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ನ್ಯಾಯಬೆಲೆ ಅಂಗಡಿಗಳಲ್ಲಿ ಆಹಾರ ಧಾನ್ಯಗಳ ಸಮರ್ಪಕ ದಾಸ್ತಾನು ಕಾಪಾಡಬೇಕು. ಪಡಿತರ ವಿತರಣೆಯಲ್ಲಿ ವಿಳಂಬ ಅಥವಾ ಅಕ್ರಮಗಳಿಗೆ ಅವಕಾಶ ನೀಡದೆ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ಅವುಗಳನ್ನು ತಕ್ಷಣವೇ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಸರ್ಕಾರದ ಅನ್ನಭಾಗ್ಯ ಸೇರಿದಂತೆ ವಿವಿಧ ಆಹಾರ ಭದ್ರತಾ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ತಲುಪುವಂತೆ ಸಂಬಂಧಿಸಿದ ಅಧಿಕಾರಿಗಳು ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಸಾರ್ವಜನಿಕರಿಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಿತರಣೆ, ತೂಕದಲ್ಲಿ ವ್ಯತ್ಯಾಸ, ಆಹಾರ ಧಾನ್ಯಗಳ ಕೊರತೆ, ಅಂಗಡಿಗಳ ಕಾರ್ಯನಿರ್ವಹಣೆ ಅಥವಾ ಆಹಾರ ಭದ್ರತಾ ಯೋಜನೆಗಳಿಗೆ ಸಂಬಂಧಿಸಿದ ಯಾವುದೇ ದೂರುಗಳು ಹಾಗೂ ಸಮಸ್ಯೆಗಳಿದ್ದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಸಹಾಯವಾಣಿ ಸಂಖ್ಯೆ 1067 ಅನ್ನು ಸಂಪರ್ಕಿಸಿ ದೂರು ದಾಖಲಿಸಬಹುದು ಎಂದು ಆಹಾರ ಮತ್ತು ನಾಗರಿಕ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಧನುಷ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕರಾದ ಪ್ರತೀಕ್ ಹೆಗ್ಡೆ ಹಾಗೂ ಆಹಾರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 11ರಂದು ನೇರ ಸಂದರ್ಶನ



**ರಾಮನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜು.11ರ ಮಂಗಳವಾರ ಹಮ್ಮಿಕೊಳ್ಳಲಾಗಿರುವ ಉಚಿತ ನೇರ ಸಂದರ್ಶನ ಕಾರ್ಯಕ್ರಮದಲ್ಲಿ ಕ್ರೆಡಿಟ್ ಅಕ್ಸಸ್ ಗ್ರಾಮೀಣ ಲಿಮಿಟೆಡ್ ಖಾಸಗಿ ಸಂಸ್ಥೆಯವರು ಭಾಗವಹಿಸುತ್ತಿದ್ದಾರೆ. ಅವರು ಉದ್ಯೋಗಾಂಕ್ಷಿಗಳನ್ನು ನೇಮಕ ಮಾಡಿಕೊಳ್ಳಲಿರುವುದರಿಂದ ಖಾಸಗಿ ವಲಯದಲ್ಲಿನ ಉದ್ಯೋಗಕ್ಕೆ ಆಸಕ್ತರಿರುವ ಪಿ.ಯು.ಸಿ, ಐಟಿಐ, ಡಿಪ್ಲಮೋ ಅಥವಾ ಯಾವುದೇ ಪದವಿ ವಿದ್ಯಾರ್ಹತೆ (ಪಾಸ್/ಫೇಲ್) ಹೊಂದಿರುವ ಅಭ್ಯರ್ಥಿಗಳು ತಮ್ಮ ರೆಸ್ಯೂಮ್ (ಬಯೋಡೇಟಾ), ಡಿಎಲ್ ಹಾಗೂ ಎಲ್ಎಲ್ಆರ್ ಇತ್ಯಾದಿ ದಾಖಲೆಗಳೊಂದಿಗೆ ಆ.11ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಎರಡನೇ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೊಠಡಿ ಸಂಖ್ಯೆ: 208, ಮೊದಲನೇ ಮಹಡಿ, ಕಂದಾಯಭವನ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ. ಇಲ್ಲಿ ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ 9743647184 ಅಥವಾ 9964784178 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರನ್ನು ಮಿತವಾಗಿ ಬಳಸಿ, ಅಂತರ್ಜಲ ಸಂರಕ್ಷಣೆಗೆ ಮಾಡಿ – ಡಾ. ಕುಮಾರ

**ಮಂಡ್ಯ:** ನೀರು ಪ್ರಕೃತಿಯ ಅಮೂಲ್ಯ ಸಂಪತ್ತಾಗಿದ್ದು, ಪ್ರತಿಯೊಬ್ಬರೂ ಅದನ್ನು ಮಿತವಾಗಿ ಬಳಸಿ ಅಂತರ್ಜಲ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿದರು.

ನಗರದ ತೋಟಗಾರಿಕೆ ಇಲಾಖೆಯ ಆವರಣದಲ್ಲಿ ಅಂತರ್ಜಲ ಸಂರಕ್ಷಣೆ ಕುರಿತು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಚಿತ್ರಕಲೆ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆರೆ, ಕೊಳ ಹಾಗೂ ಜಲಮೂಲಗಳನ್ನು ಸಂರಕ್ಷಿಸುವುದು ಇಂದಿನ ಅಗತ್ಯವಾಗಿದ್ದು, ವಿದ್ಯಾರ್ಥಿಗಳು ನೀರಿನ ಮಹತ್ವವನ್ನು ಅರಿತು ತಮ್ಮ ಕುಟುಂಬ ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ಕೆ ಮುಂದಾಗಬೇಕು ಎಂದು ತಿಳಿಸಿದರು.

ಪರಿಸರ ಸಂರಕ್ಷಣೆ ಹಾಗೂ ನೀರಿನ ಉಳಿತಾಯದ ಬಗ್ಗೆ ಜನರಲ್ಲಿ ಅರಿವು ಮೂಡಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ನೀರು ಜೀವದ ಮೂಲವಾಗಿದ್ದು, ಅದರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದರು.

ಅಂತರ್ಜಲ ಮಟ್ಟ ಹೆಚ್ಚಿಸಲು ಮಳೆನೀರು ಕೊಯ್ಲು, ಕೆರೆಗಳ ಪುನರುಜ್ಜೀವನ, ಮರಗಳ ನೆಡುವಿಕೆ ಹಾಗೂ ಅನಗತ್ಯವಾಗಿ ಹೊಸ ಕೊಳವೆಬಾವಿಗಳನ್ನು ಕೊರೆಯುವುದನ್ನು ನಿಯಂತ್ರಿಸುವಂತಹ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು.




ಪ್ರಕೃತಿಯನ್ನು ಪ್ರೀತಿಸುವ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಮಕ್ಕಳಲ್ಲಿ ಅರಿವು ಬೆಳೆಸುವ ಉದ್ದೇಶದಿಂದ ಚಿತ್ರಕಲೆ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಪರಿಸರ ಕಾಳಜಿ ಮತ್ತು ನೀರಿನ ಸಂರಕ್ಷಣೆಯ ಜವಾಬ್ದಾರಿಯನ್ನು ಬೆಳೆಸುವಲ್ಲಿ ಸಹಕಾರಿಯಾಗಲಿವೆ ಎಂದು ತಿಳಿಸಿದರು.

ಜಲಮೂಲಗಳ ಸಂರಕ್ಷಣೆ, ಮರಗಳ ಬೆಳವಣಿಗೆ ಹಾಗೂ ನೀರಿನ ಮಿತ ಬಳಕೆಯ ಮೂಲಕವೇ ಮುಂದಿನ ಪೀಳಿಗೆಗೆ ಸುರಕ್ಷಿತ ಭವಿಷ್ಯ ನಿರ್ಮಿಸಲು ಸಾಧ್ಯವಾಗುತ್ತದೆ. "ಇಂದಿನ ನೀರಿನ ಸಂರಕ್ಷಣೆಯೇ ನಾಳಿನ ಬದುಕಿನ ಭದ್ರತೆ" ಎಂಬ ಮನೋಭಾವವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ.ಆರ್. ನಂದಿನಿ ರವರು ಮಾತನಾಡಿ ಭೂಮಿಯ ಶೇ.75ರಷ್ಟು ಭಾಗ ನೀರಿನಿಂದ ಆವರಿಸಿಕೊಂಡಿದ್ದರೂ, ಅಂತರ್ಜಲವನ್ನು ಅತಿಯಾಗಿ ಬಳಸುತ್ತಿರುವ ದೇಶಗಳಲ್ಲಿ ಭಾರತವೂ ಒಂದಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ನೀರನ್ನು ಮಿತವಾಗಿ ಬಳಸಿ, ಮಳೆನೀರು ಸಂಗ್ರಹ ಹಾಗೂ ಅಂತರ್ಜಲ ಪುನಶ್ಚೇತನಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಪ್ರಕೃತಿಯಲ್ಲಿ ಪ್ರತಿಯೊಬ್ಬರ ಅಗತ್ಯಕ್ಕೆ ಸಾಕಾಗುವಷ್ಟು ಸಂಪನ್ಮೂಲಗಳಿವೆ. ಆದರೆ ದುರುಪಯೋಗಕ್ಕೆ ಅವಕಾಶವಿಲ್ಲ. ನೀರು ಪೋಲಾಗದಂತೆ ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು. ಹನಿ ನೀರಿನ ಮಹತ್ವದ ಕುರಿತು ಮಕ್ಕಳಲ್ಲಿ ಅರಿವು ಮೂಡಿಸುವುದು ಅತ್ಯಗತ್ಯ. ಪ್ರತಿಯೊಂದು ಹನಿ ನೀರನ್ನು ಕಾಪಾಡುವ ಮನೋಭಾವ ಬೆಳೆಸಿಕೊಂಡರೆ ಮಾತ್ರ ಮುಂದಿನ ಪೀಳಿಗೆಗೆ ನೀರಿನ ಭದ್ರತೆ ಕಲ್ಪಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಅಂತರ್ಜಲ ಸಂರಕ್ಷಣೆ ಕುರಿತು ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಪರಿಸರ ಮತ್ತು ಜಲ ಸಂರಕ್ಷಣೆಯ ಬಗ್ಗೆ ಇದೇ ರೀತಿಯ ಜಾಗೃತಿ ಕಾರ್ಯಕ್ರಮಗಳಲ್ಲಿ ನಿರಂತರವಾಗಿ ಪಾಲ್ಗೊಳ್ಳುವಂತೆ ಕರೆ ನೀಡಿದರು.

**ಬಹುಮಾನ ವಿತರಣೆ:** ಅಂತರ್ಜಲ ಜಾಗೃತಿ ಕುರಿತ ತಾಲ್ಲೂಕು ಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಮದ್ದೂರು ತಾಲೂಕಿನ ಬೊಪ್ಪ ಸಮುದ್ರ ಸರ್ಕಾರಿ ಪ್ರೌಢಶಾಲೆಯ ವಿಷ್ಣು ಪ್ರಸಾದ್ ಹೆಚ್. ಬಿ. ರವರಿಗೆ ಪ್ರಥಮ ಸ್ಥಾನ ಹಾಗೂ ಶ್ರೀರಂಗಪಟ್ಟಣ ತಾಲ್ಲೂಕಿನ ನಗುವನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಭಾರ್ಗವಿ ರವರಿಗೆ ದ್ವಿತೀಯ ಸ್ಥಾನ ಮತ್ತು ಪಾಂಡವಪುರ ತಾಲ್ಲೂಕಿನ ಚಿನಕುರಳಿ ಪಬ್ಲಿಕ್ ಸ್ಕೂಲ್ ನ ಅರ್ಜುನ್ ಗೌಡ ಹೆಚ್.ಎ. ರವರಿಗೆ ತೃತೀಯ ಸ್ಥಾನ ಬಹುಮಾನವನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಅಂತರ್ಜಲ ಇಲಾಖೆಯ ಹಿರಿಯ ಭೂ ವಿಜ್ಞಾನಿಗಳಾದ ರಾಜಶ್ರೀ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ವಿಜಯ ಕುಮಾರ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಿ. ದೇವರಾಜ ಅರಸು 111ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ : ಜಿಲ್ಲಾಧಿಕಾರಿ ಸೂಚನೆ



**ಮಂಡ್ಯ:** ಆಗಸ್ಟ್ 20, 2026ರಂದು ಮಂಡ್ಯ ನಗರದ ಅಂಬೇಡ್ಕರ್ ಭವನದಲ್ಲಿ 2026–27ನೇ ಸಾಲಿನ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಡಿ. ದೇವರಾಜ ಅರಸು ಅವರು ಸಾಮಾಜಿಕ ನ್ಯಾಯ, ಭೂಸುಧಾರಣೆ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಜನರಿಗೆ ತಲುಪಿಸುವ ರೀತಿಯಲ್ಲಿ ಕಾರ್ಯಕ್ರಮವನ್ನು ಆಯೋಜಿಸಬೇಕು ಎಂದು ತಿಳಿಸಿದರು.

ಜಿಲ್ಲೆಯ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರ ಸಕ್ರಿಯ ಭಾಗವಹಿಸಬೇಕು. ಕಾರ್ಯಕ್ರಮದ ಎಲ್ಲ ವ್ಯವಸ್ಥೆಗಳನ್ನು ಮುಂಚಿತವಾಗಿ ಪೂರ್ಣಗೊಳಿಸಿ, ಯಾವುದೇ ಲೋಪವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಛಾಯಾಚಿತ್ರ ಪ್ರದರ್ಶನವನ್ನು ಅಂಬೇಡ್ಕರ್ ಭವನದ ಮುಂಭಾಗ ಆಯೋಜನೆ ಮಾಡುವಂತೆ ತಿಳಿಸಿದರು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಜನ ಪ್ರತಿನಿಧಿಗಳಿಗೆ ನೀಡುವಂತೆ ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜೀವನ, ಸಾಧನೆಗಳು ಹಾಗೂ ಸಾಮಾಜಿಕ ನ್ಯಾಯಕ್ಕೆ ನೀಡಿದ ಮಹತ್ವದ ಕೊಡುಗೆಯನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ ಜಿಲ್ಲೆಯ ಶಾಲಾ–ಕಾಲೇಜುಗಳಲ್ಲಿ ಪ್ರಬಂಧ ಸ್ಪರ್ಧೆ ಹಾಗೂ ರಸಪ್ರಶ್ನೆ ಕಾರ್ಯಕ್ರಮಗಳನ್ನು ಆಯೋಜಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ತಿಳಿಸಿದರು

ಸಭೆಯಲ್ಲಿ ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿಗಳಾದ ಮಂಜುಳಾ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷರಾದ ಎಲ್. ಸಂದೇಶ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೆ. ನಾಗೇಶ್,ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಬಿ. ಕೆಂಪರಾಜು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧಸಮುದಾಯದ ಮುಖಂಡರುಗಳು ಉಪಸ್ಥಿತರಿದ್ದರು.

# ರಾಷ್ಟ್ರೀಯ ಜಂತು ಹುಳು ನಿವಾರಣಾ ಕಾರ್ಯಕ್ರಮ ಯಶಸ್ವಿಗೆ ಡಿಸಿ ಕರೆ

**ಮಂಡ್ಯ:** ಜಿಲ್ಲೆಯಲ್ಲಿ 1 ವರ್ಷದಿಂದ 19 ವರ್ಷದೊಳಗಿನ ಪ್ರತಿಯೊಬ್ಬ ಮಗುವಿಗೂ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದ ಅಂಗವಾಗಿ ಆಲ್ಬೆಂಡಜೋಲ್ ಮಾತ್ರೆಯನ್ನು ಕಡ್ಡಾಯವಾಗಿ ನೀಡಬೇಕು. ಈ ಮಾತ್ರೆ ಸಂಪೂರ್ಣ ಸುರಕ್ಷಿತವಾಗಿದ್ದು, ಸೇವನೆಯಿಂದ ಯಾವುದೇ ಅಡ್ಡಪರಿಣಾಮ ಉಂಟಾಗುವುದಿಲ್ಲ. ಪೋಷಕರಲ್ಲಿರುವ ತಪ್ಪು ಕಲ್ಪನೆಗಳನ್ನು ದೂರ ಮಾಡಿ, ವೈಜ್ಞಾನಿಕ ಮಾಹಿತಿಯ ಮೂಲಕ ಜನರಲ್ಲಿ ವಿಶ್ವಾಸ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಕುಮಾರ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದ ಅಂಗವಾಗಿ ಆಗಸ್ಟ್ 10ರಂದು ನಡೆಯಲಿರುವ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನ ಹಾಗೂ ಆಗಸ್ಟ್ 17ರಂದು ಆಯೋಜಿಸಿರುವ ಮಾಪ್–ಅಪ್ (ಒಂ೮೦–೯೦) ದಿನವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ನಡೆದ ಜಿಲ್ಲಾ ಮಟ್ಟದ ಚಾಲನಾ ಸಮಿತಿ (ಆಣಡಿಬಿಣ ಖಿಚಿಇ ಈಡಿಬಿಜ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಂತುಹುಳು ಸೋಂಕು ಮಕ್ಕಳಲ್ಲಿ ಅಪೌಷ್ಟಿಕತೆ, ರಕ್ತಹೀನತೆ, ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಕುಂಠಿತತೆ ಹಾಗೂ ಕಲಿಕಾ ಸಾಮರ್ಥ್ಯದ ಮೇಲೆ ದುಷ್ಪರಿಣಾಮ ಉಂಟುಮಾಡುವ ಸಾಧ್ಯತೆಗಳಿವೆ. ಆದ್ದರಿಂದ ಪ್ರತಿ ಆರು ತಿಂಗಳಿಗೊಮ್ಮೆ ಜಂತುಹುಳು ನಿವಾರಣಾ ಮಾತ್ರೆ ಸೇವಿಸುವುದು ಮಕ್ಕಳ ಆರೋಗ್ಯ ರಕ್ಷಣೆ ಹಾಗೂ ಉತ್ತಮ ಭವಿಷ್ಯ ನಿರ್ಮಾಣಕ್ಕೆ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಯಾವೊಬ್ಬ ಮಗುವೂ ಈ ಕಾರ್ಯಕ್ರಮದಿಂದ ವಂಚಿತರಾಗದಂತೆ ಆರೋಗ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ಶಾಲೆಗಳು, ಕಾಲೇಜುಗಳು ಹಾಗೂ ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳಿಗೆ ಮತ್ತು ಪೋಷಕರಿಗೆ ಜಂತುಹುಳು ನಿವಾರಣೆಯ ಮಹತ್ವದ ಕುರಿತು ವ್ಯಾಪಕ ಜಾಗೃತಿ ಮೂಡಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಗ್ರಾಮೀಣ ಪ್ರದೇಶಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಪೋಷಕರಿಗೆ ಕಾರ್ಯಕ್ರಮದ ಉದ್ದೇಶ ಹಾಗೂ ಮಾತ್ರೆಯ ಮಹತ್ವವನ್ನು ಮನವರಿಕೆ ಮಾಡಿಕೊಡಬೇಕು. ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಅವರಿಗೆ ಸಮರ್ಪಕ ತರಬೇತಿ ನೀಡಿ, ಮಾಹಿತಿ ಪರಿಣಾಮಕಾರಿಯಾಗಿ ಜನರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದಂದು ಶಾಲೆಗಳು, ಅಂಗನವಾಡಿ ಕೇಂದ್ರಗಳು ಹಾಗೂ ಆರೋಗ್ಯ ಸಂಸ್ಥೆಗಳ ಮೂಲಕ ಗುರಿ ವಯೋಮಾನದ ಎಲ್ಲಾ ಮಕ್ಕಳಿಗೆ ಆಲ್ಬೆಂಡಜೋಲ್ ಮಾತ್ರೆ ವಿತರಿಸಲಾಗುವುದು. ಆಗಸ್ಟ್ 10ರಂದು ಮಾತ್ರೆ ಪಡೆಯಲು ಸಾಧ್ಯವಾಗದ ಮಕ್ಕಳಿಗೆ ಜನಾಂದೋಲನವಾಗಿ ರೂಪಿಸಬೇಕು. ಆಗಸ್ಟ್ 17ರಂದು ನಡೆಯುವ ಮಾಪ್–ಅಪ್ ದಿನದಂದು ಮಾತ್ರೆ ನೀಡಿ, ಜಿಲ್ಲೆಯ ಯಾವುದೇ ಮಗು ಜಂತುಹುಳು ನಿವಾರಣಾ ಕಾರ್ಯಕ್ರಮದಿಂದ ವಂಚಿತರಾಗದಂತೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕೆ.ಸಿ. ಬೆಟ್ಟಸ್ವಾಮಿ, ಆರ್.ಸಿ.ಹೆಚ್. ಅಧಿಕಾರಿ ಡಾ. ಎಂ. ಎನ್ ಆಶಾಲತಾ ರವರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು



# ದೃಢ ಸಂಕಲ್ಪದ ಹೆಸರು: ಮಿನ್ನು ಪಿ.ಎಂ. ಜೋಶಿ



ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 89

ಕನಸು ಮತ್ತು ಕರ್ತವ್ಯದ ನಡುವೆ ಸಿಲುಕಿದಾಗ ಯಾವುದನ್ನು ಆರಿಸಿಕೊಳ್ಳುವುದು? ಕೇರಳದ ಮಿನ್ನು ಪಿ.ಎಂ. ಜೋಶಿ ಈ ಪ್ರಶ್ನೆಗೆ ಉತ್ತರವನ್ನು ತನ್ನ ಜೀವನದಿಂದಲೇ ಬರೆದರು. ಪೊಲೀಸ್ ಇಲಾಖೆಯ ಗುಮಾಸ್ತೆ, ತಾಯಿ, ಮಗಳು ಮತ್ತು ವಿದ್ಯಾರ್ಥಿನಿ ಎಂಬ ಎಲ್ಲಾ ಪಾತ್ರಗಳನ್ನು ಒಂದೇ ಹೊತ್ತಿನಲ್ಲಿ ಹೊತ್ತು, 32ನೇ ವಯಸ್ಸಿನಲ್ಲಿ ಆರನೇ ಪ್ರಯತ್ನದಲ್ಲಿ ಸಿವಿಲ್ ಸೇವಾ ಪರೀಕ್ಷೆಯಲ್ಲಿ ರಾಷ್ಟ್ರಮಟ್ಟದ 150ನೇ ಸ್ಥಾನ ಗಳಿಸಿದರು. ಇವರ ಕಥೆ ಕೇವಲ ಸಾಧನೆಯದಲ್ಲ, ಅದು ದೃಢ ಸಂಕಲ್ಪದ ಪಾಠ.

ತಂದೆ ಪೊಲೀಸ್ ಅಧಿಕಾರಿ. "ನನ್ನ ಮಗಳು ಜನಸೇವೆ ಮಾಡಬೇಕು" ಎಂಬುದು ಅವರ ಕನಸು. ಶಾಲಾ ವಯಸ್ಸಿನಲ್ಲೇ ತಂದೆಯನ್ನು ಕಳೆದುಕೊಂಡ ಮಿನ್ನು 2012ರಲ್ಲಿ ಕುಟುಂಬಕ್ಕಾಗಿ ಇಲಾಖೆಯಲ್ಲಿ ಕೆಲಸಕ್ಕೆ ಸೇರಿದರು. ಜೊತೆಗೆ ಜೀವಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಮುಗಿಸಿದರು. 21ನೇ ವಯಸ್ಸಿಗೆ ವಿವಾಹ, 23ಕ್ಕೆ ಮಗು. ಜವಾಬ್ದಾರಿಗಳು ಹೆಚ್ಚಿದಂತೆ ಕನಸು ದೂರವಾಗುವ ಬದಲು ಇನ್ನಷ್ಟು



ಸ್ಪಷ್ಟವಾಯಿತು.

ಇವರ ದಿನಚರಿ ಒಂದು ಕಠಿಣ ತಪಸ್ಸು. ಮುಂಜಾನೆ ಗ್ರಂಥಾಲಯದಲ್ಲಿ ಪತ್ರಿಕೆ, ಹಗಲು ಕಚೇರಿ, ರಾತ್ರಿ ಮಗುವಿನ ಆರೈಕೆಯೊಂದಿಗೆ ಓದು. ಐದು ಬಾರಿ ಸೋತರೂ ಧೃತಿಗೆಡಲಿಲ್ಲ. "ಕಾರುಣ್ಯದಿಂದ ಸಿಕ್ಕ ಕೆಲಸಕ್ಕೆ ಸೀಮಿತವಾಗಬಾರದು, ಸಮಾಜದಲ್ಲಿ ನನ್ನದೇ ಗುರುತು ಬೇಕು" ಎಂಬ ಹಠವೇ ಅವರನ್ನು ಮುನ್ನಡೆಸಿತು. ಆರನೇ ಪ್ರಯತ್ನದಲ್ಲಿ ಬಂದ ಯಶಸ್ಸು ತಂದೆಯ ಕನಸಿಗೆ ಸಲ್ಲಿಸಿದ ಅಕ್ಷರ ಅರ್ಪಣೆಯಾಯಿತು.

ಇಂದು ಮಹಾರಾಷ್ಟ್ರದ ಅಮರಾವತಿಯ ಭಟ್ಕುಲಿ–ತಿವಾಸಾ ವಿಭಾಗದಲ್ಲಿ ಸಹಾಯಕ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಮಿನ್ನು, ಲಕ್ಷಾಂತರ ಯುವಜನತೆಗೆ ಬೆಳಕಾಗಿದ್ದಾರೆ. ಕುಟುಂಬ, ಕೆಲಸ ಮತ್ತು ಕಷ್ಟಗಳ ನಡುವೆಯೂ ಸಾಧ್ಯ ಎಂಬುದನ್ನು ತೋರಿಸಿಕೊಟ್ಟ ಇವರ ಪಯಣ, ಸೋಲು ಅಂತ್ಯವಲ್ಲ ಎಂಬುದನ್ನು ಸಾರುವ ಜ್ವಲಂತ ಉದಾಹರಣೆ.

# ಸ್ವಾತಂತ್ರ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಿ: ಶಾಸಕ

**ಹನೂರು:** ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಮಹನೀಯರ ತ್ಯಾಗವನ್ನು ಸ್ಮರಿಸುವ 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಯಾವುದೇ ಲೋಪದೋಷವಿಲ್ಲದೆ ಅರ್ಥಪೂರ್ಣವಾಗಿ ಮತ್ತು ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಶಾಸಕಎಂ.ಆರ್. ಮಂಜುನಾಥ್ ತಾಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು. ಆಗಸ್ಟ್ 15ರ ಸ್ವಾತಂತ್ರ್ಯೋತ್ಸವದ ಪೂರ್ವಭಾವಿ ಸಭೆಯನ್ನು ಹನೂರು ಪಟ್ಟಣದ ಲೋಕೋಪಯೋಗಿ ಇಲಾಖೆ ಅತಿಥಿ ಗೃಹದಲ್ಲಿ ತಾಲೂಕು ಆಡಳಿತ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ಆಯೋಜಿಸಲಾಗಿತ್ತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರು, ಪಟ್ಟಣದ ಶ್ರೀ ಮಹದೇಶ್ವರ ಕ್ರೀಡಾಂಗಣದಲ್ಲಿ ನಡೆಯುವ ಮುಖ್ಯ ಕಾರ್ಯಕ್ರಮದ ಬಗ್ಗೆ ಹಲವು ನಿರ್ದೇಶನಗಳನ್ನು ನೀಡಿದರು.



**ಅಡಚಣೆ ರಹಿತ ಆಚರಣೆಗೆ ಒತ್ತು:** ಧ್ವಜಾರೋಹಣದ ವೇಳೆ ಯಾವುದೇ ರೀತಿಯ ಅಡಚಣೆಯಾಗಬಾರದು. ಬಿಸಿಲಿನಿಂದ ರಕ್ಷಿಸಲು ಪ್ರೇಕ್ಷಕರಿಗೆ ಸೂಕ್ತ ನೆರಳಿನ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ ಮತ್ತು ಕ್ರೀಡಾಂಗಣದ ಸುತ್ತಮುತ್ತ ಸ್ವಚ್ಛತೆಗೆ ವಿಶೇಷ ಗಮನ ನೀಡಬೇಕು. ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ಕಲ್ಪಿಸಬೇಕು ಎಂದು ತಿಳಿಸಿದರು.

"ಸ್ವಾತಂತ್ರ್ಯ ದಿನಾಚರಣೆಯು ಕೇವಲ ಸರ್ಕಾರಿ ಕಾರ್ಯಕ್ರಮವಲ್ಲ. ಇದು ರಾಷ್ಟ್ರೀಯ ಹೆಮ್ಮೆ ಮತ್ತು ಏಕತೆಯ ದಿನ. ಆದ್ದರಿಂದ ಪ್ರತಿ ಶಾಲಾ–ಕಾಲೇಜು, ಸರ್ಕಾರಿ ಕಚೇರಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ರಾಷ್ಟ್ರಧ್ವಜ ಹಾರಿಸುವುದರೊಂದಿಗೆ ದೇಶಭಕ್ತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು" ಎಂದು ಅವರು ಕರೆ ನೀಡಿದರು.

**ಸಭೆಯಲ್ಲಿ ಅಂಗೀಕಾರವಾದ ಪ್ರಮುಖ ನಿರ್ಧಾರಗಳು;** ಸಭೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಗಳ ಬಗ್ಗೆ ಮಾಹಿತಿ ನೀಡಿದರು.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್





# ಆಯೋಗ್ಯ-2 ಈ ವಾರ ಬಿಡುಗಡೆ



ಸತೀಶ್ ನೀನಾಸಂ, ರಚಿತಾ ರಾಮ್ ಜೋಡಿಯ ?ಅಯೋಗ್ಯ 2? ಚಿತ್ರದ ಮತ್ತೊಂದು ಹಾಡು ಅನಾವರಣಗೊಂಡಿದೆ. ಇತ್ತೀಚೆಗಷ್ಟೇ ಬಿಡುಗಡೆಯಾದ 'ಮುದ್ದು ಮುದ್ದು ಪುಟ್ಟಲಕ್ಷ್ಮಿ', ಅಣ್ಣಾ ಬಂದ್ರೆ ಜೋಶ್ ಬತ್ತದೆ ಹಾಗೂ ಹುಡ್ಗೀರ್ ಡೇಂಜರಸ್ ಎಂಬ ಹಾಡುಗಳಿಗೆ ಸಖತ್ ರೆಸ್ಪಾನ್ಸ್ ಪಡೆದುಕೊಂಡಿದ್ದ ಚಿತ್ರತಂಡ, ಇದೀಗ 'ಮಿಲ್ಕಿ ಬ್ಯೂಟಿ' ಎಂಬ ಹಾಡನ್ನು ರಿಲೀಸ್ ಮಾಡಿದೆ. ಮಹೇಶ್ ಕುಮಾರ್ ನಿರ್ದೇಶವಿರುವಚಿತ್ರ ಈ ವಾರ ತೆರೆ ಕಾಣಲಿದೆ.

ಅರ್ಜುನ್ ಜನ್ಯ ಸಂಗೀತ ಸಂಯೋಜನೆ ಮಾಡಿರುವ ಈ ಹಾಡಿಗೆ 'ಬಹದ್ದೂರ್' ಚೇತನ್ ಕುಮಾರ್ ಸಾಹಿತ್ಯ ಬರೆದಿದ್ದಾರೆ. ಇಂದು ನಾಗರಾಜ್, ನಿಶಾನ್ ರೈ ಕಂಠಸಿರಿಯಲ್ಲಿ ಮೂಡಿ ಬಂದಿರುವ ಈ ಹಾಡಿಗೆ ಹರ್ಷ ನೃತ್ಯ ನಿರ್ದೇಶನ ಮಾಡಿದ್ದಾರೆ. ಸುಮಾರು ವರ್ಷಗಳ ನಂತರ ನಟಿ ಪ್ರಜ್ಞಾ ಈ ಸಿನಿಮಾ ಮೂಲಕ ವಾಪಸ್ ಬಂದಿದ್ದಾರೆ. ಈ ಸಿನಿಮಾವನ್ನು ಎಸ್.ವಿ.ಸಿ ಫಿಲಂಸ್ ಬ್ಯಾನರ್ ಅಡಿಯಲ್ಲಿ ಎಂ.ಮುನೇಗೌಡ ನಿರ್ಮಿಸಿದ್ದಾರೆ.

'ಅಯೋಗ್ಯ ಸಿನಿಮಾ ಬ್ಲಾಕ್ ಬಸ್ಟರ್ ಆಗಿ ಗೆಲ್ಲುವುದಕ್ಕೆ ಕನ್ನಡ ಸಿನಿಮಾ ಪ್ರೇಕ್ಷಕರಿಗೆ ನಾವು ಚಿರಋಣಿ. ನಿರ್ದೇಶಕ ಮಹೇಶ್ ಕುಮಾರ್ ಮಂಡ್ಯದ ಒಂದು ಹಳ್ಳಿಯ ಕಥೆಯಲ್ಲಿ ಜನರನ್ನು ರಂಜಿಸುವಂತಹ ಕಥೆ ಹೇಳಿದ್ದರು. ಆಯೋಗ್ಯ-2 ಸಿನಿಮಾದ ಕಂಟೆಂಟ್ ಕೂಡ ಒಂದು ಹಳ್ಳಿಯ ಕಥೆಯಾಗಿರದೇ ರಾಜ್ಯದ ಪ್ರತಿಹಳ್ಳಿಗು ತಲುಪುವಂತಹ ಸಬ್ಜೆಕ್ಟ್' ಎನ್ನುತ್ತಾರೆ ನೀನಾಸಂ ಸತೀಶ್.

'ಆಯೋಗ್ಯ ಹಾಗೂ ಆಯೋಗ್ಯ 2 ಈ ಎರಡು ಸಿನಿಮಾಗಳನ್ನು ಹೆಚ್ಚು ಇಷ್ಟಪಟ್ಟು, ಕಥೆಯನ್ನು ಎಂಜಾಯ್ ಮಾಡುತ್ತ ಅಭಿನಯಿಸಿದ ಸಿನಿಮಾ. ಆಯೋಗ್ಯ 2 ಸಿನಿಮಾವನ್ನು ನಮ್ಮ ವಿಐಪಿಗಳೊಂದಿಗೆ (ಪ್ರೇಕ್ಷಕರು) ಚಿತ್ರಮಂದಿರದಲ್ಲಿಯೇ ಸಿನಿಮಾ ನೋಡಲು ಕಾಯುತ್ತಿದ್ದೇನೆ, ದಯವಿಟ್ಟು ಬಂದು ಸಿನಿಮಾ ನೋಡಿ. ಕನ್ನಡ ಸಿನಿಮಾಗಳಿಗೆ 'ದಯವಿಟ್ಟು ನೋಡಿ' ಎಂದು ಕೇಳಿಕೊಳ್ಳುವ ಪರಿಸ್ಥಿತಿ ಬಂದಿದೆ. ಆದರೆ ಈ ಸಿನಿಮಾ ನೋಡಿ ಎಲ್ಲರೂ ಮೆಚ್ಚಿಕೊಳ್ತೀರ ಎಂಬ ಭರವಸೆ ಇದೆ ಎಂದರು ರಚಿತಾರಾಮ್.

ರವಿಶಂಕರ್, ಸಾಧು ಕೋಕಿಲ, ತಬಲ ನಾಣಿ, ಸುಂದರ್ ರಾಜ್, ಶಿವರಾಜ್ ಕೆ.ಆರ್.ಪೇಟೆ, ಅರುಣಾ ಬಾಲರಾಜ್, ಗಿರಿ ಶಿವಣ್ಣ ಹಾಗೂ ಮಂಜು ಪಾವಗಡ ತಾರಾಗಣದಲ್ಲಿದ್ದಾರೆ. ಮಾಸ್ತಿ ಉಪ್ಪಾರಳ್ಳಿ ಸಂಭಾಷಣೆ, ?ಶಾಖಾಹಾರಿ? ಚಿತ್ರಕ್ಕೆ ಛಾಯಾಗ್ರಹಣ ಮಾಡಿದ್ದ ವಿಶ್ವಜಿತ್ ರಾವ್ ಈ ಚಿತ್ರದ ಕ್ಯಾಮೆರಾಮನ್. ಸುರೇಶ್ ಆರ್ಮುಗಂ ಸಂಕಲನ, ಅರ್ಜುನ್ ರಾಜ್ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ.

# ಯುವ ಪ್ರತಿಭೆಗಳ "ಸಂಪಿಗೆ" ಚಿತ್ರಕ್ಕೆ ಶುಭ ಮುಹೂರ್ತ



ಬೆಂಗಳೂರು ನಗರದಲ್ಲಿರುವ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಆವರಣದಲ್ಲಿರುವ ಶ್ರೀ ಕಾಲಭೈರೇಶ್ವರ ಸ್ವಾಮಿಯ ಸನ್ನಿಧಿಯಲ್ಲಿ ಯುವ ಪ್ರತಿಭೆಗಳು ಆರಂಭಿಸಿರುವಂತಹ "ಸಂಪಿಗೆ". ಈ ಚಿತ್ರದ ಮಹೂರ್ತ ಸಮಾರಂಭಕ್ಕೆ

ಬಿಗ್ ಬಾಸ್ ಖ್ಯಾತಿಯ ಸಾನಿಯಾ ಅಯ್ಯರ್ , ಹಾಗೂ ಅವರ ತಾಯಿ ದೀಪಾ ಅಯ್ಯರ್ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡುವ ಮೂಲಕ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಬಿಗ್ ಬಾಸ್ ಪ್ರತಿಭೆ ಇಶಾನಿ ಹಾಗೂ ಸಾಮಾಜಿಕ ಕಾರ್ಯಕರ್ತ ಆಂಜನಪ್ಪ ಸೇರಿದಂತೆ ಹಲವು ಗಣ್ಯರು , ಸ್ನೇಹಿತರು ದರ್ಶನ್ ಫ್ಯಾನ್ಸ್ ಕಾರ್ಯಕ್ರಮದಲ್ಲಿ ಹಾಜರಿದ್ದು ಚಿತ್ರತಂಡಕ್ಕೆ ಶುಭವನ್ನು ಹಾರೈಸಿದರು. ಚಿತ್ರೋದ್ಯಮದಲ್ಲಿ ಬಹಳಷ್ಟು ವರ್ಷಗಳ ಅನುಭವವನ್ನು ಪಡೆದುಕೊಂಡಂತಹ ಗೆಳೆಯರ ಬಳಗ ಸೇರಿಕೊಂಡು ಆರಂಭಿಸುತ್ತಿರುವಂತಹ ಈ ನೂತನ ಚಿತ್ರದ ಮಾಹಿತಿಯನ್ನು ನೀಡಲು ಚಿತ್ರತಂಡ ಹಾಜರಿತ್ತು.

ಮೊದಲಿಗೆ ಚಿತ್ರದ ನಿರ್ದೇಶಕ ಗಿರಿ ಗೌಡ ಮಾತನಾಡುತ್ತಾ ಇದು ನನ್ನ ಮೊದಲ ಚಿತ್ರ. ಈ ಹಿಂದೆ ನಾನು ಹಲವಾರು ವಿಡಿಯೋ ಆಲ್ಬಮ್ ಸಾಂಗ್ ಗಳನ್ನು ನಿರ್ದೇಶನ ಮಾಡಿದ್ದೆ. ಮದ್ದೂರು ವಡೆ ಹಾಗೂ ಮಹಾ ಕಾಳಿ ಎಂಬ ಚಿತ್ರವನ್ನ ಕೂಡ ಆರಂಭಿಸಿದೆ. ಈ ನನ್ನ ಸಂಪಿಗೆ ಚಿತ್ರ ಒಂದು ಮರ್ಡರ್ ಮಿಸ್ಟ್ರಿ ಕಥಾನಕವನ್ನು ಒಳಗೊಂಡಿದ್ದು , ಹೆಣ್ಣಿನ ಮೇಲಿನ ಅತ್ಯಾಚಾರ ದೌರ್ಜನ್ಯದ ಸುತ್ತ ಕಥೆ ಬೆಸೆದುಕೊಂಡಿದ್ದು, ಒಂದು ಉತ್ತಮ ಸಂದೇಶವಿದೆ. ಈ ಚಿತ್ರವು ಆಗಸ್ಟ್ ನಲ್ಲಿ ಚಿತ್ರೀಕರಣ ನಡೆಯಲಿದೆ. ಮೇಲುಕೋಟೆ, ಕಣ್ಣೂರು ಸೇರಿದಂತೆ ಹಲವು ಸ್ಥಳಗಳಲ್ಲಿ ಇಪ್ಪತ್ತು ದಿನಗಳಲ್ಲಿ ಚಿತ್ರೀಕರಣ ಮಾಡಲು ಸಿದ್ಧರಾಗಿದ್ದೇವೆ.

ಇಡೀ ಚಿತ್ರದಲ್ಲಿ ಒಂದು ಹಾಡು ಇದ್ದು , ಯುವ ಪ್ರತಿಭೆಗಳು ಚಿತ್ರದಲ್ಲಿ ಅಭಿನಯಿಸಲಿದ್ದಾರೆ. ಮುಂದಿನ ದಿನಗಳಲ್ಲಿ ನಾಯಕಿ ಯಾರೆಂದು ಪರಿಚಯ ಮಾಡುತ್ತೇವೆ ಎಂದರು.

ಚಿತ್ರದ ನಿರ್ಮಾಪಕ ರುದ್ರ ಕುಮಾರ್ ಮಾತನಾಡತ್ತ ನನ್ನದು ಬ್ರೆಡ್ ಫ್ಯಾಕ್ಟರಿ ಬ್ಯುಸಿನೆಸ್ ಇದೆ. ನನ್ನ 10 ವರ್ಷದ ಕನಸು ಈ ಚಿತ್ರ ಮಾಡುತ್ತಿದ್ದೇನೆ. ಉತ್ತಮ ಕಥೆ ಸಿಕ್ಕಿದೆ. ಕಾಲಭೈರವೇಶ್ವರ ಪ್ರೊಡಕ್ಷನ್ ಮೂಲಕ ಈ ಚಿತ್ರ ಆರಂಭಿಸಿದ್ದು , ನಿರ್ದೇಶಕ ನನ್ನ ಸಹೋದರ ಇದ್ದ ಹಾಗೆ , ಅವನಿಗಾಗಿ ಈ ಚಿತ್ರ ಮಾಡುತ್ತಿದ್ದೇನೆ. ನಿಮ್ಮೆಲ್ಲರ ಪ್ರೀತಿ , ಸಹಕಾರ ಇರಲಿ ಎಂದರು. ಯುವ ನಟ ವರ್ಧನ್ ಮಾತನಾಡುತ್ತ ನಾನು ಮೂಲತಃ ಹಾಸನದವನು , ಸುಮಾರು ಎಂಟು ವರ್ಷಗಳ ಹಿಂದೆ ಚಿತ್ರಗಳಲ್ಲಿ ಸಣ್ಣಪುಟ್ಟ ಪಾತ್ರಗಳನ್ನು ಮಾಡುತ್ತಾ ನಿರ್ದೇಶನ ವಿಭಾಗದಲ್ಲೂ ಕೆಲಸ ಮಾಡಿದ್ದೇನೆ. ನಾನು ಪಕ್ಕ ದರ್ಶನ್ ಅಭಿಮಾನಿ , ಅವರ ಆಶೀರ್ವಾದ ಸಾದ

ನನ್ನ ಹಾಗೂ ನಮ್ಮ ತಂಡದ ಮೇಲೆ ಇರಲಿದೆ. ಇದೊಂದು ಹೆಣ್ಣಿನ ಮೇಲೆ ನಡೆಯುವ ಕ್ರೌರ್ಯದ ಸುತ್ತ ನಡೆಯುವ ಚಿತ್ರವಾಗಿದ್ದು , ಆಕೆಯನ್ನು ನಾವು ಹೇಗೆ ಕಾಪಾಡಿಕೊಳ್ಳುತ್ತೇವೆ ಎಂಬುವ ಅಂಶ ಒಳಗೊಂಡಿದೆ. ನನ್ನ ಪಾತ್ರವೂ ಬಹಳ ವಿಭಿನ್ನವಾಗಿದ್ದು , ಈ ಚಿತ್ರಕ್ಕಾಗಿ ರಿಯರ್ಸಲ್ ಮಾಡಿಕೊಂಡು ಚಿತ್ರೀಕರಣಕ್ಕೆ ಹೋಗಲು ಸಿದ್ಧರಾಗಿದ್ದೇವೆ. ನಮ್ಮಂತ ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸಿ ಎಂದು ಕೇಳಿಕೊಂಡರು.

# ಸಿದ್ದು ಪೂರ್ಣಚಂದ್ರ ನಿರ್ದೇಶನದ 'ಬ್ರಹ್ಮ ಕಮಲ' ಟ್ರೈಲರ್ ಬಿಡುಗಡೆ!




ಈ ಹಿಂದೆ ದಾರಿ ಯಾವುದಯ್ಯ ವೈಕುಂಠಕೆ ಚಿತ್ರದ ಮೂಲಕ ನಿರ್ದೇಶಕರಾಗಿ ಮನ್ನಣೆ ಗಳಿಸಿಕೊಂಡಿದ್ದವರು ಸಿದ್ದು ಪೂರ್ಣಚಂದ್ರ. ಈ ಮೂಲಕ ನಿರ್ದೇಶಕನಾಗಿ ತನ್ನದು ಭಿನ್ನಪಥ ಎಂಬ ಸಂದೇಶ ರವಾನಿಸಿದ್ದ ಅವರು, ಮತ್ತೊಂದು ಸೂಕ್ಷ್ಮ ಕಥನಕ್ಕೆ ದೃಶ್ಯರೂಪ ನೀಡಿದ್ದಾರೆ. ನಮ್ಮ ನಡುವಿನ ಕೌಟುಂಬಿಕ ವ್ಯವಸ್ಥೆಯೊಳಗಿನ ಹೆಣ್ಣೊಬ್ಬಳ ಒಳತೋಟಿಗೆ ಕಣ್ಣಾದ ಆ ಕಥನವೀಗ ಬ್ರಹ್ಮಕಮಲ ಎಂಬ ಶೀರ್ಷಿಕೆಯೊಂದಿಗೆ ಬಿಡುಗಡೆಗೆ ಅಣಿಗೊಂಡಿದೆ. ಇದೀಗ ಈ ಸಿನಿಮಾದ ಟ್ರೈಲರ್ ಬಿಡುಗಡೆಗೊಂಡು, ಪ್ರೇಕ್ಷಕರ ವಲಯದಲ್ಲಿ ಚರ್ಚೆಗೆ ಅನುವು ಮಾಡಿಕೊಟ್ಟಿದೆ.

ಸಾಮಾನ್ಯವಾಗಿ ಜನಪ್ರಿಯ ಅಲೆಗಳ ಸುತ್ತಲೇ ಸಿನಿಮಾ ನಿರ್ಮಾತೃಗಳ, ಪ್ರೇಕ್ಷಕರ ಚಿತ್ತ ನೆಟ್ಟಿರುತ್ತದೆ. ಆದರೆ, ಅದರ ಜೊತೆಜೊತೆಗೇ ಹೊಸಾ ಅಲೋಚನೆಯ, ಭಿನ್ನ ಕಥನಗಳು ಹುರಿಗೊಳ್ಳದಿದ್ದರೆ ಸಿನಿಮಾ ರಂಗ ನಿಂತ ನೀರಾಗುವ ಅಪಾಯವಿದೆ. ಅಂಥಾ ಅಪಾಯವೊಂದನ್ನು ದಾಟಿಕೊಳ್ಳುವ ವಾಹಕವಾಗಿ ಬ್ರಹ್ಮಕಮಲ ಚಿತ್ರದ ಟ್ರೈಲರ್ ಇದೀಗ ಚರ್ಚೆ ಹುಟ್ಟು ಹಾಕಿದೆ. ಹೆಣ್ಣು ಸಂಸಾರದ ಕಣ್ಣು ಎಂಬುದು ಪ್ರಸಿದ್ಧ ನಾಣ್ಣುಡಿ. ಆದರೆ, ಆ ಕಣ್ಣಲ್ಲಿ ಜಿನುಗುವ ಸುಪ್ತ ನೋವುಗಳನ್ನು ಗ್ರಹಿಸುವ ವ್ಯವಧಾನ ಈ ಸಮಾಜಕ್ಕಿದ್ದಂತಿಲ್ಲ. ಅಂಥಾದ್ದೊಂದು ಸೂಕ್ಷ್ಮ ಕಥನದೊಂದಿಗೆ ಈ ಸಿನಿಮಾವನ್ನು ಸಿದ್ದು ಪೂರ್ಣಚಂದ್ರ ರೂಪಿಸಿದ್ದಾರಂತೆ. ಅದರ ಸೂಕ್ಷ್ಮ ಅಂಶಗಳು ಸದರಿ ಟ್ರೈಲರ್ ಮೂಲಕ ಪ್ರೇಕ್ಷಕರನ್ನು ತಲುಪಿಕೊಂಡಿವೆ.ನಮ್ಮಲ್ಲಿನ ಕೌಟುಂಬಿಕ ವ್ಯವಸ್ಥೆಯಲ್ಲಿ ಘಟಿಸುವ ಒಂದು ರಾತ್ರಿಯ ಕಥೆ ಬ್ರಹ್ಮಕಮಲವಾಗಿ ಪ್ರೇಕ್ಷಕರನ್ನು ಮುಖಾಮುಖಿಯಾಗುವ ಸನ್ನಾಹದಲ್ಲಿದೆ. ಈಗಾಗಲೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಬ್ರಹ್ಮ ಕಮಲಕ್ಕೆ ಭರಪೂರ ಮೆಚ್ಚುಗೆ ಸಿಕ್ಕಿದೆ. ಪ್ರೇಕ್ಷಕರ ಒತ್ತಾಯದ ಮೇರೆಗೆ ಮೂರು ಮೂರು ಪ್ರದರ್ಶನಗಳನ್ನು ಕಂಡಿದೆ. ಇಂಥಾ ಚಿತ್ರವೀಗ ಟ್ರೈಲರ್ ಮೂಲಕ ಸದ್ದು ಮಾಡಲಾರಂಭಿಸಿದೆ.

ಕಥೆ, ಚಿತ್ರಕಥೆ, ಸಂಭಾಷಣೆಯೊಂದಿಗೆ ಸಿದ್ದು ಪೂರ್ಣಚಂದ್ರ ನಿರ್ದೇಶನ ಮಾಡಿರುವ ಈ ಸಿನಿಮಾ ಪೂರ್ಣ ಚಂದ್ರ ಫಿಲಂಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿದೆ. ಅದ್ವಿತಿ ಶೆಟ್ಟಿ, ಋತು ಚೈತ್ರ, ಲೋಕೇಂದ್ರ ಸೂರ್ಯ, ಬಾಲ ರಾಜ್ವಾಡಿ, ಮಮತಾ ರಾಹುತ್, ಪ್ರಮೀಳಾ ಸುಬ್ರಮಣ್ಯ ಮುಂತಾದವರ ತಾರಾಗಣ ಈ ಚಿತ್ರಕ್ಕಿದೆ. ಲೋಕೇಂದ್ರ ಸೂರ್ಯ ಛಾಯಾಗ್ರಹಣ, ಅನಂತ್ ಆರ್ಯನ್ ಸಂಗೀತ ನಿರ್ದೇಶನ, ದೀಪು ಸಂಕಲನ, ನಾಗರತ್ನ ಕೆ.ಹೆಚ್ ನಿರ್ಮಾಣ ನಿರ್ವಹಣೆಯಲ್ಲಿ ಬ್ರಹ್ಮಕಮಲ ರೂಪುಗೊಂಡಿದೆ. ಪುಟ್ಟರಾಜು ಮತ್ತು ಪ್ರಮೀಳಾ ಸುಬ್ರಮಣ್ಯ ಕಾರ್ಯಕಾರಿ ನಿರ್ಮಾಪಕರಾಗಿ ಜೊತೆಯಾಗಿದ್ದಾರೆ. ಈ ಚಿತ್ರದ ಬಿಡುಗಡೆ ದಿನಾಂಕ ಶೀಘ್ರದಲ್ಲಿಯೇ ಜಾಹೀರಾಗಲಿದೆ.

# 'ಅನಿರೀಕ್ಷಿತ ಅತಿಥಿಗಳು' ಸೆನ್ಸಾರ್ ಓಕೆ



ವಿವೇಕ್ ಸಿಂಹ ಅಭಿನಯದ 'ಅನಿರೀಕ್ಷಿತ ಅತಿಥಿಗಳು' ಚಿತ್ರವು ಸೆನ್ಸಾರ್ ಪ್ರಕ್ರಿಯೆಯಲ್ಲಿದ್ದ ಎಲ್ಲಾ ಅಡೆತಡೆಗಳನ್ನು ಯಶಸ್ವಿಯಾಗಿ ದಾಟಿ, ಇದೀಗ ಸೆಪ್ಟೆಂಬರ್ ನಲ್ಲಿ ಚಿತ್ರಮಂದಿರಗಳಿಗೆ ಆಗಮಿಸಲು ಸಜ್ಜಾಗಿದೆ.

ಮನೋಜ್ ಅಣ್ಣಯ್ಯ ನಿರ್ದೇಶನ, ಬಿ. ವಿನೋದ್ ಕುಮಾರ್ ನಿರ್ಮಿಸಿರುವ ತೇಜ್ವಿನ್ ಪ್ರೊಡಕ್ಷನ್ಸ್ ಬ್ಯಾನರ್‌ನಡಿ ಮೂಡಿಬಂದಿರುವ ಈ ಚಿತ್ರಕ್ಕೆ ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿ 'ಎ' ಪ್ರಮಾಣಪತ್ರ ನೀಡಿದೆ. ಹಿಂಸಾತ್ಮಕ ದೃಶ್ಯಗಳಿಗೆ ಸಂಬಂಧಿಸಿದಂತೆ ಕೆಲ ಬದಲಾವಣೆಗಳನ್ನು ಸೂಚಿಸಿದ್ದ ಸೆನ್ಸಾರ್ ಸಮಿತಿಯ ನಿರ್ದೇಶನಗಳನ್ನು ಪಾಲಿಸಿದ ಬಳಿಕ ಚಿತ್ರಕ್ಕೆ ಅಂತಿಮ ಪ್ರಮಾಣಪತ್ರ ಲಭಿಸಿದೆ.

"ಕೊನೆಗೂ ನಮ್ಮ ಚಿತ್ರದ ಸೆನ್ಸಾರ್ ಪ್ರಕ್ರಿಯೆ ಪೂರ್ಣಗೊಂಡಿರುವುದಕ್ಕೆ ತುಂಬಾ ಸಂತೋಷವಾಗಿದೆ. ಚಿತ್ರಕ್ಕೆ ಸಿಬಿಎಫ್‌ಸಿ 'ಎ' ಪ್ರಮಾಣಪತ್ರ ನೀಡಿದೆ. ಚಿತ್ರದ ಹಿಂಸಾತ್ಮಕ ದೃಶ್ಯಗಳಿಗೆ ಸಂಬಂಧಿಸಿದಂತೆ ಕೆಲವು ದೃಶ್ಯಗಳನ್ನು ತೆಗೆದುಹಾಕುವಂತೆ ಸಮಿತಿ ಸೂಚಿಸಿತ್ತು. ಆ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಈಗ ಪ್ರಮಾಣಪತ್ರ ಸಿಕ್ಕಿರುವುದು ಖುಷಿಯ ವಿಚಾರ. ಈ ಸಸ್ಪೆನ್ಸ್ ಥ್ರಿಲ್ಲರ್ ಚಿತ್ರವನ್ನು ಶೀಘ್ರದಲ್ಲೇ ಪ್ರೇಕ್ಷಕರು ಚಿತ್ರಮಂದಿರದಲ್ಲೇ ಅನುಭವಿಸಲಿ ಎಂಬುದು ನಮ್ಮ ಆಶಯ." ಎಂದು ಹೇಳಿದರು. ಚಿತ್ರದ ನಿರ್ಮಾಪಕ ಬಿ. ವಿನೋದ್ ಕುಮಾರ್ ಮಾತನಾಡಿ, ಸೆನ್ಸಾರ್ ಪ್ರಕ್ರಿಯೆ ತಂಡಕ್ಕೆ ಸಾಕಷ್ಟು ಪಾಠ ಕಲಿಸಿತು ಎಂದು ಹೇಳಿದರು.

"ಸೆನ್ಸಾರ್ ಪ್ರಕ್ರಿಯೆ ನಮ್ಮ ತಂಡಕ್ಕೆ ನಿಜವಾಗಿಯೂ ಕಠಿಣವಾಗಿತ್ತು. ಯಾವುದೇ ಸಿನಿಮಾ ಮಾಡಿದರೂ ಅಂತಿಮ ನಿರ್ಧಾರ ಸಿಬಿಎಫ್‌ಸಿಯ ಕೈಯಲ್ಲಿರುತ್ತದೆ ಎಂಬ ಅರಿವು ಈ ಪ್ರಕ್ರಿಯೆಯಿಂದ ನಮಗೆ ಇನ್ನಷ್ಟು ಸ್ಪಷ್ಟವಾಯಿತು."

ಇದೇ ವೇಳೆ, ಇಂದಿನ ಕಾಲಘಟ್ಟದಲ್ಲಿ ಚಿತ್ರ ನಿರ್ಮಾಪಕರಿಗೆ ಸಿಬಿಎಫ್‌ಸಿ ಮಾರ್ಗಸೂಚಿಗಳು ಇನ್ನಷ್ಟು ಸ್ಪಷ್ಟವಾಗಿ ತಿಳಿಯುವಂತಾಗಬೇಕು ಎಂಬ ಅಭಿಪ್ರಾಯವನ್ನೂ ವಿನೋದ್ ಕುಮಾರ್ ವ್ಯಕ್ತಪಡಿಸಿದರು.

ಚಿತ್ರದ ಕಥಾವಸ್ತುವಿನ ಬಗ್ಗೆ ಮಾತನಾಡಿದ ನಿರ್ದೇಶಕ ಮನೋಜ್ ಅಣ್ಣಯ್ಯ,

"'ಅನಿರೀಕ್ಷಿತ ಅತಿಥಿಗಳು' ಕೇವಲ ಸರ್ವೈವಲ್ ಥ್ರಿಲ್ಲರ್ ಮಾತ್ರವಲ್ಲ. ಇದು ಒಂದು ಪ್ರೇಮಕಥೆಯೂ ಹೌದು. ಕಥೆ ತುಂಬಾ ರಾ, ಕ್ರೂರ ಮತ್ತು ಭಾವನಾತ್ಮಕವಾಗಿದೆ. ವಿಶೇಷವಾಗಿ ವಿವೇಕ್ ಸಿಂಹ ಅವರ ಅಭಿನಯ ಚಿತ್ರದ ದೊಡ್ಡ ಆಕರ್ಷಣೆಯಾಗಿದ್ದು, ಸಿನಿಮಾ ಬಿಡುಗಡೆಯಾದ ಬಳಿಕ ಅವರ ಅಭಿನಯವೇ ಎಲ್ಲರ ಚರ್ಚೆಯ ವಿಷಯವಾಗಲಿದೆ." ಎಂದು ವಿಶ್ವಾಸ ವ್ಯಕ್ತಪಡಿಸಿದರು. ಚಿತ್ರತಂಡ ಮೊದಲಿಗೆ ಜುಲೈ ಅಂತ್ಯದಲ್ಲಿ ಬಿಡುಗಡೆಯನ್ನು ಯೋಜಿಸಿತ್ತು. ಆದರೆ 'ಟಾಕ್ಸಿಕ್' ಚಿತ್ರದ ಬಿಡುಗಡೆಯ ದಿನಾಂಕ ಘೋಷಣೆಯಾದ ಬಳಿಕ ತಮ್ಮ ಬಿಡುಗಡೆಯನ್ನು ಸೆಪ್ಟೆಂಬರ್‌ಗೆ ಮುಂದೂಡಲು ನಿರ್ಧರಿಸಿತು.

ಈ ಕುರಿತು ನಿರ್ಮಾಪಕ ವಿನೋದ್ ಕುಮಾರ್, "ಮೊದಲಿಗೆ ಜುಲೈ ಅಂತ್ಯದಲ್ಲಿ ಸಿನಿಮಾ ಬಿಡುಗಡೆ ಮಾಡುವ ಯೋಜನೆ ಇತ್ತು. ಆದರೆ 'ಟಾಕ್ಸಿಕ್' ಬಿಡುಗಡೆಯ ದಿನಾಂಕ ಘೋಷಣೆಯಾದ ನಂತರ ನಾವು ಸೆಪ್ಟೆಂಬರ್‌ಗೆ ಬಿಡುಗಡೆ ಮುಂದೂಡಲು ನಿರ್ಧರಿಸಿದೆವು. 'ಟಾಕ್ಸಿಕ್' ಬಿಡುಗಡೆಯ ಬಳಿಕ ಕನ್ನಡ ಪ್ರೇಕ್ಷಕರು ಇನ್ನಷ್ಟು ಸಂಖ್ಯೆಯಲ್ಲಿ ಚಿತ್ರಮಂದಿರಗಳಿಗೆ ಆಗಮಿಸುತ್ತಾರೆ ಎಂಬ ವಿಶ್ವಾಸ ನಮ್ಮದು." ಎಂದು ಹೇಳಿದರು.

ಸೆನ್ಸಾರ್ ಹಂತವನ್ನು ಯಶಸ್ವಿಯಾಗಿ ಮುಗಿಸಿರುವ 'ಅನಿರೀಕ್ಷಿತ ಅತಿಥಿಗಳು' ಇದೀಗ ತನ್ನ ಬಿಡುಗಡೆಯತ್ತ ಸಂಪೂರ್ಣ ಗಮನ ಹರಿಸಿದೆ. ಸರ್ವೈವಲ್ ಥ್ರಿಲ್ಲರ್, ಪ್ರೇಮಕಥೆ ಮತ್ತು ತೀವ್ರ ಭಾವನೆಗಳ ಸಂಯೋಜನೆಯಾಗಿರುವ ಈ ಚಿತ್ರವು ಕನ್ನಡ ಚಿತ್ರರಂಗದಲ್ಲಿ ತನ್ನದೇ ಆದ ಛಾಪು ಮೂಡಿಸುವ ನಿರೀಕ್ಷೆಯಿದೆ.



# ಲವ್ ಸೀಸನ್ಸ್ ಚಿತ್ರಕ್ಕೆ ಇಪ್ಪತ್ತೈದರ ಸಂಭ್ರಮ!

ಎನ್.ಆರ್ ಮಂಜುನಾಥ (ನೀಲೇರಿ) ನಿರ್ಮಾಣ ಮತ್ತು ಕೃತ್ವಿಕ್ ನಿರ್ದೇಶನದಲ್ಲಿ ಮೂಡಿ ಬಂದಿರುವ "ಲವ್ ಸೀಸನ್ಸ್" ಚಿತ್ರ ಯಶಸ್ವಿಯಾಗಿ ಇಪ್ಪತ್ತೈದು ದಿನಗಳನ್ನು ಪೂರೈಸಿಕೊಂಡಿದೆ. ರಂಗಭೂಮಿ ಹಿನ್ನೆಲೆಯ ಹೊಸಬರ ತಂಡದಿಂದ ರೂಪುಗೊಂಡಿದ್ದ ಲವ್ ಸೀಸನ್ಸ್ ಒಂದಷ್ಟು ಅಡೆತಡೆಗಳನ್ನು ದಾಟಿಕೊಂಡು, ತನ್ನೊಳಗಿನ ಕಂಟೆಂಟಿನ ಕಸುವಿನಿಂದಲೇ ಪ್ರೇಕ್ಷಕರನ್ನು ಸೆಳೆದುಕೊಂಡಿತ್ತು. ಬಾಯಿಂದ ಬಾಯಿಗೆ ಹಬ್ಬಿದ ಒಳ್ಳೆ ಅಭಿಪ್ರಾಯಗಳಿಂದಲೇ ಇಪ್ಪತ್ತೈದು ದಿನಗಳ ಮೈಲಿಗಲ್ಲು ದಾಟಿಕೊಂಡಿರುವ ಈ ಘಳಿಗೆಯಲ್ಲಿ, ಬೆಂಬಲ ನೀಡಿ ಪ್ರೋತ್ಸಾಹಿಸಿದ, ನೋಡಿ ಹರಸಿದ ಎಲ್ಲರಿಗೂ ಚಿತ್ರತಂಡ ಧನ್ಯವಾದ ಸಮರ್ಪಿಸಿದೆ.

ಜುಲೈ ತಿಂಗಳ 3ನೇ ತಾರೀಕಿನಂದು ಲವ್ ಸೀಸನ್ಸ್ ಚಿತ್ರ ಬಿಡುಗಡೆಗೊಂಡಿತ್ತು. ಭಿನ್ನ ಪರಿಭಾಷೆಯ ಪ್ರೇಮಕಥೆ ಮತ್ತು ಅದಕ್ಕೆ ದೃಶ್ಯರೂಪ ನೀಡಿರುವ ಪರಿಯನ್ನು ನೋಡುಗರು ಮೊದಲ ದಿನದಿಂದಲೇ ಮೆಚ್ಚಿಕೊಂಡಿದ್ದರು. ಆ ನಂತರದಲ್ಲಿ ಸಾಕಷ್ಟು ಸವಾಲುಗಳೆದುರಾದರೂ ಕೂಡಾ, ಚಿತ್ರತಂಡ ಕ್ರಿಯಾಶೀಲ ಹಾದಿಯಲ್ಲಿಯೇ ಎದುರಿಸುತ್ತಾ ಸಾಗಿತ್ತು. ಸಿನಿಮಾ ರಂಗದ ಕಡೆಯಿಂದಲೂ ಬೆಂಬಲ ಲಭಿಸಿ, ನೋಡುಗರ ಕಡೆಯಿಂದ ಹೊಮ್ಮಲಾರಂಭಿಸಿದ್ದ ಸದಭಿಪ್ರಾಯಗಳಿಂದಲೇ ಯಶಸ್ವೀ ಪ್ರದರ್ಶನ ಸಾಧ್ಯವಾಗಿತ್ತು. ಇದೆಲ್ಲದರ ಫಲವೆಂಬಂತೆ ಲವ್ ಸೀಸನ್ಸ್ ಚಿತ್ರತಂಡವನ್ನೀಗ ಇಪ್ಪತ್ತೈದು ದಿನಗಳನ್ನು ದಾಟಿಕೊಂಡ ಸಂಭ್ರಮ ಆವರಿಸಿಕೊಂಡಿದೆ.

ಇಂದಿನ ವಾತಾವರಣದಲ್ಲಿ ಯಾವುದೇ ಸಿನಿಮಾ ಇಪ್ಪತ್ತೈದು ದಿನಗಳ ಗಡಿ ದಾಟಿಕೊಳ್ಳೋದು ಸಾಹಸವೆಂಬಂತಿದೆ. ಅಂಥಾದ್ದರಲ್ಲಿ ಹೊಸಬರೇ ತುಂಬಿಕೊಂಡಿರುವ ಲವ್ ಸೀಸನ್ಸ್ ಆ ಹಂತವನ್ನು ತಲುಪಿಕೊಂಡಿರುವುದು ಚಿತ್ರರಂಗದ ಪಾಲಿಗೆ ಸಕಾರಾತ್ಮಕ ಬೆಳವಣಿಗೆ. ಎನ್.ಆರ್ ಮಂಜುನಾಥ (ನೀಲೇರಿ) ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕೃತ್ವಿಕ್ ನಿರ್ದೇಶನ, ವೀರ್ ಸಮರ್ಥ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ. ಕೆ.ಕಲ್ಯಾಣ್, ಪ್ರಮೋದ್ ಮರವಂತೆ ಮುಂತಾದವರು ಸಾಹಿತ್ಯ ಬರೆದಿದ್ದಾರೆ. ಅವಿನಾಶ ಶಾಸ್ತ್ರಿ ಛಾಯಾಗ್ರಹಣ, ಮಧು ತುಂಬಾಕೆರೆ ಸಂಕಲನ, ಭಜರಂಗಿ ಮೋಹನ್ ನೃತ್ಯ ಸಂಯೋಜನೆಯಿರುವ ಈ ಚಿತ್ರದಲ್ಲಿ ಮುಕುಂದ ರಾಮಸ್ವಾಮಿ ನಾಯಕನಾಗಿ ನಟಿಸಿದ್ದಾರೆ. ದಿಯಾ ಕೀರ್ತಿ, ಚಂದನಾ ಗೌಡ ಮತ್ತು ಶ್ವೇತಾ ಕೊಗ್ಗೂರು ನಾಯಕಿಯರಾಗಿ ಜೊತೆಯಾಗಿದ್ದಾರೆ. ಮಂಡ್ಯ ರಮೇಶ್, ರಾಜೇಶ್ ನಟರಂಗ, ಸಂಗೀತ ಅನಿಲ್, ಜಯತೀರ್ಥ, ಚೇತನ್ ದುರ್ಗ, ಕಾಮಿಡಿ ಕಿಲಾಡಿ ಸದಾನಂದ, ಹುಲಿ ಕಾರ್ತಿಕ್, ಬೇಬಿ ರಿತು ಸಿಂಗ್ ಮುಂತಾದವರ ತಾರಾಗಣವಿದೆ.

# ಭಾವಾಂತರ ಹಾಡು ರಿಲೀಸ್



ಕನ್ನಡ ಚಿತ್ರರಂಗದಲ್ಲಿ ಬಾಲನಟನಾಗಿ ಹಾಗೂ ಸಂಗೀತ ನಿರ್ದೇಶಕನಾಗಿ ಗುರುತಿಸಿಕೊಂಡಿರುವ ಬಹುಮುಖ ಪ್ರತಿಭೆ ಕಾರ್ತಿಕ್ ಶರ್ಮಾ ಈಗ ?ಭಾವಾಂತರ? ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕನಾಗಿ ಬಡ್ತಿ ಪಡೆದಿದ್ದಾರೆ.

ಈ ಸಿನಿಮಾದ ?ಮೊದಮೊದಲಿದು? ಎಂಬ ಮೆಲೋಡಿ ಹಾಡು ಇತ್ತೀಚೆಗೆ ?ಹೊಂಬಾಳೆ ಮ್ಯೂಸಿಕ್? ಆಡಿಯೋ ಮೂಲಕ ಬಿಡುಗಡೆ ಆಗಿದೆ.

ವಾಸುಕಿ ವೈಭವ್ ಸಾಹಿತ್ಯ ಬರೆದಿದ್ದು, ಸಿದ್ಧಾರ್ಥ ಬೆಳ್ಮಣ್ಣು ಹಾಗೂ ಐಶ್ವರ್ಯ ರಂಗರಾಜನ್ ಹಾಡಿದ್ದಾರೆ. ನೈಜ ಘಟನೆಗಳಿಂದ ಪ್ರೇರಿತವಾದ ಈ ಕಥಾಹಂದರಕ್ಕೆ ಕಾರ್ತಿಕ್ ಶರ್ಮಾ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿದ್ದಾರೆ.

ಚಿತ್ರೀಕರಣ ಮುಗಿಸಿಕೊಂಡಿರುವ ?ಭಾವಾಂತರ? ತಂಡ ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ನಿರತವಾಗಿದೆ. ಶೀಘ್ರದಲ್ಲೇ ಬೆಳ್ಳಿಪರದೆಗೆ ಬರಲು ಸಜ್ಜಾಗಿದೆ. ಕರಾವಳಿಯ ಉಡುಪಿ, ಬೆಂಗಳೂರು ಹಾಗೂ ತಮಿಳುನಾಡಿನ ಸುಂದರ ತಾಣಗಳಲ್ಲಿ ಸಿನಿಮಾದ ಚಿತ್ರೀಕರಣ ನಡೆಸಲಾಗಿದೆ. ?ಕಿಕ್ ಮೀಡಿಯಾ? ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಈ ಚಿತ್ರದಲ್ಲಿ ಕಾರ್ತಿಕ್ ಶರ್ಮಾ ಅವರಿಗೆ ಜೋಡಿಯಾಗಿ ಖ್ಯಾತ ನಟಿ ತನ್ವಿ ರಾವ್ ಮುಖ್ಯ ಭೂಮಿಕೆಯಲ್ಲಿ ನಟಿಸಿದ್ದಾರೆ. ಜೊತೆಗೆ ಪ್ರಣವ್ ಶ್ರೀಧರ್, ಶ್ರೀವೈಷ್ಣವ್, ವೇದ ರಾವ್ ಮತ್ತು ಭಾನು ಮುಂತಾದವರ ತಾರಾಗಣ ಇದೆ.

ಬಸವನಗುಡಿ ಮಲ್ಲಿಕಾರ್ಜುನ ದೇವಸ್ಥಾನಕ್ಕೆ ಪ್ರಣಯ ರಾಜ ಶ್ರೀನಾಥ್ ತಮ್ಮ ಪತ್ನಿ ಗೀತಾ ಅವರೊಡನೆ ತೆರಳಿ ವಿಶೇಷ ಪೂಜೆ ಮಾಡಿಸಿದ್ದು ಕ್ಯಾಮರಾದಲ್ಲಿ ಸೆರೆ ಆಯಿತು..

ಪ್ರಸಾದ ಮೆಲ್ಲುತ್ತಾ ಮೆಲ್ಲಗೆ ಶ್ರೀನಾಥ್ ಹೇಳುದರು.. ನಾನು ಬಣ್ಣ ಹಚ್ಚಿ ಪುಟ್ಟ ನಾಟಕವೊಂದರಲ್ಲಿ ಶಿವನ ಪಾತ್ರ ಮಾಡಿ 70 ವರ್ಷ ಆಯಿತು. ಆ ನಾಟಕ ನಡೆದದ್ದು ಇದೇ ಜಗಲಿಯ ಮೇಲೆ.. ಈ ಎದುರು ಕಾಣುವ ದೊಡ್ಡ ಮನೆ ಮೊದಲು ನಾಲ್ಕಾರು ಮನೆಗಳ ವಠಾರ ಆಗಿತ್ತು.. ಮೇಲಿನ ಮನೆಯಲ್ಲಿ ನಮ್ಮ ಅಪ್ಪ, ಅಮ್ಮ, ಅಣ್ಣ, ನಾನು ಇದ್ದ ದಿನಗಳದು... ಶ್ರೀನಾಥರ ನೆನಪು 70 ವರ್ಷ ಗಳ ಹಿಂದೆ ಓಡಿತ್ತು... ಅದೆಲ್ಲಾ ಮತ್ತೊಮ್ಮೆ ದಾಖಲಿಸುವೆ...



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,